ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 174 ಸಂಚಿಕೆ- 174 | PAGE-8 ಪುಟ-8 | ಗುರುವಾರ 21.08.2025 | RS.2/- ಬೆಲೆ 2/-

# ಪದಚ್ಯುತಿ ಮಸೂದೆ ಮಂಡನೆ

## ಬಿಲ್ ಪ್ರತಿ ಹರಿದು ಅಮಿತ್ ಶಾ ಮೇಲೆ ಎಸೆದ ವಿಪಕ್ಷ ಸದಸ್ಯರು



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.20: ಗಂಭೀರ ಕ್ರಿಮಿನಲ್ ಆರೋಪಗಳ ಮೇಲೆ ಕನಿಷ್ಠ ಐದು ವರ್ಷಗಳ ಜೈಲು ಶಿಕ್ಷೆಗೆ ಅರ್ಹವಾದ ಅಪರಾಧಗಳಲ್ಲಿ ಬಂಧನಕ್ಕೊಳಗಾಗಿ, ಸತತ 30 ದಿನಗಳ ಕಾಲ ನ್ಯಾಯಾಂಗ ಬಂಧನದಲ್ಲಿರುವ ಪ್ರಧಾನ ಮಂತ್ರಿ, ಮುಖ್ಯಮಂತ್ರಿಗಳು ಮತ್ತು ಸಚಿವರನ್ನು ಅವರ ಹುದ್ದೆಯಿಂದ ತೆಗೆದುಹಾಕುವ ಮೂರು ಮಸೂದೆಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಲೋಕಸಭೆಯಲ್ಲಿ ಇಂದು ಮಂಡಿಸಿದರು.

ಸಚಿವರು ವಿಧೇಯಕ ಮಂಡಿಸುತ್ತಿದ್ದಂತೆ ವಿರೋಧ ಪಕ್ಷದ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕೆಲವರು ಮಸೂದೆಗಳ ಪ್ರತಿಗಳನ್ನು ಹರಿದು ಹಾಕಿ ಅಮಿತ್ ಶಾ ಮೇಲೆ ಎಸೆದರು. ಎಐಎಂಐಎಂನ ಅಸಾದುದ್ದೀನ್ ಓವೈಸಿ ಮತ್ತು ಕಾಂಗ್ರೆಸ್‌ನ ಮನೀಷ್ ತಿವಾರಿ ಮತ್ತು ಕೆ ಸಿ ವೇಣುಗೋಪಾಲ್ ಸೇರಿದಂತೆ ಸೇರಿದಂತೆ ಹಲವು ವಿರೋಧ ಪಕ್ಷಗಳ ಸದಸ್ಯರು ಮಸೂದೆ ವಿರುದ್ಧ ಮಾತನಾಡಿದರು. ಉದ್ದೇಶಿತ ವಿಧೇಯಕ ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು.

ತರಾತುರಿಯಲ್ಲಿ ಮಸೂದೆ ಮಂಡಿಸಲಾಗುತ್ತಿದೆ ಎಂಬ ಟೀಕೆಗಳನ್ನು ತಳ್ಳಿಹಾಕಿದ ಅಮಿತ್ ಶಾ, ಅವುಗಳನ್ನು ಸಂಸತ್ತಿನ ಜಂಟಿ ಸಮಿತಿಗೆ ಕಳುಹಿಸಲಾಗುವುದು, ಅಲ್ಲಿ ಪ್ರತಿಪಕ್ಷಗಳು ಸೇರಿದಂತೆ ಉಭಯ ಸದನಗಳ ಸದಸ್ಯರು ತಮ್ಮ ಸಲಹೆಗಳನ್ನು ನೀಡಲು ಅವಕಾಶವಿದೆ ಎಂದು ಹೇಳಿದರು.

ಅಮಿತ್ ಶಾ ಗುಜರಾತ್ ನಲ್ಲಿ ಗೃಹ ಸಚಿವರಾಗಿದ್ದಾಗ ಆಗಿದ್ದ ಬಂಧನ ವಿಚಾರವನ್ನು ಪ್ರಸ್ತಾಪಿಸಿದ ವೇಣುಗೋಪಾಲ್, ರಾಜಕೀಯದಲ್ಲಿ ಅವರನ್ನೈತಿಕತೆಯನ್ನು ಪ್ರಶ್ನಿಸುತ್ತಿದ್ದಂತೆಯೇ ಅವರಿಗೆ ತಿರುಗೇಟು ನೀಡಿದ ಹಿರಿಯ ಬಿಜೆಪಿ ನಾಯಕರು, ಅಮಿತ್ ಶಾ ಬಂಧನಕ್ಕೂ ಮೊದಲೇ ನೈತಿ-ಕತೆ ಹಿನ್ನೆಲೆಯಲ್ಲಿ ರಾಜೀನಾಮೆ ನೀಡಿದ್ದರು.

ಆರೋಪ ಮುಕ್ತರಾದ ನಂತರವೇ ಸರ್ಕಾರಕ್ಕೆ ಸೇರಿಕೊಂಡರು ಎಂದು ವಿರೋಧ ಪಕ್ಷಗಳ ವಿರುದ್ಧ ಮುಗಿಬಿದ್ದರು.

ಗಂಭೀರ ಆರೋಪ ಎದುರಿಸುತ್ತಿದ್ದರೂ ಸಂವಿಧಾನಿಕ ಹುದ್ದೆಯಲ್ಲಿ ನಾಚಿಕೆಯಿಲ್ಲದೆ ನಾವು ಮುಂದುವರೆಯುವುದಿಲ್ಲ ಎಂದು ಅಮಿತ್ ಶಾ ಹೇಳಿದರು. ವಿರುದ್ಧ ಪಕ್ಷಗಳ ಗದ್ದಲ, ಪ್ರತಿಭಟನೆ ಹಿನ್ನೆಲೆಯಲ್ಲಿ ಲೋಕಸಭೆ ಕಲಾಪವನ್ನು ಮುಂದೂಡಲಾಯಿತು.

## ಉಪರಾಷ್ಟ್ರಪತಿ ಚುನಾವಣೆ: ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.20: ಸೆ.9ರಂದು ನಡೆಯಲಿರುವ ಉಪರಾಷ್ಟ್ರಪತಿ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಅವರಿಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವರ ಸಮ್ಮುಖದಲ್ಲಿ ನಾಮಪತ್ರ ಸಲ್ಲಿಸಿದ್ದಾರೆ. ಅಲ್ಲದೇ ಇದು ಎನ್‌ಡಿಎ ಕೂಟದ ಒಗ್ಗಟಿನ ಪ್ರದರ್ಶನವೂ ಆಗಿದೆ.

ಮಹಾರಾಷ್ಟ್ರದ ಹಾಲಿ ರಾಜ್ಯಪಾಲರು ಆಗಿರುವ ರಾಧಾಕೃಷ್ಣನ್ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸುವ ವೇಳೆ ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ

(2ನೇ ಪುಟ ನೋಡಿ)

## ಎಡಗೈ, ಬಲಗೈ ಸಮುದಾಯಕ್ಕೆ ತಲಾ ಶೇ. 6 ರಷ್ಟು ಒಳ ಮೀಸಲಾತಿ: ಸದನದಲ್ಲಿ ಸಿಎಂ ಘೋಷಣೆ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.20: ರಾಜ್ಯದ ದಲಿತ ಸಮುದಾಯದ ಬಹುಕಾಲದ ಬೇಡಿಕೆಯಾದ ಒಳ ಮೀಸಲಾತಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ಸರ್ಕಾರ ಸಿಹಿಸುದ್ದಿ ನೀಡಿದ್ದು, ಎಡಗೈ ಹಾಗೂ ಬಲಗೈ ಸಮುದಾಯಕ್ಕೆ ತಲಾ ಶೇ.6 ರಷ್ಟು ಮೀಸಲಾತಿ ಕಲ್ಪಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ ವಿಧಾನಸಭೆಯಲ್ಲಿ ಘೋಷಿಸಿದ್ದಾರೆ. ಇದರೊಂದಿಗೆ ದಲಿತರ ದಶಕಗಳ ಬೇಡಿಕೆ ಈಡೇರಿದೆ. ಇಂದು ವಿಧಾಸಭೆಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ನಿನ್ನೆ ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಒಳ ಮೀಸಲಾತಿ ಜಾರಿ ಬಗ್ಗೆ ಮಹತ್ವದ ನಿರ್ಣಯ ಕೈಗೊಳ್ಳಲಾಗಿದೆ. ಎಡಗೈ ಸಮುದಾಯಕ್ಕೆ ಶೇ. 6 ರಷ್ಟು, ಬಲ ಸಮುದಾಯಕ್ಕೆ ಶೇ. 6 ರಷ್ಟು ಹಾಗೂ ಸ್ಪೃಶ್ಯ ಸಮುದಾಯಕ್ಕೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲು ತೀರ್ಮಾನ ಮಾಡಲಾಗಿದೆ ಎಂದರು. ನ್ಯಾ.ನಾಗಮೋಹನ್ ದಾಸ್ ವರದಿಯ ಶಿಫಾರಸುಗಳನ್ನು ಕೆಲ ಮಾರ್ಪಾಡುಗಳೊಂದಿಗೆ ಒಳ ಮೀಸಲಾತಿ ಕಲ್ಪಿಸಲಾಗಿದೆ. A, B,

(2ನೇ ಪುಟ ನೋಡಿ)

## ಪ್ರವಾಹ ಪೀಡಿತ ಗ್ರಾಮಗಳಿಗೆ ಡಿಸಿ, ಸಿಇಓ ಭೇಟಿ ಮಿರ್ಜಿ ಗ್ರಾಮದಲ್ಲಿ ಕಾಳಜಿ ಕೇಂದ್ರ ಸ್ಥಾಪನೆ: ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.20-ಕಳೆದ ಕೆಲ ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಕೃಷ್ಣಾ, ಘಟಪ್ರಭಾ ಹಾಗೂ ಮಲಪ್ರಭಾ ನದಿಗಳ ನೀರಿನ ಮಟ್ಟ ಹೆಚ್ಚಾಗಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದ್ದು, ಮುಧೋಳ ತಾಲೂಕಿನ ಮಿರ್ಜಿ ಗ್ರಾಮದಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಮುಧೋಳ ತಾಲೂಕಿನ ಪ್ರವಾಹ ಪೀಡಿತ ಮಿರ್ಜಿ ಗ್ರಾಮಕ್ಕೆ ಬುಧವಾರ ಭೇಟಿ ನೀಡಿ ಮಾತನಾಡಿದ ಅವರು, ಮಿರ್ಜಿ ಗ್ರಾಮದ 12 ಕುಟುಂಬಗಳು ಬಾಧಿತಗೊಂಡಿದ್ದು, ಆ ಕುಟುಂಬದ 62 ಜನ ಸಂತ್ರಸ್ತರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿ, ಅಲ್ಲಿ ಊಟ, ವಸತಿ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಇನ್ನೂ ನೀರಿನ ಪ್ರಮಾಣ ಹೆಚ್ಚಾಗುತ್ತಿರುವದರಿಂದ ನದಿ ದಡದ ಗ್ರಾಮಗಳು ಬಾಧಿತವಾಗುವ ಸಾಧ್ಯತೆಯಿದ್ದು, ಈ ಬಗ್ಗೆ ಮುಂಜಾಗ್ರತ ಕ್ರಮವಾಗಿ ಗ್ರಾಮಸ್ಥರನ್ನು ಸುರಕ್ಷಿತ ಸ್ಥಳಗಳಿಗೆ ಇಲ್ಲವೇ ಜಿಲ್ಲಾಡಳಿತ ಸ್ಥಾಪಿಸಲಾದ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ

(2ನೇ ಪುಟ ನೋಡಿ)

## ಬಸ್ ಡಿಕ್ಕಿ; ಆರೋಗ್ಯ ಇಲಾಖೆಯ ಮಹಿಳಾ ಸಿಬ್ಬಂದಿ ಸಾವು



ಮಲ್ಲಮ್ಮ ನುಡಿ ವಾರ್ತೆ ಬೀದರ. ಆ. 20 : ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ನಡೆದು-ಕೊಂಡು ಹೋಗುತ್ತಿದ್ದ ಆರೋಗ್ಯ ಇಲಾಖೆಯ ಸಿಬ್ಬಂದಿಗೆ ಖಾಸಗಿ ಬಸ್ ಡಿಕ್ಕಿ ಹೊಡೆದಿದ್ದರಿಂದ ಅವರು ಸ್ಥಳದಲ್ಲೇ ಮೃತಪಟ್ಟ ಘಟನೆ ಬುದವಾರ ನಡೆದಿದೆ.

ನಗರದ ಗೌಳಿವಾಡ ಬಡಾವಣೆಯ ಭೀಮವ್ವಾ ಶಿವರಾಜ ಮಂಠಾಳೆ (56) ಮೃತ ಮಹಿಳೆ. ಮೃತರಿಗೆ

(2ನೇ ಪುಟ ನೋಡಿ)

## ಸಾಲ ಬಾಧೆ:ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಆ.20: ಸಾಲ ಬಾಧೆಗೆ ಒಳಗಾಗಿ ರೈತನೋರ್ವ ತೆರೆದ ಬಾವಿಯೊಳಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ತಾಲ್ಲೂಕಿನ ಫರತಾಬಾದ್ ಹೋಬಳಿ ವ್ಯಾಪ್ತಿಯ ಕೌಲಗಾ(ಬಿ) ಗ್ರಾಮದಲ್ಲಿ ಸಂಭವಿಸಿದೆ.

ಮೃತನನ್ನು ಹಣಮಂತ್ ತಂದೆ ಬಸವರಾಜ್ ಮೊಸಂಡಿ (35) ಎಂದು ಗುರುತಿಸಲಾಗಿದೆ.

ಹೊಲದಲ್ಲಿ ಇರುವ ಬಾವಿಯ ದಂಡಿಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡ ಶವವು ಪತ್ತೆಯಾಗಿದೆ. ರೈತ ಪತ್ನಿ ರಾಧಿಕಾ, ಆರು ವರ್ಷ ವಯಸ್ಸಿನ ಪುತ್ರ ಲಕ್ಷ್ಮಣ್ ಹಾಗೂ ಬಂಧು, ಬಳಗವನ್ನು ಬಿಟ್ಟು ಅಗಲಿದ್ದಾರೆ.

(2ನೇ ಪುಟ ನೋಡಿ)

## ಡಿ.ದೇವರಾಜ ಅರಸು ಯುವ ಪೀಳಿಗೆಗೆ ಪ್ರೇರಣಾ ಶಕ್ತಿ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ, ಅ 20 : ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರು ಯುವ ಪೀಳಿಗೆ ಪ್ರೇರಣಾ ಶಕ್ತಿಯಾಗಿದ್ದಾರೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು. ಅವರು ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಡಿ. ದೇವರಾಜ ಅರಸು ಅವರ 110ನೇ ಜನ್ಮ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಡಿ. ದೇವರಾಜ ಅರಸು ಅವರು ದೀನದಲಿತರ ಹಿಂದುಳಿದ ವರ್ಗಗಳ, ಬಡವರ ಪರವಾಗಿ ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ ಇತಿಹಾಸದಲ್ಲಿ ಶಾಶ್ವತವಾಗಿ ಉಳಿದಿದ್ದಾರೆ. ಅವರ

(2ನೇ ಪುಟ ನೋಡಿ)

## ಪರಿಸರ ಸ್ನೇಹಿ ಮಣ್ಣಿನ ಗಣಪ ಪ್ರತಿಷ್ಠಾಪಿಸಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಆ.20:ಸೂಫಿ-ಸಂತರನಾಡು ಕಲಬುರಗಿ ಶಾಂತಿ-ಸೌಹಾರ್ದತೆಗೆ ಹೆಸರುವಾಸಿಯಾಗಿದ್ದು, ಗಣೇಶ ಚತುರ್ಥಿ ಮತ್ತು ಮಿಲಾದ್ ಉನ್ ನಬಿ ಈದ್-ಎ-ಮಿಲಾದ್ ಹಬ್ಬ ಒಟ್ಟಾಗಿಯೆ ಬಂದಿರುವುದರಿಂದ ಎರಡು ಧರ್ಮೀಯರು ಸೌಹಾರ್ದಯುತವಾಗಿ ಹಬ್ಬ ಆಚರಿಸುವಂತೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಕರತೆ ನೀಡಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಾಂತಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಿ.ಓ.ಪಿ. ಗಣಪ ಬಳಸದೆ ಪರಿಸರ ಸ್ನೇಹಿ ಮಣ್ಣಿನ ಗಣಪತಿಯನ್ನು ಪ್ರತಿಷ್ಠಾಪಿಸುವ ಮೂಲಕ ಪರಿಸರ ಕಾಳಜಿ ಪ್ರದರ್ಶಿಸಬೇಕೆಂದ ಅವರು, ತಾಲೂಕಾ ಮಟ್ಟದಲ್ಲಿಯೂ ಸಹ 3 ದಿನಗಳ ಮುಂಚಿತವಾಗಿ ಇದೇ ರೀತಿಯ ಶಾಂತಿ ಸಭೆ ನಡೆಸಿ ಸಂಘ-ಸಂಸ್ಥೆಗಳಿಗೆ ಅಗತ್ಯ ಮಾಹಿತಿ ನೀಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಗಣೇಶ ಪ್ರತಿಷ್ಠಾನೆಗೆ ವಿವಿಧ ಇಲಾಖೆಗೆ ಪರವಾನಿಗೆ ಪಡೆಯಲು ಓಡಾಡುವುದನ್ನು ತಪ್ಪಿಸಲು ಪಟ್ಟಣ ಪ್ರದೇಶದಲ್ಲಿ ಸಿಂಗಲ್ ವಿಂಡೋ ಸಿಸ್ಟಮ್ ತೆರೆದು ಪರವಾನಿಗೆ ನೀಡಲಾಗುವುದು. ಡಿ.ಜೆ. ಬ್ಯಾನ್ ಇರುವುದರಿಂದ ಸರ್ಕಾರ ಮತು ನ್ಯಾಯಾಲಯದ ಆದೇಶದಂತೆ ಹೆಚ್ಚು ಶಬ್ದ ಹೊರಹಾಕುವ ಧ್ವನಿವರ್ಧಕ ಬಳಸಬಾರದು ಎಂದು ಹೇಳಿದರು.

ಕಲಬುರಗಿ ನಗರ ಮತ್ತು ಜಿಲ್ಲೆಯಾದ್ಯಂತ ಗಣಪನನ್ನು ವಿಸರ್ಜನೆ ಮಾಡುವ ಸ್ಥಳವನ್ನು ಮೊದಲೆ ಸಾರ್ವಜನಿಕರಿಗೆ ತಿಳಿಸಬೇಕು. ಗಣಪನ ಪೆಂಡಾಲ್ ಸುತ್ತಮುತ್ತ ಸ್ವಚ್ಛತೆ ಕಾಪಾಡಬೇಕು. ಮೆರವಣಿಗೆಯುದ್ದಕ್ಕೂ ವಿದ್ಯುತ್

(2ನೇ ಪುಟ ನೋಡಿ)


## ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಶ್ರಮಿಸಿದ ಧೀಮಂತ ನಾಯಕ ಡಿ. ದೇವರಾಜ ಅರಸು



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಆ 20 :ಮಾಜಿ ಮುಖ್ಯಮಂತ್ರಿಗಳಾದ ಡಿ. ದೇವರಾಜ ಅರಸು ಅವರು ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ ಧೀಮಂತ ನಾಯಕ. ಅವರ ಕಾರ್ಯಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನಸೌಧದ ಬ್ಯಾಕ್ವೆಂಟ್ ಹಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ

(2ನೇ ಪುಟ ನೋಡಿ)



ಹುಮನಾಬಾದ:ಪಟ್ಟಣದ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ಹುಲಸೂರೆ ಪರಿವಾರದಿಂದ ಶ್ರೀ ವೀರಭದ್ರೇಶ್ವರ ರುದ್ರಾಭೀಷೇಕ ಜರುಗಿತ್ತು. ಇದೇ ಸಂದರ್ಭದಲ್ಲಿ ದೇವಸ್ಥಾನದಲ್ಲಿ ಭಜನೆ ಮಂಡಳಿ ವತಿಯಿಂದ ಭಜನೆ ಕೀರ್ತನೆ ಜರುಗಿದ್ದವು. ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಶ್ರೀ ರೇಣುಕ ಗಂಗಾಧರ ಶಿವಚಾರ್ಯರು ಡಾ.ನಾಗನಾಥ ಹುಲಸೂರೆ ದಂಪತಿಗಳಿಗೆ ಶ್ರೀ ವೀರಭದ್ರೇಶ್ವರರ ಭಾವಚಿತ್ರ ನೀಡಿ ಆಶೀರ್ವಾದಿಸಿದರು. ಈ ಸಂದರ್ಭದಲ್ಲಿ ಶಾಂತಕುಮಾರ ಹುಲಸೂರೆ ದಂಪತಿಗಳು,ಮಹೇಶ,ಜ್ಯೋತಿಬಾ ಹಾಗೂ ಭಕ್ತಾಧಿಗಳಿದ್ದರು

## ಒಂದನೇ ಪುಟದಿಂದ

# ಸಿಪಿ ರಾಧಾಕೃಷ್ಣನ್ ನಾಮಪತ್ರ ಸಲ್ಲಿಕೆ

, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಆರೋಗ್ಯ ಸಚಿವ ಮತ್ತು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಮತ್ತು ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಉಪಸ್ಥಿತರಿದ್ದು ಬೆಂಬಲ ಸೂಚಿಸಿದ್ದಾರೆ. ಒಟ್ಟು 4 ಸೆಟ್ ಅರ್ಜಿಯನ್ನು ಅಲ್ಲಿಸಲಾಗಿದ್ದು, ಮೊದಲ ಸೆಟ್‌ನಲ್ಲಿ ದಾಖಲೆ ಸಲ್ಲಿಸುವ ವೇಳೆ ಮೋದಿ ಮುಖ್ಯ ಪ್ರತಿಪಾದಕರಾಗಿದ್ದರು.

ನಾಮಪತ್ರ ಸಲ್ಲಿಕೆಗೂ ಮುನ್ನ ರಾಧಾಕೃಷ್ಣನ್ ಅವರು ಸಂಸತ್ ಆವರಣದಲ್ಲಿರುವ ಮಹಾತ್ಮ ಗಾಂಧಿಯವರ ಪ್ರತಿಮೆ ನಮಸ್ಕರಿಸಿದರು. ಜೊತೆಗೆ ಮಹಾನ್ ವ್ಯಕ್ತಿಗಳ ಪುತ್ಥಳಿಗೆ ಗೌರವ ಸಲ್ಲಿಸಿದರು.

ಕಳೆದ ಭಾನುವಾರ ಸಿ.ಪಿ ರಾಧಾಕೃಷ್ಣನ್ ಅವರನ್ನ ಎನ್‌ಡಿಎ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಾಗಿತ್ತು. ಪಕ್ಷದ ಸಂಸದೀಯ ಮಂಡಳಿ ಸಭೆಯ ನಂತರ ಜೆ.ಪಿ. ನಡ್ಡಾ ಅವರು ಎನ್‌ಡಿಎ ಒಮ್ಮತದ ಅಭ್ಯರ್ಥಿಯಾಗಿ ಘೋಷಣೆ ಮಾಡಿದ್ದರು.

# ಒಳ ಮೀಸಲಾತಿ: ಸದನದಲ್ಲಿ ಸಿಎಂ ಘೋಷಣೆ

ಅ ಎಂದು ವರ್ಗೀಕರಣ ಮಾಡಿ ಮೀಸಲಾತಿ ಹಂಚಲಾಗಿದ್ದು, ಈ ಮೂಲಕ ದಶಗಳ ಹೋರಾಟಕ್ಕೆ ನಮ್ಮ ಸರ್ಕಾರ ನ್ಯಾಯ ಒದಗಿಸಿದೆ ಎಂದು ಸಿಎಂ ತಿಳಿಸಿದರು."ಒಳ ಮೀಸಲಾತಿ ವಿಚಾರವಾಗಿ ಸರ್ಕಾರ ತೀರ್ಮಾನ ಮಾಡಿದೆ. ಪರಿಶಿಷ್ಟ ಜಾತಿಗಳಿಗೆ ಒಳಮೀಸಲಾತಿ ಕುರಿತಂತೆ ಸುಪ್ರೀಂ ಕೋರ್ಟ್ ಆದೇಶ ಇದೆ. ಪರಿಶಿಷ್ಟ ಜಾತಿಗಳ ಉಪ ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇದೆ ಎಂದಿದೆ. ಸಂವಿಧಾನದ ಸಮಾನತೆ ತತ್ವಕ್ಕೆ ಚ್ಯುತಿ ಬಾರದಂತೆ ಒಳಮೀಸಲಾತಿ ಕಲ್ಪಿಸಲು ಅವಕಾಶ ಇದೆ ಎಂದಿದೆ" ಎಂದು ಸಿದ್ದರಾಮಯ್ಯ ವಿವರಿಸಿದರು.

ಇದೇ ವೇಳೆ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದ ಹೋರಾಟಗಾರರ ಮೇಲಿನ ಮೊಕದ್ದಮೆಗಳನ್ನು ಹಿಂಪಡೆಯಲು ಸರ್ಕಾರ ತೀರ್ಮಾನ ಮಾಡಿದೆ ಎಂದು ಸಿಎಂ ಸಿದ್ದರಾಮಯ್ಯ ಸದನಕ್ಕೆ ತಿಳಿಸಿದರು.

ಒಳಮೀಸಲಾತಿ ಜಾರಿಗೊಳಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸುತ್ತೇವೆ ಹಾಗೂ ಒಂದು ಬಾರಿಗೆ ವಯೋಮಿತಿ ಸಡಿಲಿಸಲು ತೀರ್ಮಾನ ಮಾಡಲಾಗಿದೆ. ಸರ್ಕಾರ ಕೈಗೊಂಡ ತೀರ್ಮಾನದಲ್ಲಿ ಯಾವುದಾದರೂ ಮಾರ್ಪಾಡು ಅಗತ್ಯವಿದ್ದರೆ ರಾಷ್ಟ್ರೀಯ ಜನಗಣತಿ ಸಂದರ್ಭದಲ್ಲಿ ಅಂಕಿ – ಅಂಶಗಳನ್ನು ಆಧರಿಸಿ ಮಾರ್ಪಾಡು ಮಾಡಲು ಷರತ್ತಿಗೆ ಬದ್ಧವಾಗಿದ್ದೇವೆ ಎಂದರು.

ನ್ಯಾ.ನಾಗಮೋಹನ್ ದಾಸ್ ವರದಿಯಲ್ಲಿ 5 ವಿಂಗಡಣೆ ಮಾಡಲಾಗಿತ್ತು. ಆದ್ರೆ, ಸರ್ಕಾರ, 3 ಗುಂಪುಗಳಾಗಿ ವರ್ಗೀಕರಣ ಮಾಡಿದೆ. 18 ಜಾತಿಗಳಿರುವ ಎಡಗೈ ಸಮುದಾಯಕ್ಕೆ ಶೇ. 6 ರಷ್ಟು ಮೀಸಲಾತಿ ಹಾಗೂ 20 ಜಾತಿಗಳಿರುವ ಬಲಗೈ ಸಮುದಾಯಕ್ಕೆ ಶೇ. 6 ರಷ್ಟು ಮೀಸಲಾತಿ. ಇನ್ನು 63 ಜಾತಿಗಳಿರುವ ಇತರ ಸಮುದಾಯಕ್ಕೆ ಶೇ. 5 ಮೀಸಲಾತಿ ನೀಡುವ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ.

## ಮಿರ್ಜಿ ಗ್ರಾಮದಲ್ಲಿ ಕಾಳಜಿ ಕೇಂದ್ರ ಸ್ಥಾಪನೆ: ಸಂಗಪ್ಪ

ಎಂದು ಸಂಗಪ್ಪ ಹೇಳಿದರು. ಪ್ರಸ್ತುತ ಘಟಪ್ರಭಾ ನದಿಗೆ 65567 ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ಇದರಿಂದ ಮುಧೋಳ ಹಾಗೂ ರಬಕವಿ–ಬನಹಟ್ಟಿ ತಾಲೂಕಿನ ಢವಳೇಶ್ವರ, ಮಿರ್ಜಿ, ಚನ್ನಾಳ, ಉತ್ತೂರು–ಜಾಲಿಬೇರ, ಮುಧೋಳ ಬ್ಯಾರೇಜ, ಇಂಗಳಗಿ, ಜಂಬಗಿ ಕೆಡಿ, ಕಸಬಾ ಜಂಬಗಿ, ತಿಪ್ಪಾಪೂರ ಹಾಗೂ ಮಾಚಕನೂರು ಸೇರಿ ಒಟ್ಟು 11 ಸೇತುವೆಗಳು ಮುಳುಗಡೆಯಾಗಿರುತ್ತವೆ.

ಮುಧೋಳ ಯಾದವಾಡ ಸೇತುವೆ ಒಂದು ಅಥವಾ ಎರಡು ದಿನಗಳಲ್ಲಿ ಮುಳುಗಡೆಯಾಗುವ ಹಂತದಲ್ಲಿದೆ. ನದಿ ಪಾತ್ರದಲ್ಲಿ ಸಾರ್ವಜನಿಕರು ಬರದಂತೆ ಎಚ್ಚರಿಕೆಯ ಫಲಕಗಳನ್ನು ಹಾಕುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಡಿಸಿ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಮುಧೋಳ ತಹಶೀಲ್ದಾರ ಮಹಾದೇವ ಸನಮೂರೆ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಮಹಿಳಾ ಸಿಬ್ಬಂದಿ ಸಾವು

ಒಬ್ಬ ಮಗ, ಮಗಳು ಇದ್ದಾರೆ. 'ಔರಾದ್ ತಾಲ್ಲೂಕಿನ ಜಮಗಿ ಗ್ರಾಮದ ಆರೋಗ್ಯ ಉಪಕೇಂದ್ರದಲ್ಲಿ ಭೀಮವ್ವಾ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯಾಗಿ ಕೆಲಸ ನಿರ್ವಹಿಸುತ್ತಿದ್ದರು. ಎಂದಿನಂತೆ ಕೆಲಸಕ್ಕೆ ಹೋಗುತ್ತಿದ್ದಾಗ ಕೊಳಾರ ಕೈಗಾರಿಕಾ ಪ್ರದೇಶದ ಕಂಪನಿಯೊಂದರ ಬಸ್ ವೇಗವಾಗಿ ಬಂದು ಡಿಕ್ಕಿಹೊಡೆದಿದ್ದರಿಂದ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ' ಎಂದು ಪೊಲೀಸರು ತಿಳಿಸಿದ್ದಾರೆ.

ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರೇರಣಾ ಶಕ್ತಿ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಆಡಳಿತಾವಧಿಯಲ್ಲಿ ಜಾರಿಗೆ ತಂದ ಉಳುವವನೇ ಭೂಮಿಯ ಒಡೆಯ ಕಾಯ್ದೆಯಿಂದ ಲಕ್ಷಾಂತರ ಬಡ ಕುಟುಂಬಗಳಿಗೆ ಆಧಾರ ಸ್ತಂಭವಾಗಿದೆ ಎಂದರು.

ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಮೂಲಸೌಕರ್ಯಗಳನ್ನು ಒದಗಿಸಲು ಅವರು ಹೋರಾಡಿದ ಪರಿಣಾಮವಾಗಿ, ಇಂದಿನ ಹಿಂದುಳಿದ ವಿದ್ಯಾರ್ಥಿನಿಲಯಗಳಲ್ಲಿ ಸಕಲ ಸೌಲಭ್ಯಗಳು ಲಭ್ಯವಾಗುತ್ತಿವೆ. ಈ ವಸತಿ ನಿಲಯಗಳ ವಾತಾವರಣದಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಉತ್ತಮ ಸಾಧನೆಗಳನ್ನು ಮಾಡಿದ್ದಾರೆ. ವಿದ್ಯಾರ್ಥಿ ನಿಲಯದಲ್ಲಿ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ಗುರಿ ಸಾಧಿಸಲು ಮುಂದಾಗಬೇಕು. ಸಮಸ್ಯೆಗಳು ಎದುರಾದಾಗ ಅವನ್ನು ದೂರ ಸರಿಯದೇ, ಅವುಗಳನ್ನು ಎದುರಿಸಿ ಗುರಿಯತ್ತ ಸಾಗಬೇಕು ಎಂದು ಸಂದೇಶ ನೀಡಿದರು.

ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್ ಮಾತನಾಡಿ, ಕರ್ನಾಟಕ ರಾಜ್ಯ ಕಂಡಂತಹ ಅಪರೂಪದ ಮತ್ತು ಸಮಾಜಮುಖಿ ಆಡಳಿತ ನೀಡಿದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ , ಸಾಮಾಜಿಕ ನ್ಯಾಯಕ್ಕಾಗಿ, ದೀನ ದಲಿತರ ಏಳಿಗೆಗಾಗಿ ಶ್ರಮಿಸಿದ್ದಾರೆ. ಸಮಾಜದ ಎಲ್ಲಾ ಜನರು ಒಂದು ಗೂಡಿ ಮತ್ತು ಎಲ್ಲಾ ವರ್ಗಗಳ ನಡುವೆ ಸಮಾನತೆ ತಂದುಕೊಟ್ಟಿದ್ದಾರೆ. ಎಂದರು.

ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ. ಅಪ್ಪುಗೆರೆ ಸೋಮಶೇಖರ್ ತಮ್ಮ ಅತಿಥಿ ಉಪನ್ಯಾಸ ನೀಡಿ ಮಾತನಾಡಿ, ಜನನಾಯಕ, ಬಡವರ ಧ್ವನಿ, 'ಹಿಂದುಳಿದ ವರ್ಗಗಳ ಹರಿಕಾರ' ಎಂದೇ ಖ್ಯಾತರಾಗಿದ್ದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸ್ ರವರು ಉಳುವವನಿಗೆ ಭೂಮಿ, ಹಾವನೂರು ಆಯೋಗದಂತಹ ಅವರ ಪ್ರಮುಖ ನಿರ್ಧಾರಗಳ ಪ್ರತಿಫಲ ಇಂದಿನ ಪೀಳಿಗೆಗೆ ಸಿಗುತ್ತಿದೆ. ಜೀತ ಪದ್ಧತಿ ನಿರ್ಮೂಲನೆ ಕಾಯ್ದೆ ಜಾರಿಗೆ ತಂದು ಶೋಷಿತ ವರ್ಗಗಳನ್ನ ಉಳ್ಳವರ ಕೈಯಿಂದ ವಿಮೋಚನಾಗೊಳಿಸಿದರು. ಉಳುವವನೇ ಭೂಮಿ ಒಡೆಯ ಕಾನೂನಿನ ಅನುಷಾ??ನದ ಮೂಲಕ ಗೇಣಿದಾದರರ ಹಿತರಕ್ಷಿಸಿದರು. ಪ್ರತಿಯೊಂದು ಜಿಲ್ಲಾ, ತಾಲ್ಲೂಕುಗಳಲ್ಲಿ ಹಿಂದುಳಿದ ವರ್ಗಗಳ ವಸತಿ ನಿಲಯಗಳನ್ನು ಪ್ರಾರಂಭಿಸಿದರು. ಶಿಕ್ಷಣ ಮತ್ತು ಉದ್ಯೋಗದಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿಗಾಗಿ ಹಾವನೂರು ಆಯೋಗ ಜಾರಿಗೆ ತಂದು ಸಮಸಮಾಜ ನಿರ್ಮಾಣಕ್ಕೆ ಮುನ್ನುಡಿ ಬರೆದು, ಇಡೀ ದೇಶಕ್ಕೆ ಮಾದರಿಯಾದರು. ಸಮಾಜದ ಕಟ್ಟಕಡೆ–ಯ ವ್ಯಕ್ತಿಗಳಿಗೂ ಸರ್ಕಾರದ ಸವಲತ್ತುಗಳನ್ನು ತಲುಪಿಸಲು ಪರಿಣಾಮಕಾರಿ ಆಡಳಿತ ನಡೆಸಿದ ದಿವಂಗತ ನಾಯಕರಾಗಿದ್ದಾರೆ ಎಂದರು. ಮೈಸೂರು ರಾಜ್ಯವನ್ನು ಕರ್ನಾಟಕ ರಾಜ್ಯ ಎಂದು ಮರುನಾಮಕರಣ ಮಾಡಿ ಬಹುದಿನದ ಕನ್ನಡಿಗರ ಕನಸು ನನಸಾಗಿಸಿದರು. ಇಂದಿರಾ ಗಾಂಧಿ ಅವರ ಗರೀಬಿ ಹಟಾವೋ ಮತ್ತು 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆ ತರುವುದರ ಮೂಲಕ ಬಡವರ ಜೀವನಕ್ಕೆ ಆಶಾಕಿರಣರಾದರು. ವೃಕ್ಷ ಸಂರಕ್ಷಣಾ ಕಾಯ್ದೆ ತರುವುದರ ಮೂಲಕ ಪರಿಸರ ರಕ್ಷಣೆ ಬಗ್ಗೆ ಅರಿವು ಮೂಡಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸಂಗೀತಾ ಬಿರಾದಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜೆ.ಎಂ. ರಾದ ಕರಿಬಸಮ್ಮ, ಮುಖಂಡರಾದ ಅಶೋಕ ಶೇರಿಕರ್, ನೀಲಕಂಠ ಸೇರಿದಂತೆ ವಿದ್ಯಾರ್ಥಿಗಳು ಮತ್ತು ಇತರೆ ಮುಖಂಡರು ಉಪಸ್ಥಿತರಿದ್ದರು.

# ರೈತ ಆತ್ಮಹತ್ಯೆ

ರೈತ ತನ್ನ ಮೂರು ಎಕರೆ ಜಮೀನಿನ ಮೂಲಕ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಎರಡು ಲಕ್ಷ ರೂ.ಗಳನ್ನು, ಫರತಾಬಾದ್ ಬ್ಯಾಂಕ್ ಆಫ್ ಬರೋಡದಲ್ಲಿ 7,50,000ರೂ.ಗಳನ್ನು ಹಾಗೂ ಕೃಷಿಗಾಗಿ ಖಾಸಗಿಯಾಗಿ 3,50000 ರೂ.ಗಳ ಸಾಲ ಪಡೆದಿದ್ದ. ಹೊಲದಲ್ಲಿ ಹತ್ತಿ ಮತ್ತು ತೊಗರಿ ಬೆಳೆದಿದ್ದು, ಅತಿವೃಷ್ಟಿಯಿಂದಾಗಿ ಬೆಳೆಗಳು ನಷ್ಟವಾಗಿದ್ದು, ಮಾಡಿದ ಸಾಲ ತೀರಿಸುವದು ಹೇಗೆ ಎಂಬ ಚಿಂತೆಯಲ್ಲಿ ನೇಣಿಗೆ ಶರಣಾಗಿದ್ದಾನೆ ಎಂದು ಹೇಳಲಾಗಿದೆ.

ಮೃತ ರೈತನ ಸಂತ್ರಸ್ತ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ಕೊಡಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಅವರು ಒತ್ತಾಯಿಸಿದ್ದಾರೆ.

## ಅತಿವೃಷ್ಟಿಯಿಂದ ರೈತರ ಸಂಕಷ್ಟ ರಾಜ್ಯ ಸರ್ಕಾರ ಸ್ಪಂದಿಸಲಿ: ಮತ್ತಿಮೂಡ್

ಕಲಬುರಗಿ:ಆ.20:ಜಿಲ್ಲೆಯಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಗೆ ರೈತರ ಕೈಗೆ ಬಂದ ತುತ್ತು ಬಾಯಿಗೆ ಬರೆದಂತಾಗಿದ್ದು, ಹೆಸರು, ಉದ್ದು ಸೇರಿ ತೊಗರಿ ಬೆಳೆ ಭಾಗಶಃ ನಾಶವಾಗಿರುವ ಕುರಿತು ಮತ್ತು ರಾಜ್ಯ ಸರ್ಕಾರ ನೀಡಬೇಕಾದ ಬಾಕಿ ಬೆಳೆ ವಿಮೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಬಸವರಾಜ್ ಮತ್ತಿಮೂಡ್ ಅವರು ಹೇಳಿದರು. ವಿಧಾನಸಭಾ ಅಧಿವೇಶನದಲ್ಲಿ ಬುಧವಾರ ಸರ್ಕಾರದ ಗಮನ ಸೆಳೆದು ಮಾತನಾಡಿದ ಅವರು, ಅತಿವೃಷ್ಟಿಯಿಂದ ರೈತರು ಸಂಕಷ್ಟಕ್ಕೆ ಸಿಲುಕಿ ಬೆಳೆದ ಬೆಳೆ ಕೈಗೆ ದೊರೆಯದಂತಾಗಿದೆ. ರಾಜ್ಯ ಸರ್ಕಾರ ಕೂಡಲೇ ಜಿಲ್ಲೆಯಲ್ಲಿ ಹಾನಿಗೀಡಾಗಿರುವ ಬೆಳೆ ಹಾನಿ ಕುರಿತು ಸಮೀಕ್ಷೆ ನಡೆಸಬೇಕು, ರೈತರು ನಿತ್ಯ ಸಂಕಷ್ಟ ಎದುರಿಸುತ್ತಿದ್ದು, ಸಮಸ್ಯೆಗೆ ಶೀಘ್ರ ಸ್ಪಂದಿಸಬೇಕು ಎಂದು ಒತ್ತಾಯಿಸಿದರು. 2024–2025ನೇ ಸಾಲಿನ ಬೆಳೆ ವಿಮೆ ಬಾಕಿ ಪರಿಹಾರ ಮೊತ್ತವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದ ಅವರು, ಸರ್ಕಾರ ಬೆಳೆ ವಿಮೆ ಬಾಕಿ ನೀಡುವ ಜೊತೆಗೆ, ಪ್ರಸಕ್ತ ಸಾಲಿನಲ್ಲಿ ಬೆಳೆ ಹಾನಿಗೀಡಾಗಿದ್ದು, ರೈತರಿಗೆ ಪ್ರತಿ ಎಕರೆಗೆ 25,000 ರೂ. ಗಳ ಪರಿಹಾರ ನೀಡಬೇಕೆಂದು ಸರ್ಕಾರದ ಗಮನ ಸೆಳೆದರು.

# ಮಣ್ಣಿನ ಗಣಪ ಪ್ರತಿಷ್ಠಾಪಿಸಿ

ಅಡೆತಡೆಯಾಗದಂತೆ ಎಚ್ಚರ ವಹಿಸಬೇಕಲ್ಲದೆ ಕಾನೂನು ಸುವ್ಯವಸ್ಥೆ ಕಾಪಾಡಲು ಸೂಕ್ತ ಪೊಲೀಸ್ ಬಂದೋಬಸ್ತ್ ನಿಯೋಜಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಅವರು ಮಾತನಾಡಿ, ಕಲಬುರಗಿ ನಗರದಲ್ಲಿ 500ಕ್ಕೂ ಹೆಚ್ಚು ಗಣೇಶ ಪ್ರತಿಷ್ಠಾಪಿಸಲಾಗುತ್ತಿದೆ. ಗಣೇಶ ಪೆಂಡಾಲ್‌ಗೆ ಮಹಿಳೆಯರು, ಮಕ್ಕಳು ಬರುವುದರಿಂದ ಸಾರ್ವಜನಿಕರನ್ನು ನಿಯಂತ್ರಿಸಲು ಆಯೋಜಕರು ಸ್ವಯಂ ಸೇವಕರನ್ನು ನಿಯೋಜಿಸಬೇಕು. ಸಾಧ್ಯವಾದರೆ ಸಿ.ಸಿ.ಟಿ.ವಿ. ಅಳವಡಿಸಿದಲ್ಲಿ ಇನ್ನು ಉತ್ತಮ ಎಂದರು.

ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರು ಮಾತನಾಡಿ, ಕಲಬುರಗಿ ನಗರ ವ್ಯಾಪ್ತಿಯಲ್ಲಿ ಗಣೇಶ ವಿಸರ್ಜನೆಗೆ ಗುರುತಿಸಲಾದ ಸ್ಥಳದಲ್ಲಿ ಕ್ರೇನ್ ಸೌಲಭ್ಯ ಒದಗಿಸಲಾಗುವುದು. ಮೆರವಣಿಗೆ ಸರಾಗವಾಗಿ ಹೋಗಲು ರಸ್ತೆ ಗುಂಡಿ ಮುಚ್ಚಲಾಗುವುದು. ಬೀದಿ ದೀಪ ಸರಿಪಡಿಸಲಾಗುವುದು. ಪ್ರತಿ ಪೆಂಡಾಲ್ ಬಳಿ ಕಸ ಸಂಗ್ರಹಇಸಿ ಒಂದೆಡೆ ಇಟ್ಟಿದಲ್ಲಿ ಸ್ವಚ್ಛತಾ ಕಾರ್ಮಿಕರು ಪ್ರತಿ ದಿನ ಬಂದು ತೆಗೆದುಕೊಂಡು ಹೋಗಲಿದ್ದಾರೆ ಎಂದರು.

ಸುಳ್ಳು ಸುದ್ದಿಗೆ ಕಿವಿಗೊಡಬೇಡಿ: ಹಬ್ಬದ ಸಂದರ್ಭದಲ್ಲಿ ಸೌಹಾರ್ದತೆಗೆ ಧಕ್ಕೆ ತರಲು ಕೆಲವು ಕಿಡಿಗೇಡಿಗಳು ಸಾಮಾಜಿಕ ಜಾಲತಾಣದ ಮೂಲಕ ಸುಳ್ಳು ಸುದ್ದಿಗಳನ್ನು ಪೋಸ್ಟ್ ಮಾಡಿ ಕೋಮ ಗಲಭೆಗೆ ಅಸ್ಪದ ನೀಡುವ ವಿಡಿಯೋ ಹರಿಬಿಟ್ಟು ಕಾನೂನು ಸುವ್ಯವಸ್ಥೆ ಧಕ್ಕೆ ತರುವ ಸಾಧ್ಯತೆ ಇದ್ದು, ಇಂತಹ ಯಾವುದೇ ಪೋಸ್ಟ್ ಬಂದಲ್ಲಿ ಅದನ್ನು ಫಾರ್ವಾಡ್ ಮಾಡುವ ಮುನ್ನ ಅದರ ಸತ್ಯಾಸತ್ಯೆತೆ ಅರಿಯಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆ ತರುವು ವಿಚಾರವಾದರೆ ಕೂಡಲೆ ಪೊಲೀಸ್ ಠಾಣೆಗೆ ಮಾಹಿತಿ ನೀಡಿದಲ್ಲಿ ಸಂಬಂಧಿಸಿದವರ ವಿರುದ್ಧ ಕಠಿಣ ಕ್ರಮಕೈಗೊಳ್ಳಲಾಗುವುದು ಎಂದ ಎಸ್.ಪಿ. ಅಡ್ಡೂರು ಶ್ರೀನಿವಾಸಲು ಅವರು, ಗಣೇಶ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಸ್ಥಳದಲ್ಲಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗುವುದು ಎಂದರು.

ಶಾಂತಿ ಸಮಿತಿ ಸದಸ್ಯ ಬಾಬುರಾವ ಜಹಾಗಿರದಾರ್ ಮಾತನಾಡಿ ಆಗಸ್ಟ್ 27 ರಂದು ಗಣಪನ್ನ ಪ್ರತಿಷ್ಠಪಿಸಲಾಗುತ್ತಿದ್ದು, ಐದು ದಿನ, ಒಂಭತ್ತು ದಿನ ಹಾಗೂ ಕೊನೆಯದಾಗಿ 11 ದಿನ ಅಂದರೆ ಸೆಪ್ಟೆಂಬರ್ 6ಕ್ಕೆ ಅನಂತ ಚತುರ್ಥಿ ದಿನದಂದು ವಿಸರ್ಜನೆ ಮಾಡಲಾಗುತ್ತದೆ. ಮೆರವಣಿಗೆಯುದ್ದಕ್ಕೂ ವಿದ್ಯುತ್ ಅಡೆತಡೆ–ಯಾಗದಂತೆ ನೋಡಿಕೊಳ್ಳಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕು. ಪೆಂಡಾಲ್‌ಗೆ ತಾತ್ಕಲಿಕ ವಿದ್ಯುತ್ ನೀಡಲು ಜೆಸ್ಕಾಂ ಹೆಚ್ಚು ಶುಲ್ಕ ವಿಧಿಸುತ್ತಿದ್ದು, ಇದನ್ನು ಕಡಿಮೆ ಮಾಡಬೇಕು ಎಂದು ಮನವಿ ಮಾಡಿದರು.

ಖಾಜಿ ರಿಜ್ವಾನ್ ಉರ್ ರೆಹಮಾನ್ ಸಿದ್ದಿಕ್ಕಿ ಅವರು ಮಾತನಾಡಿ ಪ್ರತಿ ವರ್ಷದತೆ ಈ ವರ್ಷವು ಸಹ ಕಲಬುರಗಿಯಲಿ ಶಾಂತಿಯುತವಾಗಿ ಹಬ್ಬ ಆಚರಿಸಲಾಗುವುದು. ಈ ಬಾರಿ ಈದ್ ಮಿಲಾದ್ ಮೆರವಣಿಗೆಯಲ್ಲಿ ಡಿ.ಜೆ. ಬಳಸದಂತೆ ಸಮುದಾಯದ ಸಭೆಯಲಿಲ ನಿರ್ಧಆರ ತೆಗೆದುಕೊಳ್ಳಲಾಗಿದೆ ಎಂದರು.

ಇನ್ನು ಸಭೆಯಲ್ಲಿ ಭಾಗವಹಿಸಿದ ಅನೇಕ ಮುಖಂಡರು ಮಾತನಾಡಿ, ಹಿಂದೂ–ಮುಸ್ಲೀಂ ಭಾಂಧವರು ಎಲ್ಲರು ಸೇರಿ ಒಟ್ಟಿಗೆ ಬಂದಿರುವ ಗಣಪತಿ ಮತ್ತು ಈದ್–ಎ–ಮಿಲಾದ್ ಹಬ್ಬವನ್ನು ಸೌಹಾರ್ದಯುತವಾಗಿ ಆಚರಿಸುವಾಗಿ ತಿಳಿಸಿದಲ್ಲದೆ ಗಣೇಶ ಪೆಂಡಾಲ್ ಉಸತ್ತ ಸ್ವಚ್ಛತೆ, ಪೊಲೀಸ್ ಬಂದೋಬಸ್ತ್, ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು, ಮದ್ಯದ ಹಾವಳಿಗೆ ಕಡಿವಾಣ ಹಾಕಬೇಕೆಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಹಾಯಕ ಆಯುಕ್ತೆ ಸಾಹಿತ್ಯ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಅಬಕಾರಿ ಉಪ ಅಯುಕ್ತ ಸಂಗಣಗೌಡ ಬಿರಾದಾರ ಸೇರಿದಂತೆ ವಿವಿಧ ಧಾರ್ಮಿಕ ಮುಖಂಡರು, ಗಣ್ಯರು ಭಾಗವಹಿಸಿದ್ದರು.

# ಧೀಮಂತ ನಾಯಕ ಡಿ. ದೇವರಾಜ ಅರಸು

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿಗಳು, ಡಿ. ದೇವರಾಜ ಅರಸು ಅವರು ಕನ್ನಡನಾಡಿನ ಒಬ್ಬ ಪ್ರಮುಖ ರಾಜಕಾರಣಿ ಮತ್ತು ಕರ್ನಾಟಕದ ಮಾಜಿ ಮುಖ್ಯಮಂತ್ರಿ. ಅವರ ಅವಧಿಯಲ್ಲಿ ಭೂಸುಧಾರಣೆ, ಹಿಂದುಳಿದ ವರ್ಗಗಳ ಕಲ್ಯಾಣ, ಮತ್ತು ಸಾಮಾಜಿಕ ನ್ಯಾಯಕ್ಕೆ ಸಂಬಂಧಿಸಿದ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೊಳಿಸಿದರು. ಅವರು ಜಾರಿಗೆ ತಂದ ಗೇಣಿದಾರಿಕೆ ಕಾಯಿದೆ (ಐಚಿಟಿಜ ಖಿಜಜಿಂಡಿಛಿ ಂಛಿಣ) ರೈತರು ಮತ್ತು ಹಿಂದುಳಿದ ವರ್ಗದವರ ಜೀವನದಲ್ಲಿ ಮಹತ್ವದ ಬದಲಾವಣೆಗಳನ್ನು ತಂದವು.

ದೇವರಾಜ ಅರಸು ಅವರು ಉಳುವವನಿಗೆ ಭೂಮಿ ಎಂಬ ಕ್ರಾಂತಿಕಾರಿ ಆಲೋಚನೆಯನ್ನು ಜಾರಿಗೊಳಿಸಿದರು. ಅವರು ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದರು. ಹಾವನೂರು ಆಯೋಗದ ರಚನೆ ಮಾಡುವ ಮೂಲಕ ಹಿಂದುಳಿದ ವರ್ಗಗಳಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ಕಲ್ಪಿಸಿದರು. ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿ ಎಲ್ಲಾ ವರ್ಗದವರಿಗೂ ಸಮಾನ ಅವಕಾಶಗಳನ್ನು ಒದಗಿಸಲು ಶ್ರಮಿಸಿದರು. ಇವರನ್ನು ಪರಿಶಿಷ್ಟ ಜಾತಿ ಮತ್ತು ಹಿಂದುಳಿದ ವರ್ಗಗಳ ಹರಿಕಾರ ಎಂದು ಕರೆಯುತ್ತಾರೆ.

ದೇವರಾಜ ಅರಸು ಅವರು ನ್ಯಾಯದ ಪ್ರತಿಪಾದಕರಾಗಿದ್ದರು. ಅವರು ಶೋಷಿತ ವರ್ಗಗಳನ್ನು, ವಿಶೇಷವಾಗಿ ತುಳಿತಕ್ಕೊಳಗಾದವರು ಮತ್ತು ಹಿಂದುಳಿದ ಜಾತಿಗಳನ್ನು ಸುಧಾರಣೆ ಮಾಡುವುದು ಅವರ ಗುರಿಯಾಗಿತ್ತು. ಅರ್ಥಿಕತೆಯಿಂದ ಹಿಂದುಳಿದಿರುವ ಸಮುದಾಯಗಳನ್ನು ಸಬಲೀಕರಣಗೊಳಿಸುವುದು ಅವರ ಆದ್ಯತೆಯಾಗಿ–ತ್ತು. ಮಲ ಹೊರುವ ಪದ್ಧತಿ, ಜೀತ ಪದ್ಧತಿಯನ್ನು ರದ್ದು ಮಾಡಿದರು.ಪ್ರತಿ ವರ್ಷ ಡಿ. ದೇವರಾಜ ಅರಸು ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಈ ವರ್ಷ ಕಲ್ಲೆ ಶಿವೋತ್ತಮರಾವ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದು ಸಂತೋಷದ ಸಂಗತಿ. ಹಿರಿಯ ಪತ್ರಕರ್ತರಾದ ಕಲ್ಲೆ ಶಿವೋತ್ತಮರಾವ್ ಅವರಿಗೆ ಬಹಳ ಹಿಂದೆಯೆ ಪ್ರಶಸ್ತಿ ದೊರಕಬೇಕಿತ್ತು. ಇಳಿ ವಯಸ್ಸಿನಲ್ಲಿ ಆಯ್ಕೆ ಮಾಡಿರುವುದು ಬಹಳ ಸಮಂಜಸವಾಗಿದೆ. ಯೋಗ್ಯ ವ್ಯಕ್ತಿಯನ್ನು ಆಯ್ಕೆ ಮಾಡಿರುವುದು ಸಂತೋಷವಾಗಿದೆ ಎಂದು ತಿಳಿಸಿದರು.ಡಿ. ದೇವರಾಜ ಅರಸು ಅವರು ರಾಜ್ಯದ ಮುಖ್ಯಂತ್ರಿಗಳಾಗಿ ಐದು ವರ್ಷ ಸಂಪೂರ್ಣ ಅವಧಿಯನ್ನು ಪೂರೈಸಿದರು. ನಾನು ಕೂಡ ಸಂಪೂರ್ಣವಾಗಿ ಪೂರೈಸಿದ್ದೇನೆ. ಈ ವಿಷಯದಲ್ಲಿ ನಮ್ಮಿಬ್ಬರಲ್ಲೂ ಸಾಮ್ಯತೆ ಇದೆ ಎಂದು ತಿಳಿಸಿದರು.ಸಾಮಾಜಿಕ, ಆರ್ಥಿಕ ಸ್ವಾತಂತ್ರ್ಯ ಸಿಕ್ಕಾಗ ರಾಜಕೀಯ ಸ್ವಾತಂತ್ರ್ಯ ಸಿಗುತ್ತದೆ ಎಂದು ಅರಸು ಅವರು ನಂಬಿಕೆ ಇಟ್ಟಿದ್ದರು. ಅಸಮಾನತೆ ಎಲ್ಲಿಯವರೆಗೆ ಇರುತ್ತದೆ ಅಲ್ಲಿಯವರೆಗೆ ಸ್ವಾತಂತ್ರ್ಯಕ್ಕೆ ಅರ್ಥ ಇರುವುದಿಲ್ಲ. ಎಲ್ಲ ಜನರಿಗೂ ಸಮಾನ ಅವಕಾಶ ಸಿಗಬೇಕೆಂದು ಅವರು ಪ್ರತಿಪಾದನೆ ಮಾಡಿದರು. ದಲಿತರು, ಬಡವರು, ಅಸ್ಪಸಂಖ್ಯಾತರಿಗೆ ಶಕ್ತಿ ತುಂಬುವ ಕೆಲಸ ಮಾಡಿದರು. ಉಳುವವನೆ ಭೂ ಒಡೆಯ ಎಂಬ ಕಾನೂನನ್ನು ಜಾರಿಗೆ ತರುವುದು ಸುಲಭವಲ್ಲ. ಕಾನೂನನ್ನು ಜಾರಿಗೆ ತಂದು ರೈತರಿಗೆ ಶಕ್ತಿ ತುಂಬಿದರು.

ಗ್ಯಾರಂಟಿ ಯೋಜನೆ ಅನುಷ್ಠಾನದಿಂದ ತಲಾದಾಯ ಹೆಚ್ಚಾಗಿದೆ. 2013–14ರಲ್ಲಿ ರೂ.1,04,000 ತಲಾದಾಯವಿದ್ದು, 2025–26ರಲ್ಲಿ 2,05,000 ಆಗಿದೆ. ದೇಶದಲ್ಲಿ ಕರ್ನಾಟಕ ತಲಾದಾಯದಲ್ಲಿ ಮೊದಲನೆಯ ಸ್ಥಾನದಲ್ಲಿದೆ. ನಾನು ಮುಖ್ಯಮಂತ್ರಿಯಾದಾಗ ಸಮಾಜದಲ್ಲಿ ಯಾರು ಅನ್ನಕ್ಕಾಗಿ ಇನ್ನೊಬ್ಬರ ಮನೆ ಹತ್ತಿರ ಕೈಒಡ್ಡಬಾರದು ಎಂದು ಅನ್ನಭಾಗ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದರುದೇವರಾಜ ಅರಸು ಅವರು ಸಾಮಾಜಿಕ ನ್ಯಾಯ ಒದಗಿಸಲು, ಎಲ್ಲರಿಗೂ ಸಮಾನ ಅವಕಾಶ ನೀಡಲು ಪ್ರಯತ್ನ ಮಾಡಿದರು. ಕರ್ನಾಟಕ ರಾಜ್ಯ ಆಗಲು ಇವರು ಕಾರಣಕರ್ತರು. ಕರ್ನಾಟಕ ರಾಜ್ಯವಾಗಿ 50 ವರ್ಷ ಸಂಭ್ರಮದಲ್ಲಿ ಕನ್ನಡ ಭುವನೇಶ್ವರಿ ಪ್ರತಿಮೆಯನ್ನು ಸ್ಥಾಪನೆ ಮಾಡಲಾಗಿದೆ ಎಂದು ತಿಳಿಸಿದರು.

## ಬೀದಿ ಬದಿ ವ್ಯಾಪಾರಿಗಳ ಸಮಸ್ಯೆ ಆಲಿಸಿದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್



ಬೀದರ. ಆ. 20 : ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಮನ್ನಾಎಖೇಳ್ಳಿಯ ಪ್ರವಾಸಿ ಮಂದಿರ(ಐ.ಬಿ)ಕ್ಕೆ ಬುಧವಾರ ಮಧ್ಯಾಹ್ನ ಭೇಟಿ ನೀಡಿದ ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು, ಅಲ್ಲಿ ಸೇರಿದ್ದ ಮನ್ನಾಎಖೇಳ್ಳಿಯ ಬೀದಿ ಬದಿ ವ್ಯಾಪಾರಿಗಳ ಸಮಸ್ಯೆ ಆಲಿಸಿದರು. ಮನ್ನಾಎಖೇಳ್ಳಿಯ ಸಮುದಾಯ ಆರೋಗ್ಯ ಕೇಂದ್ರದ ಮುಂಭಾಗದಲ್ಲಿನ ಮುಖ್ಯ ರಸ್ತೆಗೆ ಹೊಂದಿಕೊಂಡಿದ್ದ ವಿವಿಧ ಅಂಗಡಿ, ಹೋಟೆಲ್ ಗಳನ್ನು ಕಳೆದ ತಿಂಗಳು ಸರ್ಕಾರದಿಂದಲೇ ತೆರವು ಮಾಡಲಾಗಿತ್ತು, ಅಂಗಡಿ, ಹೋಟೆಲ್ ಗಳ ತೆರವಿನಿಂದ ಸಂಕಷ್ಟಕ್ಕೆ ಸಿಲುಕಿದ ಬೀದಿ ಬದಿಯ ವ್ಯಾಪಾರಿಗಳು, ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರ ಮುಂದೆ ನೋವು ಹಂಚಿಕೊಂಡರು. ಕಳೆದ 40 – 45 ವರ್ಷಗಳಿಂದ ನಾವು ಮನ್ನಾಎಖೇಳ್ಳಿಯ ಸರ್ಕಾರಿ ಆಸ್ಪತ್ರೆ (ಈಗಿನ ಸಮುದಾಯ ಆರೋಗ್ಯ ಕೇಂದ್ರ) ಯ ಮುಂದಿನ ಮುಖ್ಯ ರಸ್ತೆಯ ಬದಿಯಲ್ಲಿ ವಿವಿಧ ಅಂಗಡಿ, ಹೋಟೆಲ್ ಗಳನ್ನು ನಿರ್ಮಾಣ ಮಾಡಿಕೊಂಡು ವ್ಯಾಪಾರದಲ್ಲಿ ತೊಡಗಿದ್ದೇವು. ಇದ್ದಕ್ಕಿದ್ದಂತೆ ನಮ್ಮ ಅಂಗಡಿ, ಹೋಟೆಲ್ ಗಳನ್ನು ತೆರವು ಮಾಡುವ ಮೂಲಕ ನಮ್ಮನ್ನು ಸಂಕಷ್ಟಕ್ಕೆ ಸಿಲುಕಿಸಿದ್ದಾರೆ. ಮರಳಿ ನಮಗೆ ಅಂಗಡಿ, ಹೋಟೆಲ್ ವ್ಯವಸ್ಥೆ ಮಾಡಿಸಿಕೊಡಬೇಕು ಎಂದು ಬೀದಿ ಬದಿಯ ವ್ಯಾಪಾರಿಗಳು ಮನವಿ ಮಾಡಿದರು. ಬೀದಿ ಬದಿಯ ವ್ಯಾಪಾರಿಗಳ ಸಮಸ್ಯೆ ಆಲಿಸಿದ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು, ಚಿಟಗುಪ್ಪಾ ತಾಲೂಕು ಪಂಚಾಯತಿಯ ಇ.ಓ ಮತ್ತು ಮನ್ನಾಎಖೇಳ್ಳಿ ಗ್ರಾಮ ಪಂಚಾಯತಿಯ ಪಿಡಿಒರವರಿಗೆ ಕರೆ ಮಾಡಿ, ಬೀದಿ ಬದಿಯ ವ್ಯಾಪಾರಿಗಳ ಸಮಸ್ಯೆಗಳ ಬಗ್ಗೆ ತಿಳಿಸಿ, ಕೂಡಲೇ ಇದಕ್ಕೆ ಪರಿಹಾರ ಒದಗಿಸಿಕೊಡಬೇಕು ಎಂದು ತಿಳಿಸಿದರು. ಅಲ್ಲಿನ ನೂರಾರು ಜನ ಬೀದಿ ಬದಿಯ ವ್ಯಾಪಾರಿಗಳು ತಮ್ಮ ಅಂಗಡಿ, ಹೋಟೆಲ್ ಗಳನ್ನೇ ನಂಬಿಕೊಂಡು ಕಳೆದ 40–45 ವರ್ಷಗಳಿಂದ ಜೀವನ ಮಾಡುತ್ತಿದ್ದರು, ಮತ್ತೆ ವಾಪಸು ಕಟ್ಟಿಸಿಕೊಡ್ತಿವಿ ಅಂತ ಹೇಳಿ ಏಕಾಏಕಿ ಅವರ ಅಂಗಡಿ, ಹೋಟೆಲ್ ಗಳನ್ನು ತೆರವು ಮಾಡಿ ಅವರನ್ನು ಸಂಕಷ್ಟಕ್ಕೆ ಸಿಲುಕಿಸಿದ್ದಿರಿ. ಈಗ ಅವರನ್ನೇ ನಂಬಿಕೊಂಡಿದ್ದ ಅವರ ಕುಟುಂಬಗಳು ಬೀದಿಗೆ ಬಂದಿವೆ. ಮುಂದಿನ ಜೀವನ ಹೇಗೆ ಎಂಬುದು ತಿಳಿಯದೆ ಅವರು ಪರದಾಡುತ್ತಿದ್ದಾರೆ. ಕೂಡಲೇ ಅವರಿಗೆ ಅಂಗಡಿ, ಹೋಟೆಲ್ ಗಳ ನಿರ್ಮಾಣ ಮಾಡಿಕೊಟ್ಟು ಅವರ ಉಪ ಜೀವನಕ್ಕೆ ನೆರವಾಗಬೇಕು. ಅವರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ಪರಿಹಾರ ಒದಗಿಸಿಕೊಡಬೇಕು ಎಂದು ಇಒ, ಪಿಡಿಒಗಳಿಗೆ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ತಿಳಿಸಿದರು. ಈ ಸಂದರ್ಭದಲ್ಲಿ ಮನ್ನಾಎಖೇಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ರಾಜಕುಮಾರ್ ಅಗಸೆ, ಗ್ರಾಮ ಪಂಚಾಯತಿ ಸದಸ್ಯ ಶಂಕರ್ ಜೊತಗೊಂಡ (ಪಂಡಿತ್ ಜಿ), ಪ್ರಮುಖರಾದ ಮಲ್ಲಪ್ಪ ಮನ್ನಾಎಖೇಳ್ಳಿ, ಪಾಂಡಪ್ಪ ಹೋಟೆಲ್, ಇಮದ್ ಭಾಗ್ವಾನ್, ಖಾಜಾ ಭಾಗ್ವಾನ್, ಖುತುಬ್, ಪುಟ್ಟರಾಜ ರೇಕುಳಗಿ, ಝುರಣಪ್ಪ ಬೋರಾಳ, ಚಾಂದ್ ಪಾಷ, ಝುಭೇರ್, ತಾಜೋದ್ದಿನ್ ರವರು ಸೇರಿದಂತೆ ಅನೇಕರಿದ್ದರು.

# ತಳಸಮುದಾಯಗಳು ಸಂಘಟಿತರಾದರೆ ಮಾತ್ರ ಸಾಮಾಜಿಕ, ರಾಜಕೀಯ, ಆರ್ಥಿಕ ವಿಕಸನ ಸಾಧ್ಯ: ಸಚಿವ ಸತೀಶ್ ಜಾರಕಿಹೊಳಿ




ಬೆಂಗಳೂರು:ಅ.20:ಪರಿಶಿಷ್ಟ ಪಂಗಡದಲ್ಲಿರುವ ವಾಲ್ಮೀಕಿ ನಾಯಕ ಸಮುದಾಯವೂ ಸೇರಿದಂತೆ ಎಲ್ಲ ತಳಸಮುದಾಯಗಳು ಸಂಘಟಿತರಾದರೆ ಮಾತ್ರ ಸಾಮಾಜಿಕ, ರಾಜಕೀಯ, ಆರ್ಥಿಕ ವಿಕಸನ ಸಾಧ್ಯ. ಸಂಘಟನೆ ಕಾರ್ಯ ಎಂಬುದು ನಿರಂತರ ಪ್ರಕ್ರಿಯೆ ಎಂದು ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದರು.

ಇಲ್ಲಿನ ಗಾಂಧಿನಗರದ ಸ್ಯಾಂಕ್ಟಮ್ ಹೋಟೇಲಿನ ಸಭಾಂಗಣದಲ್ಲಿ ಅಗಸ್ಟ್ 20 ರ ಮಂಗಳವಾರ ಸಂಜೆ ಆಯೋಜಿಸಿದ್ದ " ಪರಿಶಿಷ್ಟ ಪಂಗಡಗಳ ನೌಕರರು ಹಾಗೂ ಜನಪ್ರತಿನಿಧಿಗಳ ಸಮಾಲೋಚನೆ ಸಭೆ" ಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಶೋಷಿತ ಸಮಾಜದಲ್ಲಿ ಶಿಕ್ಷಣ ಪಡೆದು ನೌಕರಿ ಮಾಡುತ್ತಿರುವ ಜನರ ಮೇಲೆ ಹೆಚ್ಚು ಜವಾಬ್ದಾರಿಗಳಿವೆ. ಪರಿಶಿಷ್ಟ ಪಂಗಡದ ನೌಕರರು ತಮ್ಮ ವೃತ್ತಿ ಸಂಬಂಧಿತ ಮುಂಬಡ್ತಿ, ವರ್ಗಾವಣೆ, ಸ್ಥಳ ನಿಯುಕ್ತಿ ಸೇರಿದಂತೆ ಅನೇಕ ವಿಷಯಗಳಲ್ಲಿ ಎದುರಿಸುತ್ತಿರುವ ಸಮಸ್ಯೆ ,

ಸವಾಲುಗಳನ್ನು ಸಂಘಟಿ–ತರಾದಾಗ ಮಾತ್ರ ಪರಿಹಾರ ಕಂಡುಕೊಳ್ಳಲು ಮಾರ್ಗಗಳು ದೊರೆಯುತ್ತವೆ.

ಕಾನೂನು ತಜ್ಞ ಎಲ್.ಜಿ.ಹಾವನೂರ ಹಾಗೂ ಅವರಿಗಿಂತ ಹಿಂದಿನಿಂದಲೂ ಸಮಾಜದ ಸಂಘಟನೆಗೆ ಅನೇಕರು ಶ್ರಮಿಸಿದ್ದಾರೆ. ಇದೊಂದು ನಿರಂತರ ಪ್ರಕ್ರಿಯೆ, ಪ್ರತಿಯೊಬ್ಬ ಪ್ರಜ್ಞಾವಂತರು ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಡಾ.ಪ್ರಸನ್ನಾನಂದ ಮಹಾಸ್ವಾಮಿಗಳು ಮಾತನಾಡಿ, ಆದಿಕವಿ ಮಹರ್ಷಿ ವಾಲ್ಮೀಕಿ ಹಾಗೂ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ವಿಚಾರಗಳನ್ನು ನಾವೆಲ್ಲ ಅಳವಡಿಸಿಕೊಂಡು ಅನುಷ್ಠಾನಗೊಳಿಸಬೇಕು ಎಂದರು.

ಶಾಸಕರಾದ ಅನ್ನಪೂರ್ಣ ತುಕಾರಾಮ, ಕರೆಮ್ಮನಾಯಕ, ಅನೀಲ್ ಚಿಕ್ಕಮಾದು, ಟಿ.ರಘುಮೂರ್ತಿ, ಜೆ.ಎನ್. ಗಣೇಶ್, ಡಾ.ಎನ್.ಟಿ.ಶ್ರೀನಿವಾಸ ,ಚನ್ನಗಿರಿಯ ಮುಖಂಡ ಹೊದಿಗೆರೆ ರಮೇಶ ಮತ್ತಿತರರು ಮಾತನಾಡಿದರು. ಕರ್ನಾಟಕ ರಾಜ್ಯ ಎಸ್ ಟಿ ನೌಕರರ ಸಂಘದ ಅಧ್ಯಕ್ಷ ಜಗದೀಶ್ವರಮೂರ್ತಿ ವೈ.ಪಿ., ಲೋಕೇಶ ನಾಯಕ, ಪಂಪಾಪತಿ ಮತ್ತಿತರರು ನೌಕರರ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದರು. ಈ ಕುರಿತು ಸಚಿವರಿಗೆ ಮನವಿ ಅರ್ಪಿಸಿದರು.

ಸಭೆಯಲ್ಲಿ ರಾಜ್ಯದ ಆನೇಕ ಜಿಲ್ಲೆಗಳಿಂದ ಸಮುದಾಯದ ಅಧಿಕಾರಿ ನೌಕರರು, ಸಮಾಜದ ಮುಖಂಡರುಗಳು, ನಿವೃತ್ತ ಅಧಿಕಾರಿಗಳು ಉಪಸ್ಥಿತರಿದ್ದರು

ಅನ್ನಪೂರ್ಣ ಪ್ರಾರ್ಥಿಸಿದರು, ಮಂಜುನಾಥ ಡೊಳ್ಳಿನ ಸ್ವಾಗತಿಸಿದರು, ಸಂಘದ ಗೌರವಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಡಾ.ಗವಿಸಿದ್ದಪ್ಪ ಮುತ್ತಾಳ ನಿರೂಪಿಸಿದರು.

# ಗವಿಮಠದಲ್ಲಿ 8ನೇ ವಿಶೇಷ ಉಪನ್ಯಾಸ ಮಾಲೆ

(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ : – ಸಜ್ಜನರ ಸಂಗವಿದ್ದಾಗ ಮಾತ್ರ ಸುಖಿ ಜೀವನ ನಡೆಸಲು ಸಾಧ್ಯ ಎಂದು ನಗರದ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರಶ್ರಾವಣಮಾಸಅಂಗವಾಗಿ ಪ್ರತಿವರ್ಷದಂತೆ ನಗರದ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಿ ಅವರು ಮಾತನಾಡಿ ದುಃಖಮಯ ಜೀವನವನ್ನು ಸುಖಮಯ ಮಾಡಿಕೊಳ್ಳಲು ಐದು ಅಮೂಲ್ಯ ರತ್ನಗಳಾದ ಸಜ್ಜನರ ಸಂಗ, ಶಾಸ್ತ್ರಗಳ ಶ್ರವಣ, ಭಗವಂತನ ಭಜನೆ, ದಯೆ,ಧರ್ಮಪಾಲನೆ ಮಾಡಬೇಕು ಎಂದು ಉಪದೇಶಿಸಿದರು. ಮುಖ್ಯ ಅತಿಥಿಗಳಾಗಿ ಉಪನ್ಯಾಸಕಿ ಡಾ. ಭುವನೇಶ್ವರಿ ಶ್ರಿವಾತ್ಸವ ಮಾತನಾಡಿ ಈ ಆಧುನಿಕ ಯುಗದಲ್ಲಿ ಗುರುಗಳ ಮೂಲಕ ಧರ್ಮ ಸಂಸ್ಕಾರ ಪಡೆಯುವುದು ಅವಶ್ಯಕ. ಗವಿಮಠದ ಪೂಜ್ಯ ಶ್ರೀ ಡಾ ಅಭಿನವ ಘನಲಿಂಗ ಗುರುಗಳು ನಮ್ಮೆಲ್ಲರಿಗೆ ಅಂಥ ಧರ್ಮ ಸಂಸ್ಕಾರ ಸದಾ ಕೊಡುತ್ತಿರುವುದು ನಮ್ಮೆಲ್ಲರ ಸುದೈವ. ಪೂಜ್ಯ ಗುರುಗಳ ಅನೇಕ ಧಾರ್ಮಿಕ, ಸಾಮಾಜಿಕ ಕಾರ್ಯಗಳು ಶ್ಲಾಘನೀಯವಾಗಿವೆ. ಪೂಜ್ಯಗುರುಗಳು ಚಿಕ್ಕವಯಸ್ಸಿನಲ್ಲಿಯೇ ಗವಿಮಠದ ಗುರುಗಳಾಗಿ ಕೆಲವೇ ವರ್ಷಗಲ್ಲಿ ಗವಿಮಠವನ್ನು ಅಭಿವೃದ್ಧಿ ಮಾಡಿದ್ದು ಸಾಧನೆಯಾಗಿದೆ ಎಂದು ಬಣ್ಣಿಸಿ ಗವಿಮಠ ಗುರುವಿನ ಮಹಿಮೆ, ಗವಿಮಠದ ಚರಿತ್ರೆಯನ್ನು ತಿಳಿಸಿದರು.

ವಿಶೇಷ ಸನ್ಮಾನ ಸ್ವೀಕರಿಸಿ ನಿವೃತ್ತ ಶಿಕ್ಷಕಿ ಸರಸ್ವತಿ ಬೆಂಬಳಿ ಅವರು ಮಾತನಾಡಿ ಶ್ರಾವಣ ಮಾಸ ಗುರುಗಳ ಉಪದೇಶ ಕೇಳುವ ಪವಿತ್ರ ಮಾಸ. ಎಲ್ಲರೂ ಪೂಜ್ಯ ಗುರುಗಳ ಉಪದೇಶ ಕೇಳಿ ಪುಣ್ಯ ಸಂಪಾದಿಸಬೇಕು ಎಂದು ನುಡಿದು ಕೃತಜ್ಞತೆ ಸಲ್ಲಿಸಿದರು.

ಅತಿಥಿಯಾಗಿ ತಾಲೂಕಾ ಟೋಕರಿ ಕೋಳಿ ಸಮಾಜದ ಮಹಿಳಾ ಘಟಕದ ತಾಲೂಕಾ ಅಧ್ಯಕ್ಷರಾದ ರೇಖಾ ಹೊಸಮನಿ ತಾಯಿ ಮಮತೆ ಕುರಿತು ಕವನ ವಾಚನ ಮಾಡಿ ಮಾತನಾಡಿ ಇಂದಿನ ಮೊಬೈಲ್ ಯುಗದಲ್ಲಿ ಮಕ್ಕಳನ್ನು ಗುರುಗಳ ಬಳಿಗೆ ಕರೆತಂದು ಗುರುಗಳಿಂದ ಧರ್ಮ ಸಂಸ್ಕಾರ ಕೊಡಿಸುವುದು ಅವಶ್ಯಕ ಎಂದು ನುಡಿದರು.

ಶ್ರೀಗುರು ಮಹಾಲಿಂಗೇಶ್ವರ ಶಾಲೆಯ ಸವಿತಾ ರಮೇಶ ಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಸುರೇಖಾ ಸಜ್ಜನಶೆಟ್ಟಿ, **ಭಜನೆ** : ಹಣಮಂತ ವಾಡಿಯ ಭಜನಾ ಮಂಡಳಿಯಿಂದ ಭಜನೆ ಜರುಗಿತು. ಈ ಸಂದರ್ಭದಲ್ಲಿ ಅಕ್ಷತಾ ಮಠಪತಿ. . ಶರಣಬಸಪ್ಪ ಅಲಗುಡೆ. ಬಸವಂತಪ್ಪ ಲವಾರೆ, ಮಲ್ಲಿಕಾರ್ಜುನ ಅಲುಗಡೆ, ವೆಂಕಟೇಶ ಕಮ್ಮಾ, ಮಾದಣ್ಣ ಸಿತಳಗೆರೆ, ರಾಕೇಶ ಪುರವಂತ, ಪ್ರಭು ಗಾದಾ, ಗೋವಿಂದ ಅಯ್ಯಣ್ಣೋರ, ನರಸಮ್ಮ ತಮ್ಮಾಣಿ, ಸುಶೀಲಾ ಬಾಯಿ ಹತ್ತೆ, ಜ್ಯೋತಿ ನಾಯ್ಡು, ತುಕ್ಕಮ್ಮಾ ನಿರ್ಣಾ ಮೊದಲಾದ ಭಕ್ತರು ಪಾಲ್ಗೊಂಡು ಗುರುಗಳ ದರ್ಶನ, ಆಶೀರ್ವಾದ ಪಡೆದು ಮಹಾ ಪ್ರಸಾದ ಸ್ವೀಕರಿಸಿದರು.



ಬಸವಕಲ್ಯಾಣ: – ಇಲ್ಲಿನ ಬಸವ ಮಹಾನೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಯುವ ಕ್ರಾಂತಿ ಸಂಘಟನೆಯ 13 ನೇ ವಾರ್ಷಿಕೋತ್ಸವ ಹಾಗೂ ಜಿಲ್ಲಾ ಯುವಸಮ್ಮೇಳನ ಕಾರ್ಯಕ್ರಮದಲ್ಲಿ ಸಂಘಟನೆಯ ರಾಜ್ಯ ಅಧ್ಯಕ್ಷರಾದ ಗುಂಡುರಡ್ಡಿ ಆರ್ ಕಮಲಾಪುರೆ ಹಾಗೂ ಉಪಾಧ್ಯಕ್ಷರು, ಸದಸ್ಯರು ಪದಾಧಿಕಾರಿಗಳು, ಗಣ್ಯರು. ಎಲ್ಲ ಊರಿನ ಗ್ರಾಮಸ್ಥರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದಕೆ ರಾಜೇಶ್ವರ ಗ್ರಾಮದ ಮಿಲಿಂದ್ ಮುರಳಿಧರ್ ರಾವ್ ಕುಲಕರ್ಣಿರವರಿಂದ

**ಅನಂತ – ಅನಂತ ಕೃತಜ್ಞತೆಗಳು.**



ಬಸವಕಲ್ಯಾಣ :– ಇಲ್ಲಿನ ಸಂಸ್ಥಾನ ಗವಿಮಠದಲ್ಲಿ ಅಯೋಜಿಸಿದ ಸಿದ್ದಾತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತು 7 ನೇ ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮದಲ್ಲಿ ಕಲಾವಿದರಾದ ಸೂರ್ಯಕಾಂತ ಬಿರಾದಾರ ಖಾನಾಪುರ ಅವರನ್ನು ತಿಪುರಾಂತಿನ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಲಕ್ಷ್ಮೀಪುತ್ರ ನಿಂಬಾಳಕರ್. ಜಗನ್ನಾಥ ಪಾಟೀಲ. ವೀರಶೆಟ್ಟಿ ಮಲಶೆಟ್ಟಿ. ರಾಕೇಶ್ ಪುರವಂತ. ದೀಲಿಪ ದೇಸಾಯಿ. ಮಲ್ಲಿಕಾರ್ಜುನ ಅಲಗೂಡೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಶುಭ ದೃಷ್ಟಿಗಳಾಗಿ ಹಾರಕೂಡ ಶ್ರೀ



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 20 ಎಲ್ಲೆಡೆ ಶಿವಾಂಶ ತುಂಬು ತುಳುಕುತ್ತಿರುವ ಈ ಸುಂದರ ಜಗತ್ತಿನಲ್ಲಿ ಪ್ರತಿಯೊಬ್ಬರೂ ಶುಭ ದೃಷ್ಟಿಗಳಾಗಿರಬೇಕು, ಎಲ್ಲದರಲ್ಲಿ ಶುಭವನ್ನು ಕಾಣುವ, ಶುಭವನ್ನು ಹಂಚುವ, ಶುಭವನ್ನು ಸೃಷ್ಟಿಸುವ ಶುಭ ಮನಸುಳ್ಳವರಾಗಿರಬೇಕು ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ 2015–16ನೇ ಸಾಲಿನ ವಿದ್ಯಾರ್ಥಿಗಳಿಂದ ಆಯೋಜಿಸಿದ ಗುರುವಂದನೆ ಹಾಗೂ 863ನೇ ತುಲಾಭಾರ ಮತ್ತು ಉಚಿತ ಆರೋಗ್ಯ ತಪಾಸಣೆ ಶಿಬಿರ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ನಮ್ಮ ಮನಸ್ಸು ಶುಭದ ಗಣಿಯಾದಾಗ ಶುಭ ಕಾರ್ಯಗಳು, ಸಮಾಜೋನ್ನತಿ ಕಾರ್ಯಗಳು ಫಲಿಸುತ್ತವೆ.

ಗುರುವಿನ ಸಾನಿಧ್ಯದಲ್ಲಿ ಕೈಗೊಳ್ಳುವ ಸತ್ಕಾರ್ಯಗಳು ಸಮಾಜದಲ್ಲಿ ಶುಭದ ಬೆಳಕು ಚೆಲ್ಲುತ್ತವೆ.

ಹಾಗಾಗಿ ಎಲ್ಲದಕ್ಕೂ ಗುರು ಕಾರುಣ್ಯ ಭದ್ರಬುನಾದಿಯನ್ನು ಒದಗಿಸಿಕೊಡುತ್ತದೆ.

ಎಲ್ಲರಿಗೂ ಒಳಿತನ್ನು ಬಯಸುವ ಮನಸ್ಸಿದ್ದರೆ ನಮ್ಮ ಬದುಕು ಕೂಡ ಒಳಿತಿನಿಂದ ಸಂಭ್ರಮಿಸುತ್ತದೆ ಎಂದು ನುಡಿದರು.

ಗುರುಲಿಂಗ ಶಿವಾಚಾರ್ಯ ಉಚಿತ ವಸತಿ ಶಾಲೆಯ 2015–16ನೇ ಸಾಲಿನ ವಿದ್ಯಾರ್ಥಿಗಳ ಧರ್ಮ ಕಾರ್ಯ ನಮಗೆ ಖುಷಿ ನೀಡಿದ್ದು, ಎಲ್ಲರ ಬಾಳು ಶ್ರೇಯಸ್ಸಿನಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

ಪ್ರವೀಣ ರೆಡ್ಡಿ ಅನಿಸಿಕೆ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಡಾ. ಜ್ಯೋತಿ ಹೋಗಾರ, ಡಾ. ಯೋಗೇಶ್ವರಿ ಹೂಗಾರ, ಡಾ. ನವೀನ ಹೂಗಾರ, ಡಾ. ಶ್ರೀಶೈಲ ಪಾಟೀಲ, ಪರಮೇಶ್ವರ ಹೊಳಕುಂದೆ, ಪಂಡಿತ ಪೂಜಾರಿ, ಡಾ. ರಾಜಶೇಖರ ಮದರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ವೀರಣ್ಣಗೌಡ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಅಂಬರೀಶರೆಡ್ಡಿ ನಿರೂಪಿಸಿದರು. ಆಕಾಶ ರೆಡ್ಡಿ ವಂದಿಸಿದರು.

# ಮಾಸಿಕ ಶರಣ ಜ್ಞಾನ ಸಗಮ ಹಾಗೂ ಶಾವಣ ಮಾಸದ ಸತ್ಸಂಗ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 20 ನಗರದ ಅರಿವು ಆಚಾರ ಅನುಭವ ಕೇಂದ್ರದಲ್ಲಿ ಮಾಸಿಕ ಶರಣ ಜ್ಞಾನ ಸಂಗಮ ಹಾಗೂ ಶ್ರಾವಣ ಮಾಸದ ಸತ್ಸಂಗ ಕಾರ್ಯಕ್ರಮ ಜರುಗಿತು. ದಿವ್ಯ ನೇತೃತ್ವ ಬಸವರಾಜು ಪಂಡಿತ ವಹಿಸಿದ್ದರು. ಅಧ್ಯಕ್ಷತೆ ನಿವೃತ್ತ ನ್ಯಾಯಾಧೀಶರಾದ ಎಸ್.ಎಸ್.ನಾಗರಾಳೆಯವರು ವಹಿಸಿ ಮಾತನಾಡಿ ರಾಷ್ಟ್ರಕವಿ ಕುವೆಂಪುರವರ ವಿಶ್ವಮಾನವ ಸಂದೇಶದ ಪಂಚಮಂತ್ರಗಳಾದ ಮನುಜ ಮತ ವಿಶ್ವಪಥ ಸಮನ್ವಯ ಸರ್ವೋದಯ ಹಾಗೂ ಪೂರ್ಣದೃಷ್ಟಿಗಳು ಶರಣರ ತತ್ವದ ಪ್ರತಿರೂಪಗಳಾಗಿದ್ದು ಇವು ಇಂದಿನ ಸಮಾಜಕ್ಕೆ ಅನುಷ್ಠಾನಕ್ಕೆ ತರುವುದು ಅತ್ಯವಶ್ಯಕ ಅದರಿಂದ ನಾವೆಲ್ಲರೂ ವಿಶ್ವಮಾನವರಾಗಬೇಕೆಂದು ಕಳಕಳಿಯಿಂದ ತಮ್ಮ ವಿಚಾರವನ್ನು ಮಂಡಿಸಿದರು. ಅತಿಥಿಗಳಾಗಿ ಶಿಕ್ಷಕರಾದ ಮಲ್ಲಿಕಾರ್ಜುನ ಆಲಗೂಡೆ ಅವರು ತಮ್ಮ ಅನುಭಾವವನ್ನು ನೀಡಿ ವಿಶ್ವಗುರು ಬಸವಣ್ಣನವರ ಕರ್ಮಭೂಮಿ ಹಾಗೂ ಅನೇಕ ಶರಣರ ಕಾರ್ಯಕ್ಷೇತ್ರ ಮತ್ತು ಪವಿತ್ರ ಭೂಮಿಯಾಗಿದ್ದು ಸಮಾಜ ಹಾಗೂ ಕಾಯಕ, ದಾಸೋಹ ತತ್ವವನ್ನು ಬೋಧಿಸಿದ ನಾಡು, ಬಸವಾದಿ ಶರಣರು ಕೊಟ್ಟಂತಹ ಧರ್ಮ ಭೋದೆ ಇಂದಿನ ಸಮಾಜದಲ್ಲಿ ತಿಳುವಳಿಕೆ ಮೂಡಿಸಲು ಹಾಗೂ ಆಚರಣೆಯಲ್ಲಿ ತರುವುದು ಬಹು ಎಂದರು.

ಈ ಸಂದರ್ಭದಲ್ಲಿ ಸಂಗಮೇಶ್ ತೊಗರಖೇಡೆ, ಭೀಮಶಂಕರ್ ಮಾಶಾಳ್ಕರ್, ಗುರುಪ್ರಸಾದ ಪಂಡಿತ, ಶಾಮರಾವ್ ಸಿಂಗ್, ವೀರಣ್ಣ ಪಾಟೀಲ್, ಸುಲೋಚನ ಗುದಗೆ, ಸುಮಿತ್ರ ದಾವಣಗೆರೆ, ಗುರುದೇವಿ ಆನೆಮಠ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ವಿಶ್ವ ಸೊಳ್ಳೆ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 20–: ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿ ಕಚೇರಿ ಹಾಗೂ ಟಾಗೂರ್ ಸ್ಮಾರಕ ಶಿಕ್ಷಣ ಸಂಸ್ಥೆಯಿಂದ ಟಾಗೂರ್ ಸ್ಮಾರಕ ಶಿಕ್ಷಣ ಸಂಸ್ಥೆಯ ಬಿ.ಎಡ್. ಕಾಲೇಜ್‌ನಲ್ಲಿ ವಿಶ್ವ ಸೊಳ್ಳೆ ದಿನಾಚರಣೆ ಆಚರಿಸಲಾಯಿತು.

ತಾಲೂಕು ಆರೋಗ್ಯ ಮತ್ತು ಶಿಕ್ಷಣಾಧಿಕಾರಿ ಸರೋಜ.ಕೆ ಅವರು ಮಾತನಾಡಿ, ಜಗತ್ತಿನಲ್ಲಿ 3,600 ಜಾತಿಯ ಸೊಳ್ಳೆಗಳಿವೆ. ಹೆಣ್ಣು ಸೊಳ್ಳೆ ರಕ್ತಹೀರಿ ಸಂತಾನಾಭಿವೃದ್ಧಿ ಮಾಡುತ್ತದೆ. ಗಂಡು ಸೊಳ್ಳೆ ಗಿಡ ಬಳ್ಳಿಗಳ ರಸ ಹೀರಿ ಜೀವಿಸುತ್ತದೆ. 1897ರಲ್ಲಿ ಬ್ರಿಟಿಷ್ ವೈದ್ಯ ಸರ್ ರೊನಾಲ್ಡೊ ರೋಸ್ ಸೊಳ್ಳೆ ಕಚ್ಚುವುದರಿಂದ ಮಲೇರಿಯಾ ರೋಗ ಹರಡುತ್ತದೆ ಎಂದು ಜಗತ್ತಿಗೆ ಪರಿಚಯಿಸಿದರು.

ಈಡೀಸ್ ಈಜಿಪ್ಟ್, ಅನಾಫಿಲಿಸ್, ಕ್ಯೂಲೆಕ್ಸ ಈ ಮೂರು ಸೊಳ್ಳೆಗಳು ಮನುಷ್ಯರನ್ನು ಕಾಡುವಂತಹವು. ಈಡೀಸ್ ಸೊಳ್ಳೆ ಡೆಂಗ್ಯೂ ಜ್ವರ ತರುವಂತಹದ್ದು, ಅನಾಫಿಲಿಸ್ ಸೊಳ್ಳೆ ಮಲೇರಿಯ ಜ್ವರ, ಕ್ಯೂಲೆಕ್ಸ ಸೊಳ್ಳೆ ಆನೆಕಾಲು ರೋಗ, ಮೆದುಳು ಜ್ವರ ತರುವಂತಹದ್ದು ಎಂದು ತಿಳಿಸಿದರು.

ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಸಂಧ್ಯಾ ಅವರು ಮಾತನಾಡಿ, ಸೊಳ್ಳೆಗಳಿಂದ ಹರಡುವ ರೋಗಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು. ನೀರು ಹರಿಯಲಿಕ್ಕೆ ಬಿಡಬೇಕು. ನೀರಿನ ತಗ್ಗುಗಳನ್ನು ಮುಚ್ಚಬೇಕು. ಮೈ ತುಂಬಾ ಬಟ್ಟೆ ಧರಿಸುವ, ಸೊಳ್ಳೆ ಪರದೆ ಉಪಯೋಗಿಸುವ, ಕಿಡಿಕಿಗಳಿಗೆ ಜಾಲರಿ ಅಳವಡಿಕೆ, ಗುಡ್ ನೈಟ್, ಸೊಳ್ಳೆ ಹೊಡೆಯುವ ಬ್ಯಾಟ್ ನಂತಹ ಸ್ವಯಂ ರಕ್ಷಣಾ ವಿಧಾನಗಳನ್ನು ಬಳಸಬೇಕು.

ಮನೆಯಲ್ಲಿರುವ ನೀರಿನ ಪರಿಕರಗಳನ್ನು ವಾರಕ್ಕೊಮ್ಮೆ ತೊಳೆದು ಒಣಗಿಸಿ ಡ್ರೈ ಡೇ ಮಾಡಬೇಕು. ಯಾವುದೇ ಜ್ವರ ಇರಲಿ, ಹತ್ತಿರಸ ಆಸ್ಪತ್ರೆಗೆ ತೆರಳಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಿ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರು ಬ್ರಹ್ಮಕುಮಾರಿ ಸ್ಮಿತ ಅಕ್ಕ, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಗಣೇಶೋತ್ಸವವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ: ಸಾರ್ವಜನಿಕರಲ್ಲಿ ಜಿಲ್ಲಾಧಿಕಾರಿ ನಿತೀಶ್ ಕೆ. ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 20: ಪ್ರತಿ ವರ್ಷದಂತೆ ಈ ಬಾರಿಯೂ ವರಸಿದ್ಧಿ ವಿನಾಯಕ ಗೌರಿ ಗಣೇಶ ಚತುರ್ಥಿ ಹಬ್ಬದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ನಿಂದ ಮಾಡಿದ ಬಣ್ಣದ ವಿಗ್ರಹಗಳನ್ನು ಸ್ಥಾಪಿಸದೇ, ಬಣ್ಣರಹಿತವಾದ ಮಣ್ಣಿನ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪಿಸಿ, ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸೋಣ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಆಚರಿಸಲಾಗುತ್ತಿರುವ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಗಣೇಶ ವಿಗ್ರಹಗಳ ತಯಾರು, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯಿಂದ ಪರಿಸರಕ್ಕೆ ಹಾನಿಯಾಗುವಂತಹ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ವಸ್ತುಗಳು ಮತ್ತು ಲೋಹ ಮಿಶ್ರಿತ (ಆಯಿಲ್ ಪೆಂಟ್) ಬಣ್ಣಗಳನ್ನು ಉಪಯೋಗಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆ ಉಂಟಾಗುತ್ತದೆ. ಆದ್ದ– ರಿಂದ ಗಣೇಶನ ಮೂರ್ತಿಗಳ ವಿಸರ್ಜನೆಯಿಂದ ಕೆರೆ, ಬಾವಿ, ಕೊಳ, ನದಿಗಳಲ್ಲಿನ ನೀರು ಮಾಲಿನ್ಯವಾಗದಂತೆ ಮೇಲ್ವಿಚಾರಣೆ ವಹಿಸುವುದು ಅವಶ್ಯಕ ಹಾಗೂ ಇದಕ್ಕಾಗಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈ ಹಬ್ಬದ ಆಚರಣೆ ಸಮಯದಲ್ಲಿ ನೈಸರ್ಗಿಕ ಜಲ ಮೂಲಗಳನ್ನು ರಕ್ಷಿಸುವ ನಿಟ್ಟಿನಲ್ಲಿ 2016ರಲ್ಲಿ ಅಧಿಸೂಚನೆ ಹೊರಡಿಸಿದೆ. ನಿರ

ಹಾಗೂ ದಿನಾಂಕ:15.07.2025 ರಂದು ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ ಕುರಿತು ಸುತ್ತೋಲೆ ಹೊರಡಿಸಲಾಗಿದ್ದು, ಜಿಲ್ಲೆಯ ನಗರ, ಪಟ್ಟಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಗಣೇಶ ಹಬ್ಬದ ಸಂದರ್ಭದಲ್ಲಿ ಅಂತಹ ಪ್ರಕರಣಗಳು ಕಂಡುಬಂದಲ್ಲಿ ಕ್ರಮವಹಿಸಲು ನಗರ, ಪಟ್ಟಣ ಸ್ಥಳೀಯ ಸಂಸ್ಥೆವಾರು ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳ ನೇತೃತ್ವದಲ್ಲಿ ಸ್ಕ್ವಾಡ್‌ಗಳ ತಂಡವನ್ನು ರಚಿಸಲು ಆದೇಶಿಸಿ ಕ್ರಮವಹಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ಶಾಂತಿಯುತ ಹಬ್ಬದ ಆಚರಣೆಗೆ ಸಹಕರಿಸಬೇಕು ಎಂದು ರಾಯಚೂರ ಜಿಲ್ಲೆಯ ಸಾರ್ವಜನಿಕರಲ್ಲಿ ಕೋರಿದ್ದಾರೆ.

# ರಾಜಶ್ರೀ ಸಿಮೆಂಟ ಕಾರ್ಖಾನೆಯಲ್ಲಿ ವಾಹನ ಚಾಲಕ ಸಾವು



ಸೇಡಂ, ಆ,19: ತಾಲೂಕಿನ ಮಳಖೇಡ ಗ್ರಾಮದಲ್ಲಿರುವ ಆದಿತ್ಯ ನಗರದ ಅಲ್ಟ್ರಾಟೇಕ್ ರಾಜಶ್ರೀ ಸಿಮೆಂಟ್ ಕಾರ್ಖಾನೆಯಲ್ಲಿ ನೆನ್ನೆ ರಾತ್ರಿ ಆರ್‌ಸಿಪೊರ್ ಏರಿಯಾದಲ್ಲಿ ಕೆಲಸ ಮಾಡುತ್ತಿರುವ ಗುತ್ತಿಗೆ ಕಾರ್ಮಿಕನಾದ ಅಂಬರೀಶ್ ತಂದೆ ಯಲ್ಲಪ್ಪ ಬೊಮ್ಮನಹಳ್ಳಿ ಅವರಿಗೆ ಇಟಚ್ಚೆ ಡಿಕ್ಕಿ ಆದ ಪರಿಣಾಮ ಕಾರ್ಮಿಕ ಸ್ಥಳದಲ್ಲೇ ದುರ್ಮರಣ ಹೊಂದಿದಾನೆ ಎಂದು ತಿಳಿದು ಬಂದಿದೆ.

# ಪ್ರಧಾನಮಂತ್ರಿ ಆವಾಸ್ ಯೋಜನೆಯ ಮನೆಗಳ ಫಲಾನುಭವಿಗಳ ಆಯ್ಕೆ: ಆಯುಕ್ತರಿಂದ ಸಭೆ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು ಆಗಸ್ಟ್ 20: ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯ ಬಡವರಿಗೆ ಅನುಕೂಲವಾಗಲೆಂದು ಸರ್ಕಾರದಿಂದ ಕಡಿಮೆ ವೆಚ್ಚ ಮತ್ತು ಸುಸಜ್ಜಿತ ಸೌಲಭ್ಯಯುಳ್ಳ ಮನೆಯನ್ನು ಒದಗಿಸಿಕೊಡಲಾಗುತ್ತಿದ್ದು, ಅರ್ಹ ಫಲಾನುಭವಿಗಳು ಈ ಸೌಲಭ್ಯ ಪಡೆಯಲು ಮುಂದೆ ಬರುವಂತೆ ವ್ಯಾಪಕ ಪ್ರಚಾರ– ಕ್ಕೆ ಕ್ರಮವಹಿಸಬೇಕು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಹೇಳಿದರು.

ಆಗಸ್ಟ್ 20ರ ಬುಧವಾರದಂದು ನಗರದ ಹಳೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕ ಎ.ಹೆಚ್.ಪಿಆರ್ ಡಿ 2,419 ಮನೆಗಳಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ ಪಂಗಡ ವರ್ಗದ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಯೋಜನೆಯಡಿ ಈಗಾಗಲೇ 578 ಅರ್ಜಿದಾರರು ನೋಂದಣಿ ಮಾಡಿಕೊಂಡಿದ್ದು, ಬಾಕಿ ಉಳಿದ 754 ಮನೆಗಳಿಗೆ ಅರ್ಜಿಗಳನ್ನು ಭರ್ತಿ ಮಾಡಲು ಸಾಮಾಜಿಕ ಜಾಲತಾಣಗಳು, ಮತ್ತು ಮಹಾನಗರ ಪಾಲಿಕೆಯ ಸ್ವಚ್ಛತಾ ವಾಹನಗಳ ಮೂಲಕ ಎಲ್ಲಾ ತರಹದ ಪ್ರಚಾರಕ್ಕೆ ಕೂಡಲೇ ವ್ಯವಸ್ಥೆ ಮಾಡಬೇಕು. ಹೀಗಾದಲ್ಲಿ ಆಕ್ಷೇಪಣೆಗೆ ಮೀರಿ ಹೆಚ್ಚಿನ ಅರ್ಜಿಗಳು ಬರಲು ಸಾಧ್ಯವಾಗುತ್ತದೆ.

ಈ ಯೋಜನೆಯಿಂದ ಬಡವರಿಗೆ ಸಾಕಷ್ಟು ಅನುಕೂಲವಾಗಲಿದೆ. ಅರ್ಹರು ಈ ಯೋಜನೆಯ ಲಾಭ ಪಡೆಸುಕೊಂಡಲ್ಲಿ ಮಕ್ಕಳಿಗೆ ಒಳ್ಳೆಯ ನಿವೇಶನ ಮತ್ತು ಒಳ್ಳೆಯ ಜೀವನ ಕೊಡಿಸಬಹುದಾಗಿದೆ. ಪ್ರತಿಯೊಬ್ಬರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಹೆಚ್ಚಿನ ಪ್ರಚಾರ ಕಾರ್ಯವನ್ನು ಕೂಡಲೇ ಆರಂಭಿಸಬೇಕು ಎಂದು ಆಯುಕ್ತರು ನಿರ್ದೇಶನ ನೀಡಿದರು.

ಇದೆ ವೇಳೆ ವಾಲ್ಮೀಕಿ ಸಂಘದ ಸದಸ್ಯರಾದ ಎನ್ ರಘುವೀರ ನಾಯಕ ಅವರು ಮಾತನಾಡಿ, ಈ ಯೋಜನೆಯನ್ನು ಪಡೆಯಲು ಮುಂಗಡವಾಗಿ ಪಾವತಿಸಬೇಕಾದ ಹಣವನ್ನು ಕಂತುಗಳ ಮಾದರಿಯಲ್ಲಿ ಪಡೆದರೆ ಫಲಾನುಭವಿಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಆಡಳಿತ ಉಪ ಆಯುಕ್ತರಾದ ಸಂತೋಷ್ ರಾಣಿ, ಸಿ.ಎಲ್.ಟಿ.ಸಿ ಮತ್ತು ಡಿ.ಯು.ಡಿ.ಸಿಯ ಅಧಿಕಾರಿಯಾದ ಹಂಪಮ್ಮ, ಕರ್ನಾಟಕ ಮಾದಿಗ ಯುವಸೇನೆ ಯಕಲಾಪುರ ಸದಸ್ಯರಾದ ಉದಯಕುಮಾರ, ನರಸಪ್ಪ ಪರಶಪ್ಪ ಜಾಲದಾರ್ ಸೇರಿದಂತೆ ಇತರರು ಇದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಜಿಲ್ಲಾ ರೈತ ಮೋರ್ಚಾ ಬಿಜೆಪಿ ಬೀದರ್ ವತಿಯಿಂದ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಆ. 20 : ನಾಳೆ ಮುಂಜಾನೆ 11 ಗಂಟೆಗೆ ಜಿಲ್ಲಾಧಿಕಾರಿ ಅವರಿಗೆ ಜಿಲ್ಲಾ ಬಿಜೆಪಿ ರೈತ ಮೋರ್ಚ ವತಿಯಿಂದಅತಿವೃಷ್ಟಿಗೊಳಪಟ್ಟ ರೈತರಿಗೇ ಪರಿಹಾರ ಒದಗಿಸುವ ಮತ್ತು ಜಾನುವಾರುಗಳೂ ಕಳೆದುಕೊಂಡ, ರೈತರಿಗೂ ಪರಿಹಾರಒದಗಿಸುವಬಗ್ಗೆಮನವಿ ಪತ್ರವನ್ನುಸಲ್ಲಿಸಲಾಗುವುದು



ಈ ವೇಳೆ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀ ಕಲ್ಮಡಪ್ಪ ಮತ್ತು ರಾಜ್ಯ ಉಪಾಧ್ಯಕ್ಷರಾದ ಶ್ರೀ ಗುರುಲಿಂಗೌಡ ಅವರ ಒಂದು ನೇತೃತ್ವದಲ್ಲಿ ಜಿಲ್ಲಾ ಬಿಜೆಪಿರೈತಮರ್ಚಾವತಿಯಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ಒದಗಿಸುವ ಕುರಿತು ಮನವಿ ಸಲ್ಲಿಸಲಾಗುವುದು ಎಂದು ಶಿವರಾಜ್ ಅಲ್ಮಾಜೆ

ಅಧ್ಯಕ್ಷರು ಜಿಲ್ಲಾ ರೈತ ಮೋರ್ಚಾ ಬಿಜೆಪಿ ಬೀದರ್ ತಿಳಿಸಿದ್ದಾರೆ.

# ವಿನಯ ಮಾಳಗೆ ರವರಿಗೆ ರಾಜ್ಯ ಯುವ ಪ್ರಶಸ್ತಿಯ ಗರಿ




ಬೀದರ.ಆ.20:ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟ,ಬೆಂಗಳೂರು ಇವರ ವತಿಯಿಂದ,ಕರ್ನಾಟಕಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಅಖಿಲ ಕರ್ನಾಟಕ ರಾಜ್ಯ ಮಹಿಳಾ ಸರ್ಕಾರಿ ನೌಕರರ ಸಂಘದ ಸಹಯೋಗದಲ್ಲಿ ನೀಡಲಾಗುವ ಕರ್ನಾಟಕ ರಾಜ್ಯ ಯುವ ಪ್ರಶಸ್ತಿ ಇಂದು ಬೆಂಗಳೂರಿನ ಸರ್ ಪುಟ್ಟಣ್ಣಶೆಟ್ಟಿ ಪುರಭವನ,ಟೌನ್ ಹಾಲ್‌ನಲ್ಲಿ ಭವ್ಯವಾಗಿ ನೆರವೇರಿತು.

ಈ ಸಂದರ್ಭದಲ್ಲಿ ನಮ್ಮ ಜಿಲ್ಲೆಯ ಕರ್ನಾಟಕ ವನ್ಯಜೀವಿ ಮಂಡಳಿಯ ಸದಸ್ಯರು ಮತ್ತು ಟೀಂ ಯುವಾ ಸಹ ಸಂಸ್ಥಾಪಕರಾದ ವಿನಯ ಮಾಳಗೆ ರವರಿಗೆ ರಾಜ್ಯ ಯುವ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ರಾಜ್ಯ ಮಟ್ಟದ ಯುವ ಸಮ್ಮೇಳನ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕಲೆ, ಕ್ರೀಡೆ, ಸಮಾಜ ಸೇವೆ, ಪರಿಸರ ಸಂರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆ ಮಾಡಿದ 30 ಮಂದಿ ಯುವ ಸಾಧಕರಿಗೆ ಈ ವರ್ಷದ ರಾಜ್ಯ ಯುವ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಧ್ಯಕ್ಷ ಶ್ರೀ ಬಸವರಾಜ್ ಹೊರಟ್ಟಿ,ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವ ಶ್ರೀ ಈಶ್ವರ ಖಂಡ್ರೆ, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ, ಕರ್ನಾಟಕ ರಾಜ್ಯ ಜನಪದ ಅಕಾಡೆಮಿಯ ಅಧ್ಯಕ್ಷ ಶ್ರೀ ಗೊಲ್ಲಹಳ್ಳಿ ಶಿವಪ್ರಸಾದ್,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಡಾ. ಸಿ. ಸೋಮಶೇಖರ್,ಕಲಾವಿದ ಶ್ರೀ ಜಿ. ಕಪ್ಪಣ್ಣ ಶ್ರೀ ಚೇತನ್ ಆರ್, ಮಾನ್ಯ ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶ್ರೀಮತಿ ರೋಶನಿ ಗೌಡ, ಅಖಿಲ ಕರ್ನಾಟಕ ಸರ್ಕಾರಿ ಮಹಿಳಾ ನೌಕರರ ಸಂಘ, ಶ್ರೀ ಜಿ ಕಪ್ಪಣ್ಣ ಹಿರಿಯ ಕಲಾವಿದರು, ಒಕ್ಕೂಟದ ಗೌರವಾಧ್ಯಕ್ಷರು, ಶ್ರೀ ವಿಜಯ್ ಕುಮಾರ್ ಸೋನಾರೆ, ಶ್ರೀ ಪ್ರಕಾಶ್ ಅಂಗಡಿ,ಗೌರವ ಕಾರ್ಯದರ್ಶಿ, ಶ್ರೀ ಶಿವ ಕುಮಾರ ಎಚ್ ಎಂ, ಒಕ್ಕೂಟ ಅಧ್ಯಕ್ಷರು, ಶ್ರೀ ಪನೀಂದ್ರ ಪ್ರಸಾದ್, ಪ್ರಧಾನ ಕಾರ್ಯದರ್ಶಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ರಾಜ್ಯ ಸಂಘಟನಾ ಸಂಚಾಲಕರು ಶ್ರೀ ಮಾರುತಿ ಬೌದ್ಧೆ, ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ರಾಜ್ಯಾಧ್ಯಕ್ಷರು ಶ್ರೀ ಮಹೇಶ್ ಗೋರ್ನಾಳ್ಕರ್, ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಶ್ರೀ ವಿನೋದ್ ಕುಮಾರ ಬಂದಗೇ,ಹಿರಿಯ ಸಾಹಿತಿ ಶ್ರೀಮತಿ ಪಾರ್ವತಿ ಸೋನಾರೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಅನಾಥ ಮಕ್ಕಳ ಬಾಳು ಬೆಳಗಿದವರು ಡಾ. ಬಸವಲಿಂಗ ಪಟ್ಟದೇವರು



ಔರಾದ:ಅ.20:ಬೇಡವಾಗಿ ಬಿಸಾಡಿದ ಮಗುವನ್ನು ಸಾಕು ಸಲಹಿ ಬೆಳೆಸಿ ಅವರ ಬಾಳು ಬೆಳಗಿದವರು ಡಾ. ಬಸವಲಿಂಗ ಪಟ್ಟದೇವರು ಎಂದು ಪ್ರಬಂಧ ವಿಜೇತ ವಿದ್ಯಾರ್ಥಿನಿ ಅಕ್ಕಮಹಾದೇವಿ ಹೇಳಿದರು. ಸಂತಪೂರ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಪೂಜ್ಯಶ್ರೀ ನಾಡೋಜ ಡಾ. ಬಸವಲಿಂಗಪಟ್ಟದೇವರ ಅಮೃತ ಮಹೋತ್ಸವ ಪ್ರಯುಕ್ತ ಪ್ರಬಂಧ ವಿಜೇತ ವಿದ್ಯಾರ್ಥಿನಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಮುಂದಿನ ಜೀವನಕ್ಕೆ ದಾರಿ ದೀಪವಾಗಿದವರೇ ಪೂಜ್ಯಶ್ರೀಗಳು ಎಂದರು. ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಮಾತನಾಡಿ ಮಾತೃಹೃದಯಿಗಳಾದ ಪೂಜ್ಯಶ್ರೀಗಳು ಬಹಳಷ್ಟು ಕುಟುಂಬಗಳಿಗೆ ಮತ್ತು ವಿದ್ಯಾರ್ಥಿಗಳ ಬಾಳಿಗೆ ನೆರವಾಗಿದ್ದಾರೆ ಎಂದರು.

ಉಪನ್ಯಾಸಕರಾದ ಸುಧಾ ಕೌಟಿಗೆ,ಮೀರಾತಾಯಿ ಕಾಂಬಳೆ, ವನದೇವಿ ಎಕ್ಕಳೆ, ಪ್ರಿಯಾಂಕಾ ಗೊನಳ್ಳಿಕರ್,ಶಿವಪುತ್ರ ಧರಣಿ, ರಾಜಕುಮಾರ ಹಳ್ಳಿಕರ್, ಸುರೇಶ್,ಸುಧೀರ್ ಆಲೂರೆ, ಜಿತೇಂದ್ರ ಡಿಗ್ಗಿ, ಸಂತೋಷ ಧೂಳ್ಗಂಡೆ, ಮಾಹಾಂತೇಶ್ ಪಾಂಚಾಳ ಇದ್ದರು.'ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರ ಜೀವನ ಮತ್ತು ಸಾಧನೆ' ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ,ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ಅಕ್ಕಮಹಾದೇವಿ,ಸ್ವಾತಿ ಮತ್ತು ಲಕ್ಷ್ಮಿ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

# ದಮನಿತರ ಜೀವಕ್ಕೆ ಪ್ರಾಣವಾಯು ಡಿ.ದೇವರಾಜ ಅರಸ್ : ತಸೀಲ್ದಾರ ವಡ್ಡನಕೇರಿ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.20:ಮಾಜಿ ಮುಖ್ಯ ಮಂತ್ರಿ ಡಿ.ದೇವರಾಜ ಅರಸ್ ರವರು ದಮನಿತರ ಜೀವಕ್ಕೆ ಪ್ರಾಣವಾಯುಯಾಗಿದ್ದರು ಎಂದು ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ಅಭಿಪ್ರಾಯಪಟ್ಟರು.



ಪಟ್ಟಣದ ಪುರಭವನದಲ್ಲಿ ತಾಲೂಕು ಆಡಳಿತ, ತಾ.ಪಂ ಮತ್ತು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಬುಧವಾರ ಆಯೋಜಿಸಿದ್ದ ಡಿ.ದೇವರಾಜ ಅರಸ್ ರವರ 110ನೇ ಜಯಂತಿ ಮಹೋತ್ಸವದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. 60 ರಿಂದ 70 ರ ದಶಕದಲ್ಲಿ ಮುಖ್ಯಮಂತ್ರಿಯಾಗಿದ್ದು, ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಹೆಸರು ನೀಡಿ, ಕನ್ನಡ ಭಾಷೆಯನ್ನು ಆಡಳಿತ ಭಾಷೆಯನ್ನಾಗಿ ಮಾಡಿದ ಡಿ.ದೇವರಾಜ ಅರಸ್ ರವರು ದಮನಿತರ ಜೀವಕ್ಕೆ ಪ್ರಾಣಯಾವುವಾಗಿ ಕಾರ್ಯಮಾಡಿದ್ದಾರೆ.ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕಾಗಿ ವಸತಿ ನಿಲಯಗಳನ್ನು ಸ್ಥಾಪಿಸಿ, ಬಡವರ ಆಶಾದೀಪವಾಗಿ ಕಾರ್ಯಮಾಡಿದ್ದಾರೆ.ಹೀಗಾಗಿ ಇಂದಿಗೂ ಅವರನ್ನು ಎಲ್ಲರೂ ನೆನೆಯುವಂತಾಗಿದೆ ಎಂದು ಹೇಳಿದರು.ಪ್ರಾಸ್ತಾವಿಕವಾಗಿ ಮಾತನಾಡಿದ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವಿಜಯಮಾಲಾ ವಗ್ಗೆ,ತಾಲೂಕಿನಲ್ಲಿ ಮುರಾರ್ಜಿ ದೇಸಾಯಿ ವಸತಿ ಶಾಲೆ ಸೇರಿದಂತೆ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉತ್ತಮವಾದ ಆಹಾರ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಭಾಲ್ಕಿ ಪಟ್ಟಣದ ಹಿಂದುಳಿದ ವರ್ಗಗಳ ವಸತಿ ನಿಲಯ ಬಾಡಿಗೆ ಕಟ್ಟಡದಲ್ಲಿದ್ದು, ಅದಕ್ಕೆ ಸೂಕ್ತ ಸ್ಥಳಾವಕಾಸ ಒದಗಿಸಿ, ಸ್ವಂತ ಕಟ್ಟಡ ನಿರ್ಮಿಸಿಕೊಡಬೇಕು ಎಂದು ಉಸ್ತುವಾರಿ ಸಚಿವರು ಹಾಗು ತಹಸೀಲ್ದಾರರಿಗೆ ಮನವಿ ಮಾಡಿದರು.ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಶಿಕ್ಷಕ ಗಿರೀಶ ಎಮ್.ವ್ಹಿ, ಡಿ.ದೇವರಾಜ ಅರಸ್ ಕುರಿತು ವೀಶೇಷ ಉಪನ್ಯಾಸ ಮಂಡಿಸಿದರು. ಇದೇವೇಳೆ ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡಿ, ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಮತ್ತು ಸಮಾಜದ ಗಣ್ಯ ವ್ಯಕ್ತಿಗಳು ಹಾಗು ನಿವೃತ್ತ ಮುಖ್ಯಶಿಕ್ಷಕ ಜಯರಾಜ ದಾಬಶೆಟ್ಟಿ ಸೇರಿದಂತೆ ತಾಲೂಕು ಪತ್ರಕರ್ತರನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಪ್ರಮುಖರಾದ ಬಸವರಾಜ ಮಾಳಗೆ,ಪಿಎಸ್‌ಐ ಅಶೋಕ ಪಾಟೀಲ,ವಿನೋದ ರೆಡ್ಡಿ, ಸಂಜೀವಕುಮಾರ.ಪಿ, ಬಿಸಿಎಮ್ ಕಚೇರಿ ಸಿಬ್ಬಂದಿ ಗಣೇಶ, ನಾಗೇಶ, ಮಹೇಶ, ಸಂತೋಷ, ಶಶಿಕಲಾ ಉಪಸ್ಥಿತರಿದ್ದರು.ವಿಜಯಮಾಲಾ ಸ್ವಾಗತಿಸಿದರು. ದೀಪಕ ಥಮಕೆ ನಿರೂಪಿಸಿದರು. ಗಣೇಶ ವಂದಿಸಿದರು.

# ಕಮಲನಗರ ಠಾಣೆಯಲ್ಲಿ ಸದ್ಭಾವನಾ ದಿವಸ ಪ್ರತಿಜ್ಞೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.20:ಪಟ್ಟಣದ ಪೊಲೀಸ ಠಾಣೆಯಲ್ಲಿ ಬುಧವಾರ ಸದ್ಭಾವನಾ ದಿವಸ ನಿಮಿತ್ಯ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಅವರ ನೇತೃತ್ವದಲ್ಲಿ ಪ್ರತಿಜ್ಞೆ ಭೋದಿಲಾಯಿತು.



ಸದ್ಭಾವನಾ ದಿವಸ್ ಆಗಸ್ಟ್ 20 ರಂದು ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಪ್ರತಿ ವರ್ಷ ಆಚರಿಸಲಾಗುತ್ತದೆ ಎಂದು ಪಿ.ಎಸ್. ಐ. ಆಶಾ ರಾಠೋಡ ತಿಳಿಸಿದರು.

ನಂತರ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಅವರ ಪ್ರತಿಜ್ಞೆ ಹೇಳಿಸಿದರು,ಜಾತಿ,ಧರ್ಮ, ಪ್ರದೇಶ,ಮತ ಅಥವಾ ಭಾಷೆಯ ಬೇಧ ಭಾವವಿಲ್ಲದೆ ಭಾರತದ ಎಲ್ಲಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ನಾನು ಪ್ರತಿಜ್ಞೆ ಮಾಡಿದರು.

ಅಲ್ಲದೇ ವೈಯಕ್ತಿಕವಾಗಲಿ ಅಥವಾ ಸಾಮೂಹಿಕವಾಗಲಿ ನಮ್ಮಲ್ಲಿರುವ ಎಲ್ಲಾ ಭೇದ ಭಾವಗಳನ್ನು ಹಿಂಸಾಚಾರಕ್ಕೆ ಅವಕಾಶನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇವೆಂದು ಸಹ ಪ್ರತಿಜ್ಞೆ ಮಾಡುತ್ತೇನೆ ಎಂದು ಎಲ್ಲಾ ಸಿಬ್ಬಂದಿ ವರ್ಗದವರು ಸದ್ಭಾವನಾ ದಿವಸ ಪ್ರತಿಜ್ಞೆ ಮಾಡಿದರು.

# ಡಾಬಕಾ ಕೆರೆಗೆ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಭೇಟಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.20:ತಾಲೂಕಿನ ದಾಬಕಾ ಕೆರೆ (ಲೆಕಿಗೆ ) ಬುಧವಾರ ಅಧಿಕಾರ ತಂಡ ಜೋತೆ ಹೋಗಿ ಭೇಟಿ ನೀಡಿ ಬಿರುಕು ಬಿದ್ದಿರುವುದನ್ನು ಪರಿಶೀಲನೆ ಮಾಡಿದರು.



ನಂತರ ತಾಲೂಕಿನ ಚಿಕ್ಲಿ (ಯು) ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿರುವ ನಂದಿ ಬಿಜಲಗಾಂವ ಗ್ರಾಮದ ಗಂಜಿ ಕೇಂದ್ರಕ್ಕೆ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ ಮತ್ತು ತಹಶೀಲ್ದಾರ ಅಮೀತಕುಮಾರ ಕುಲಕರ್ಣಿ ಅವರು ಅತಿವೃಷ್ಟಿಯಿಂದ ನೀರು ನುಗ್ಗಿರುವ ಮನೆಗಳಿಗೆ, ಹಾನಿಗೊಂಡಿರುವ ಮನೆಗಳಿಗೆ ಭೇಟಿ ನೀಡಿ, ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಎಇಇ, ಪಿ.ಆರ್.ಇ.ಡಿ, ಅಧಿಕಾರಗಳು ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳು, ಗ್ರಾಮಸ್ಥರು ಹಾಗೂ ಇತರರು ಇದ್ದರು.

# ಶೇ.6 ಮೀಸಲಿಂದ ಹರ್ಷ: ಅನಿಲ ಡೊಂಗರಗಾಂವ

ಕಲಬುರಗಿ:ಅ.20: ಕೂಲಿ–ಅನಕ್ಷರತೆ ಕಾರಣಕ್ಕೆ ಬಲಾಢ್ಯರ ಮಧ್ಯೆ ಮೀಸಲು ಪಡೆಯುವಲ್ಲಿ ವಿಫಲವಾಗಿರುವ ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ಯೊಂದೇ ಏಕೈಕ ಆಸರೆಯಾಗಿತ್ತು. ಇದಕ್ಕಾಗಿ ಹಲವು ವರ್ಷಗಳಿಂದ ಹೋರಾಟ ಮಾಡಿದ ಪರಿಣಾಮವಾಗಿ ಮಾದಿಗ ಸಮುದಾಯಕ್ಕೆ ಶೇ.6ರಷ್ಟು ಮೀಸಲಾತಿ ದೊರಕಿರುವುದು ಅತೀವ ಸಂತೋಷ ನೀಡಿದೆ ಎಂದು ಮಾದಿಗ ಸಮಾಜದ ಯುವ ಮುಖಂಡ ಅನಿಲ ಡೊಂಗರಗಾಂವ ಸಂತಸ ವ್ಯಕ್ತಪಡಿಸಿದ್ದರು. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಮಾದಿಗ ಸಮುದಾಯಕ್ಕೆ ಶೇ.6ರಷ್ಟು ಮೀಸಲಾತಿ ದೊರೆತಿರುವುದಕ್ಕೆ



ಸಂತೋಷವೂ, ದುಃಖವೂ ಆಗಿದೆ. ನಮಗೆ ಶೇ.7ರಷ್ಟು ಮೀಸಲಾತಿ ಲಭಿಸುತ್ತದೆ ಎಂಬ ನಿರೀಕ್ಷೆ ಇತ್ತು. ಈಗ ಸಿಕ್ಕಿರುವುದಕ್ಕೆ ತೃಪ್ತಿ ಪಟ್ಟುಕೊಳ್ಳುತ್ತೇವೆ ಎಂದರು. 35 ವರ್ಷಗಳಿಂದ ಒಳಮೀಸಲಾತಿಗೆ ಒತ್ತಾಯಿಸಿ ಹೋರಾಟ ಮಾಡಿದ ಪರಿಣಾಮ ಸುಪ್ರೀಂ ಕೋರ್ಟ್ ಕಳೆದ ವರ್ಷ ಆಗಸ್ಟ್ 1ರಂದು ಐತಿಹಾಸಿಕ ತೀರ್ಪು ನೀಡಿತ್ತು. ಒಳ ಮೀಸಲಾತಿಯನ್ನು ಮಾಡುವಂಥ ಅಧಿಕಾರ ರಾಜ್ಯ ಸರ್ಕಾರಕ್ಕೆ ಇದೆ.

ಅದು ಎಲ್ಲವನ್ನೂ ಗಮನದಲ್ಲಿಟ್ಟುಕೊಂಡು ಯಾರಿಗೂ ಅನ್ಯಾಯವಾಗದಂತೆ ಮಾಡಲು ಹೇಳಿತ್ತು. ಅದರಂತೆ ಶೇ.6ರಷ್ಟು ಮೀಸಲಾತಿ ದೊರೆತಿದೆ ಎಂದು ಅವರು ಹೇಳಿದರು.

# ಡಿ.ಜೆ.ಬದಲಿಗೆ ಜಾನಪದ ವಾದ್ಯಮೇಳ ಗಳನ್ನು ಬಳಕೆಮಾಡಿ ಡಿವೈಎಸ್ಪಿ ಸಂಗಮನಾಥ ಹಿರೇಮಠ

ಸೇಡಂ,ಆ,20. ತಾಲೂಕಿನಲ್ಲಿ ಆಗಸ್ಟ್ 27 ರಂದು ಆಚರಿಸಲ್ಪಡುವ ಗಣೇಶ ಉತ್ಸವ ಮತ್ತು ಸೆಪ್ಟೆಂಬರ್ 05 ರಂದು ಆಚರಿಸಲ್ಪಡುವ ಈದ್ – ಮಿಲಾದ ಹಬ್ಬವನ್ನು ಶಾಂತಿರೀತಿಯಿಂದ ಸಂಭ್ರಮ ಸಡಗರದಿಂದ ಆಚರಿಸುವಂತೆ ಡಿವೈಎಸ್ಪಿ ಸಂಗಮನಾಥ್ ಹಿರೇಮಠ ಕರೆ.ಸೇಡಂ ಪೊಲೀಸ್ ಕಚೇರಿಯಲ್ಲಿ ಸೋಮವಾರ ಗಣೇಶ ಉತ್ಸವ ಈದ್ – ಮಿಲಾದ ಹಬ್ಬದ ಕುರಿತು ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಾರ್ವಜನಿಕ ಉತ್ಸವ ಮತ್ತು ಹಬ್ಬಗಳಲ್ಲಿ ಧ್ವನಿವರ್ಧಕ(ಡಿ.ಜೆ) ನಿಷೇದಿಸಲಾಗಿದೆ. ಜಾನಪದ ಸಂಸ್ಕೃತಿಕ ವಾದ್ಯಗಳನ್ನು ಬಳಸುವುದರಿಂದ ಗ್ರಾಮೀಣ ಸೊಗಡಿಗೆ ಪುನರ್ಜನ್ಮ ನೀಡಿದಂತಾಗುತ್ತದೆ. ಕಾನೂನು ಸುವ್ಯವಸ್ಥೆಗೆ ಯಾವುದೇ ರೀತಿ ದಕ್ಕೆ ಬಾರದಂತೆ ಹಬ್ಬ ವನ್ನು ಆಚರಣೆ ಮಾಡಬೇಕು. ಹಬ್ಬಗಳ ಆಚರಣೆಗೆ ನಮ್ಮ ಪೊಲೀಸ್ ಇಲಾಖೆ ಸಂಪೂರ್ಣ ವಾಗಿ ಸಹಕಾರನೀಡಲಿದ್ದು. ಮಣ್ಣಿನಿಂದ ತಯ್ಯಾರಿ ಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಟಾಪನೆ ಮಾಡಲು ಮುಂದಾಗಬೇಕು. ಸಾರ್ವಜನಿಕ




ಗಣೇಶ ಪ್ರತಿಷ್ಟಾಪನೆ ಮಾಡಲು ಸರಕಾರದ ನಿಯಮಗಳನ್ನು ಪಾಲನೆ ಮಾಡಬೇಕು. ವಿವಿಧ ಇಲಾಖೆ ಇಂದ ಪರವಾನಗಿಯನ್ನು ಕಡ್ಡಾಯವಾಗಿ ಪಡೆಯಬೇಕು. ಹಿಂದೂ– ಮುಸ್ಲಿಂರು ಸಹೋದರ ಭಾವನೆಯಿಂದ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಶಾಂತತೆಯಿಂದ ಹಬ್ಬಗಳನ್ನು ಆಚರಣೆ ಮಾಡಬೇಕು. ಒಬ್ಬರಿಗೊಬ್ಬರು ಸಹಕಾರ ನೀಡಬೇಕು ಗಣೇಶ್ ಉತ್ಸವಕ್ಕೆ ಮುಸ್ಲಿಂ ಬಾಂಧವರು ಸಹಾಯ ಸಹಕಾರ ನೀಡಬೇಕು ಈದ್ ಮಿಲಾದ ಹಬ್ಬಕ್ಕೆ ಹಿಂದೂ ಬಾಂಧವರು ಸಹಾಯ ಸಹಕಾರ ಕೊಡಬೇಕು ಎಂದರು. ಸೇಡಂ ಸಿಪಿಐ ಮಹದೇವಪ್ಪ. ಡಿ ಉಪಸ್ಥಿತರಿದ್ದರು. ಸೇಡಂ ಪಿ.ಎಸ್.ಐ ಉಪೇಂದ್ರಕುಮಾರ ಮಾತನಾಡಿ ಗಣೇಶ ಉತ್ಸವ ಮತ್ತು ಈದ್ ಮಿಲಾದ ಹಬ್ಬವು ಭಾವೈಕ್ಯತೆಯನ್ನು ಬೇಳೆಸುವ ಹಬ್ಬವಾಗಬೇಕು. ಸೇಡಂ ತಾಲೂಕು ಶಾಂತಿ ಮತ್ತು ಸುವ್ಯವಸ್ಥೆಗೆ ಹೆಸರು ವಾಸಿಯಾಗಿರುವ ನಗರವಾಗಿದೆ ಉತ್ಸವ ಮತ್ತು ಹಬ್ಬಗಳಿಗೆ ಡಿ. ಜೆ. ಯನ್ನು ನಿಷೇದಿಸಲಾಗಿದೆ. ಒಂದು ವೇಳೆ ಡಿ. ಜೆ. ಅಳವಡಿಸಿದ್ದಲ್ಲಿ ಕಾನೂನಿನ ಮೂಲಕ ಸೂಕ್ತವಾದ ಕ್ರಮ ಕೈಕೊಳ್ಳಲಾಗುವುದು. ಗಣೇಶ ಉತ್ಸವ ಹಾಗೂ ಈದ್ ಮಿಲಾದ್ ಹಬ್ಬದ ಪ್ರಯುಕ್ತ ನಮ್ಮ ಇಲಾಖೆಯಿಂದ ಸೂಕ್ತವಾದ ಬಂದೋಬಸ್ತ ವ್ಯವಸ್ಥೆ ಮಾಡಲಾಗುವುದು ಇದ–ಕ್ಕೆ ತಾವೆಲ್ಲರೂ ಸಹಾಯ ಸಹಕಾರ ನೀಡಬೇಕೆಂದರು. ಈ ಸಂದರ್ಭದಲ್ಲಿ ಶರಣಪ್ಪ ಪಿಎಸ್‌ಐ( ತನಿಖಾ),

ಭೀಮಣ್ಣ ಕುದರಿ ಉಪ–ತಹಸೀಲ್ದಾರರು, ಪುರಸಭೆ ಅಧಿಕಾರಿಗಳು, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಜೆಸ್ಕಾಂ ಅಧಿಕಾರಿಗಳು ಹಾಗೂ ಸೇಡಂ ನಗರದ ಹಿಂದೂ ಮತ್ತು ಮುಸ್ಲಿಂ ಭಾಂದವರು ಉಪಸ್ಥಿತರಿದ್ದರು.

ಡಿ.ಜೆ.ಬದಲಿಗೆ ಜಾನಪದ ವಾದ್ಯಮೇಳ ಗಳನ್ನು ಬಳಕೆಮಾಡಿ ಡಿವೈಎಸ್ಪಿ ಸಂಗಮನಾಥ ಹಿರೇಮಠ

# ಗಣೇಶ ಉತ್ಸವ ಮತ್ತು ಈದ್– ಮಿಲಾದ ಹಬ್ಬ ಆಚರಣೆ ಕುರಿತು ಶಾಂತಿ ಸಭೆ.




ಮಲ್ಲಮ್ಮ ನುಡಿ ವಾರ್ತೆ

ಸೇಡಂ,ಆ,18. ತಾಲೂಕಿನಲ್ಲಿ ಆಗಸ್ಟ್ 27 ರಂದು ಆಚರಿಸಲ್ಪಡುವ ಗಣೇಶ ಉತ್ಸವ ಮತ್ತು ಸೆಪ್ಟೆಂಬರ್ 05 ರಂದು ಆಚರಿಸಲ್ಪಡುವ ಈದ್ – ಮಿಲಾದ ಹಬ್ಬವನ್ನು ಶಾಂತಿರೀತಿಯಿಂದ ಸಂಭ್ರಮ ಸಡಗರದಿಂದ ಆಚರಿಸುವಂತೆ ಡಿವೈಎಸ್ಪಿ ಸಂಗಮನಾಥ್ ಹಿರೇಮಠ ಕರೆ ನೀಡಿದರು.

ಸೇಡಂ ಪೊಲೀಸ್ ಕಚೇರಿಯಲ್ಲಿ ಸೋಮವಾರ ಗಣೇಶ ಉತ್ಸವ ಈದ್ – ಮಿಲಾದ ಹಬ್ಬದ ಕುರಿತು ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸಾರ್ವಜನಿಕ ಉತ್ಸವ ಮತ್ತು ಹಬ್ಬಗಳಲ್ಲಿ ಧ್ವನಿವರ್ದಕ(ಡಿ.ಜೆ) ನಿಷೇದಿಸಲಾಗಿದೆ.ಜಾನಪದ ಸಂಸ್ಕೃತಿಕ ವಾಧ್ಯಗಳನ್ನು ಬಳಸುವುದರಿಂದ ಗ್ರಾಮೀಣ ಸೊಗಡಿಗೆ ಪುನರ್ಜನ್ಮ ನೀಡಿದಂತಾಗುತ್ತದೆ.ಕಾನೂನು ಸುವ್ಯವಸ್ಥೆಗೆ ಯಾವುದೇ ರೀತಿ ದಕ್ಕೆ ಬಾರದಂತೆ ಹಬ್ಬ ವನ್ನು ಆಚರಣೆ ಮಾಡಬೇಕು.ಹಬ್ಬಗಳ ಆಚರಣೆಗೆ ನಮ್ಮ ಪೊಲೀಸ್ ಇಲಾಖೆ ಸಂಪೂರ್ಣ ವಾಗಿ ಸಹಕಾರನೀಡಲಿದ್ದು.ಮಣ್ಣಿನಿಂದ ತಯ್ಯಾರಿ ಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಟಾಪನೆ ಮಾಡಲು ಮುಂದಾಗಬೇಕು. ಸಾರ್ವಜನಿಕ ಗಣೇಶ ಪ್ರತಿಷ್ಟಾಪನೆ ಮಾಡಲು ಸರಕಾರದ ನಿಯಮಗಳನ್ನು ಪಾಲನೆ ಮಾಡಬೇಕು. ವಿವಿಧ ಇಲಾಖೆ ಇಂದ ಪರವಾನಗಿಯನ್ನು ಕಡ್ಡಾಯವಾಗಿ ಪಡೆಯಬೇಕು. ಹಿಂದೂ– ಮುಸ್ಲಿಂರು ಸಹೋದರ ಭಾವನೆಯಿಂದ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ಶಾಂತತೆಯಿಂದ ಹಬ್ಬಗಳನ್ನು ಆಚರಣೆ ಮಾಡಬೇಕು. ಒಬ್ಬರಿಗೊಬ್ಬರು ಸಹಕಾರ ನೀಡಬೇಕು ಗಣೇಶ್ ಉತ್ಸವಕ್ಕೆ ಮುಸ್ಲಿಂ ಬಾಂಧವರು ಸಹಾಯ ಸಹಕಾರ ನೀಡಬೇಕು ಈದ್ ಮಿಲಾದ ಹಬ್ಬಕ್ಕೆ ಹಿಂದೂ ಬಾಂಧವರು ಸಹಾಯ ಸಹಕಾರ ಕೊಡಬೇಕು ಎಂದರು. ಸೇಡಂ ಸಿಪಿಐ ಮಹದೇವಪ್ಪ. ಡಿ ಉಪಸ್ಥಿತರಿದ್ದರು. ಸೇಡಂ ಪಿ.ಎಸ್.ಐ ಉಪೇಂದ್ರಕುಮಾರ ಮಾತನಾಡಿ ಗಣೇಶ ಉತ್ಸವ ಮತ್ತು ಈದ್ ಮಿಲಾದ ಹಬ್ಬವು ಭಾವೈಕ್ಯತೆಯನ್ನು ಬೇಳೆಸುವ ಹಬ್ಬವಾಗಬೇಕು. ಸೇಡಂ ತಾಲೂಕು ಶಾಂತಿ ಮತ್ತು ಸುವ್ಯವಸ್ಥೆಗೆ ಹೆಸರು ವಾಸಿಯಾಗಿರುವ ನಗರವಾಗಿದೆ ಉತ್ಸವ ಮತ್ತು ಹಬ್ಬಗಳಿಗೆ ಡಿ. ಜೆ. ಯನ್ನು ನಿಷೇದಿಸಲಾಗಿದೆ. ಒಂದು ವೇಳೆ ಡಿ. ಜೆ. ಅಳವಡಿಸಿದ್ದಲ್ಲಿ ಕಾನೂನಿನ ಮೂಲಕ ಸೂಕ್ತವಾದ ಕ್ರಮ ಕೈಕೊಳ್ಳಲಾಗುವುದು. ಗಣೇಶ ಉತ್ಸವ ಹಾಗೂ ಈದ್ ಮಿಲಾದ್ ಹಬ್ಬದ ಪ್ರಯುಕ್ತ ನಮ್ಮ ಇಲಾಖೆ ಯಿಂದ ಸೂಕ್ತ ವಾದ ಬಂದೋಬಸ್ತ ವ್ಯವಸ್ಥೆ ಮಾಡಲಾಗುವುದು ಇದ–ಕ್ಕೆ ತಾವೆಲ್ಲರೂ ಸಹಾಯ ಸಹಕಾರ ನೀಡಬೇಕೆಂದರು. ಈ ಸಂದರ್ಭದಲ್ಲಿ ಶರಣಪ್ಪ ಪಿಎಸ್ಐ (ತನಿಖಾ),

ಭೀಮಣ್ಣ ಕುದರಿ ಉಪ–ತಹಸೀಲ್ದಾರರು, ಪುರಸಭೆ ಅಧಿಕಾರಿಗಳು, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಜೆಸ್ಕಾಂ ಅಧಿಕಾರಿಗಳು ಹಾಗೂ ಸೇಡಂ ನಗರದ ಹಿಂದೂ ಮತ್ತು ಮುಸ್ಲಿಂ ಭಾಂದವರು ಉಪಸ್ಥಿತರಿದ್ದರು.

# ‘ಕಸ ಕಂಡರೆ ಫೋಟೋ ಹಾಕಿ‘ ಅಭಿಯಾನಕ್ಕೆ ಚಾಲನೆ




ತಾಳಿಕೋಟಿ: ಪಟ್ಟಣದ ಪುರಸಭೆ ಆರೋಗ್ಯ ವಿಭಾಗದ ವತಿಯಿಂದ ಕಸ ಕಂಡರೆ ಫೋಟೋ ಹಾಕಿ ಎಂಬ ವಿನೂತನ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಬುಧವಾರ ಪಟ್ಟಣದ ಪುರಸಭೆ ಸಭಾಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಈ ವಿನೂತನ ಅಭಿಯಾನಕ್ಕೆ ಅಧ್ಯಕ್ಷೆ ಜುಬೇದಾ ಬೇಗಮ್ ಹುಸೇನಭಾಷಾ ಜಮಾದಾರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕಿರಿಯ ಆರೋಗ್ಯ ನಿರೀಕ್ಷಕ ಶಿವಾನಂದ ಜುಮನಾಳ ಮಾತನಾಡಿ ಪಟ್ಟಣದ ಸ್ವಚ್ಛತೆ ಹಾಗೂ ಸೌಂದರೀಕರಣವನ್ನು ಕಾಪಾಡಲು ಪುರಸಭೆ ಆರೋಗ್ಯ ವಿಭಾಗವು ಈ ವಿನೂತನ ಅಭಿಯಾನಕ್ಕೆ ಇಂದು ಚಾಲನೆ ನೀಡಿದೆ ಇದರ ಅಡಿಯಲ್ಲಿ ಪುರಸಭೆಯು ವಾಟ್ಸಪ್ ಸಂಖ್ಯೆ 86186 96663 ಈ ಸಂಖ್ಯೆಯನ್ನು ಸಾರ್ವಜನಿಕರಿಗೆ ನೀಡುತ್ತದೆ ಇದನ್ನು ಬಳಸಿ ಅವರು ಪಟ್ಟಣದ ಯಾವುದೇ ಸ್ಥಳದಲ್ಲಿ ಕಸ ಕಂಡರೆ ಅದರ ಫೋಟೋ ತೆಗೆದು ತಮ್ಮ ಹೆಸರು ಮತ್ತು ವಿಳಾಸವನ್ನು ಈ ವಾಟ್ಸಪ್ ಗೆ ಕಳಿಸಿದರೆ ತತಕ್ಷಣ ಪೌರ ಸ್ವಚ್ಛತಾ ಕಾರ್ಮಿಕರು ಅಲ್ಲಿಗೆ ತಲುಪಿ ಸ್ವಚ್ಛತೆ ಕಾರ್ಯವನ್ನು ಮಾಡುತ್ತಾರೆ ಪಟ್ಟಣದ ಜನರು ಸಹಕರಿಸಬೇಕು ಎಂದು ತಿಳಿಸಿದವರು ಇದಕ್ಕಾಗಿ ಪಟ್ಟಣದ ಜನರಲ್ಲಿ ಜಾಗೃತಿಯನ್ನು ಮೂಡಿಸಲು ಮಾನ್ಯ ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ನಾಲ್ಕು ಜನರನ್ನು ನೇಮಿಸಲಾಗಿದ್ದು ಅವರು ಸಾರ್ವಜನಿಕರಲ್ಲಿ ತ್ಯಾಜ್ಯದ ಕುರಿತು ಜಾಗೃತಿ ಮೂಡಿಸುವ ಕಾರ್ಯ ಮಾಡುವರು ಎಂದರು. ಈ ಸಮಯದಲ್ಲಿ ಉಪಾಧ್ಯಕ್ಷೆ ಗೌರಮ್ಮ ಕುಂಬಾರ, ಮುಖ್ಯಾಧಿಕಾರಿ ವಸಂತ ಪವಾರ, ಹಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ಪುರಸಭೆ ಸದಸ್ಯರಾದ ಮುತ್ತಪ್ಪ ಚಮಲಾಪೂರ, ಪರಶುರಾಮ ತಂಗಡಗಿ, ಡಿ.ವಿ.ಪಾಟೀಲ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಅಕ್ಕಮಹಾದೇವಿ ಕಟ್ಟಿಮನಿ, ವಾಸುದೇವ ಹೆಬಸೂರ, ಮುದುಕಪ್ಪ ಬಡಿಗೇರ, ಮೈಹಿಬೂಬಿ ಮನಗೂಳಿ, ಸಾಯೀದಾಬೇಗಂ ಬೇಪಾರಿ, ಮಹಿಬೂಬಬಿ ಲಾಹೋರಿ, ಇಸ್ಮಾಯಿಲಬಿ ಮಕಾಂದಾರ ಹಾಗೂ ಸಿಬ್ಬಂದಿಗಳು ಇದ್ದರು.

# ಶ್ರೀ.ಲಕ್ಷ್ಮೀದೇವಿ ದೇವಸ್ಥಾನದ 32 ನೇ ವಾರ್ಷಿಕೊತ್ಸವ ವಿವಿಧ ಪೂಜೆಗಳು

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ:ರಾಯಚೂರು ರಸ್ತೆಯಲ್ಲಿರುವ ಶ್ರೀ.ಲಕ್ಷ್ಮೀದೇವಿ ದೇವಸ್ಥಾನದ 32 ನೇ ವಾರ್ಷಿಕೊತ್ಸವ ಅಂಗವಾಗಿ ಬೆಳಿಗ್ಗೆ ದೇವಸ್ಥಾನಲ್ಲಿ ಧ್ವಜರೋಹಣ ಮಾಡಲಾಯಿತು.ನಂತರ ಬೆಳಿಗ್ಗೆ ಪಂಚಾಮೃತ ಅಭಿಷೇಕ, ಕುಂಕಮ, ಅರ್ಚನ,ಪುಷ್ಪ ಅಲಂಕಾರ,ಪುಣ್ಯ ವಚನ,ನಡೆಯಿತು. ಮತ್ತು ಶ್ರೀ.ಲಕ್ಷ್ಮೀದೇವಿ ಗೆ ಬಂಗಾರದ ಆಭರಣಗಳೊಂದಿಗೆ ಅಲಾಂಕಾರ ಮಾಡಿದ್ದು ವಿಶೇಷವಾಗಿತ್ತು.ನಂತರ ಮಹಾ ಮಂಗಳಾರತಿ ನಡೆಯಿತು.ಈ ವರ್ಷ ವಿಶೇಷ ವಾಗಿ



ಶ್ರೀ.ಲಕ್ಷ್ಮೀದೇವಿ ಉತ್ಸವ ಮೂರ್ತಿಯನ್ನು ತಂದು ಪೂಜೆ ಮಾಡಿ ಅಲಂಕರಿಸಲಾಯಿತು. ಶ್ರೀ.ಲಕ್ಷ್ಮೀದೇವಿ ದೇವಸ್ಥಾನ ಕಮಿಟಿ ಅಧ್ಯಕ್ಷರಾದ ಸುನಂದಾ ರೆಡ್ಡಿ ಎಸ್ ಮುನ್ನೂರು,ದೇವಸ್ಥಾನ ಸಮಿತಿ ಸದಸ್ಯರಾದ ಸುಭಾಷ ರೆಡ್ಡಿ,ಹನಮಯ್ಯ ರೆಡ್ಡಿ ಮುನ್ನೂರು, ಲಕ್ಷ್ಮೀದೇವಿ ದೇವಸ್ಥಾನ ಅರ್ಚಕರು ಚಂದ್ರಕಾಂತ ಶಾಸ್ತ್ರಿ ,

ಆಚಾರರು, ನರಸಪ್ಪ ನಾಯಕ,ಪತ್ರಕರ್ತರು ರಾಜೇಶ ಮಾಣಿಕ್, ಮೌನೇಶ ದೇವಿಕೆರಿ, ಮೊಹನ ಪತ್ತಾರ,ಕುಬೇರಪ್ಪ, ನಾಗರಾಜ,ಪರಶುರಾಮ, ಸಚಿನ್ ಕೊಪ್ಪರಕರ್, ಲಿಂಗರಾಜ ಮನಗೂಳಿ, ನಂದಿಶ, ಭೀಮಣ್ಣ, ಮಧುಸೂಧನ ತಿಮ್ಮಾರೆಡ್ಡಿ ಮುನ್ನೂರು,ಸೇರಿದಂತೆ ದೇವಸ್ಥಾನಕ್ಕೆ ಮಹಿಳೆಯರು ತಂಡೊಪ ತಂಡವಾಗಿ ಶ್ರೀ.ಲಕ್ಮೀದೇವಿ ಗೆ ದರ್ಶನ ಮಾಡಲು ದೇವಸ್ಥಾನಕ್ಕೆ ಬರುತ್ತಿದ್ದು ಕಾಣಿಸಿತು.

ತಾಳಿಕೋಟಿ ಪುರಸಭೆಯ ಸರ್ವ ಸದಸ್ಯರ ಸಾಮಾನ್ಯ ಸಭೆ

# ಮೂಲಭೂತ ಸೌಕರ್ಯಕ್ಕೆ ಆದ್ಯತೆ ನೀಡಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಎಲ್ಲ 23 ವಾರ್ಡ್ ಗಳಿಗೆ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳಾದ ಸುಸಜ್ಜಿತ ರಸ್ತೆಗಳು ಚರಂಡಿ ವಿದ್ಯುತ್ ದೀಪ ಹಾಗೂ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ಕೊಟ್ಟು ಕೆಲಸ ಮಾಡಬೇಕೆಂದು ಸದಸ್ಯರು ಮುಖ್ಯಾಧಿಕಾರಿಗಳಿಗೆ ಒತ್ತಾಯಿಸಿದರು. ಪುರಸಭೆ ಅಧ್ಯಕ್ಷೆ ಜುಬೇದಾಬೇಗಂ ಹುಸೇನ ಭಾಷಾ ಜಮಾದಾರ ಅಧ್ಯಕ್ಷತೆಯಲ್ಲಿ ಬುಧವಾರ ಪಟ್ಟಣದ ಪುರಸಭೆಯ ಸಭಾಭವನದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಸದಸ್ಯರು ಆಗ್ರಹಿಸಿದರು. ಸಭೆಯಲ್ಲಿ ಒಟ್ಟು 19 ವಿಷಯಗಳ ಕುರಿತು ಚರ್ಚಿಸಲಾಯಿತು ಇವುಗಳಲ್ಲಿ ಪ್ರಮುಖವಾಗಿ ವಿವಿಧ ದಲಿತ ಪರ ಸಂಘಟನೆಗಳು ಹಾಗೂ ಇತರೆ ಸಂಘಟನೆಗಳಿಂದ ಸಿ ಎ ಸೈಟ್ ಒದಗಿಸಲು ಕೋರಿ ಬಂದ ಅರ್ಜಿಗಳ ಕುರಿತು ಮಂಜೂರಾತಿ, ಒಳಾಂಗಣ ಕ್ರೀಡಾಂಗಣ ನಿರ್ಮಾಣಕ್ಕೆ ಸಿ ಎ ಸೈಟ್ ಒದಗಿಸುವ ಕುರಿತು,ಡಾ.ಬಾಬು ಜಗಜೀವನ್ ರಾಮ್ ಭವನ ನಿರ್ಮಾಣಕ್ಕೆ ಜಾಗ ಒದಗಿಸುವ ಬಗ್ಗೆ,ಡಾ.ಬಿ.ಆರ್. ಅಂಬೇಡ್ಕರ್ ಸಮುದಾಯ ಭವನಕ್ಕೆ ಸರ್ವೆ ನಂಬರ್ 110 ಕ್ಷೇತ್ರ ಒಂದು ಎಕರೆ 13 ಗುಂಟೆ ಜಾಗದ ಕುರಿತು, ತಾಳಿಕೋಟಿ ಪುರಸಭೆಗೆ ಹತ್ತಿರದ ಗ್ರಾಮಗಳನ್ನು ಸೇರಿಸಿಕೊಂಡು ನಗರಸಭೆಯನ್ನಾಗಿ ಮೇಲ್ದರ್ಜೆಗೆ ಏರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆ, ರಜಪೂತ ಕ್ಷೇಮಾಭಿವೃದ್ಧಿ ಸಂಘ ಮತ್ತು ಟಿಪ್ಪು ಸುಲ್ತಾನ್ ವೃತ್ತ ನಿರ್ಮಿಸಲು ಜಾಗ ಕೊಡವ ಕುರಿತು, ಬಸವೇಶ್ವರ ವೃತ್ತದಲ್ಲಿ ಪೊಲೀಸ್ ಚೌಕಿ ನಿರ್ಮಾಣ, ಪುರಸಭೆಯಲ್ಲಿ ಬಾಕಿ ಉಳಿದ ಪುರಸಭೆ

ಮುದ್ದೇಬಿಹಾಳ ಮತಕ್ಷೇತ್ರದ ಶಾಸಕರಾದ ಅಪ್ಪಾಜಿ ನಾಡಗೌಡರ ಶಾಸಕರ ವಿಶೇಷ ಅನುದಾನದಡಿಯಲ್ಲಿ ಪಟ್ಟಣದ ಅಭಿವೃದ್ಧಿಗಾಗಿ ಮಂಜೂರಾದ 7 ಕೋಟಿ ಅನುದಾನದ ಕ್ರಿಯಾಯೋಜನೆ ರೂಪಿಸಿದ್ದು ರೂ 2 ಕೋಟಿ ತರಕಾರಿ ಮಾರುಕಟ್ಟೆ ನಿರ್ಮಾಣಕ್ಕೆ ಹಾಗೂ ಉಳಿದ 5 ಕೋಟಿ ಅನುದಾನ 23 ವಾರ್ಡಗಳ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಲು ತೀರ್ಮಾನಿಸಲಾಗಿದೆ.

**–ಪರುಶರಾಮ ತಂಗಡಗಿ ಅಧ್ಯಕ್ಷ ಸ್ಥಾಯಿ ಸಮಿತಿ.**

ಮಾಲ್ಕಿ ವಾಣಿಜ್ಯ ಮಳಿಗೆಗಳ ಹರಾಜು, ಪುರಸಭೆ ವ್ಯಾಪ್ತಿಯಲ್ಲಿ ಬರುವ 23 ವಾರ್ಡ್ಗಳಲ್ಲಿ ಅತಿ ಮಳೆಯಿಂದಾಗಿ ಹಾನಿಗೆ ಒಳಗಾದ ರಸ್ತೆಗಳಿಗೆ ಮುರ್ರಂ ಹಾಕೋದಕ್ಕೆ ಅನುಮೋದನೆ, ಈಗಾಗಲೇ ಹರಾಜಾದ ಮಳಿಗೆಗಳ ಮಂಜುರಾತಿ, ವಿವಿಧ ಯೋಜನೆಗಳಲ್ಲಿ ಕರೇದ ಟೆಂಡರ್ ಕಾಮಗಾರಿಗಳಿಗೆ ಬಂದ ದರವಾರುಗಳಿಗೆ ಮಂಜುರಾತಿ ನೀಡುವ ಕುರಿತು, ಹೊಸ ವಿನ್ಯಾಸಗಳಿಗೆ ಮಂಜೂರಿ ನೀಡುವ ಕುರಿತು, ಘನತಾಜ್ಯ ವಸ್ತು ವಿಲೇವಾರಿ ಸ್ಥಳದಲ್ಲಿ ಸಂಸ್ಕರಿಸಿದ ಪಾರಂಪರಿಕ ಗೊಬ್ಬರದ ಲೀಲಾವು, ಹೀಗೆ ಒಟ್ಟು 19 ವಿಷಗಳನ್ನು ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಿ ಒಪ್ಪಿಗೆ ಪಡೆಯಲಾಯಿತು. ಸದಸ್ಯರಾದ ವಾಸುದೇವ ಹೆಬಸೂರ, ಮುದುಕಪ್ಪ ಬಡಿಗೇರ ಹಾಗೂ ಜೈಸಿಂಗ್ ಮೂಲಿಮನಿ ಮಾತನಾಡಿ ಪುರಸಭೆಗೆ ವಾಣಿಜ್ಯ ಮಳಿಗೆಗಳಿಂದ ಬರಬೇಕಾದ ಬಾಡಿಗೆಯನ್ನು ವಸೂಲಿ ಮಾಡಲು ಅಧಿಕಾರಿಗಳು ಹೆಚ್ಚಿನ ಆಸಕ್ತಿ ವಹಿಸಬೇಕೆಂದು ತಿಳಿಸಿದರು ಹಾಗೂ ಅಮೃತ 2.01 ಯೋಜನೆ ಕಾಮಗಾರಿ ಕುರಿತು ಸಾಕಷ್ಟು ದೂರುಗಳಿವೆ ಅವುಗಳನ್ನು ಸರಿಪಡಿಸಬೇಕೆಂದು ಮುಖ್ಯಾಧಿಕಾರಿಗೆ ಆಗ್ರಹಿಸಿದರು.

ಈಗಾಗಲೇ ರೂಪಿಸಿದ ಕ್ರಿಯಾ ಯೋಜನೆಯ ಅನುದಾನವನ್ನು ಎಲ್ಲ 23 ವಾರ್ಡುಗಳಲ್ಲಿಯೂ ಅಗತ್ಯಕ್ಕೆ ಅನುಸಾರವಾಗಿ ಬಳಸಬೇಕು ಎಂದು ಹೇಳಿದರು. ಸದಸ್ಯರ ಸಲಹೆಗಳಿಗೆ ಸ್ಪಂದಿಸಿ ಮುಖ್ಯಾಧಿಕಾರಿ ವಸಂತ ಪವಾರ ಮಾತನಾಡಿ ಸಲಹೆಗಳನ್ನು ಪರಿಗಣಿಸಿ ಸೂಕ್ತ ಕ್ರಮವನ್ನು ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು. ಸಭೆಯಲ್ಲಿ ಪುರಸಭೆ ಉಪಾಧ್ಯಕ್ಷ ಗೌರಮ್ಮ ಕುಂಬಾರ ಸದಸ್ಯರಾದ ವಾಸುದೇವ್ ಹೆಬಸೂರ, ಕಸ್ತೂರಿಬಾಯಿ ಬಿರಾದಾರ, ಪರುಶುರಾಮ ತಂಗಡಗಿ, ಇಸ್ಮಾಯಿಲಬಿ ಮಕಾಂದಾರ, ಮುತ್ತಪ್ಪ ಚಮಲಾಪೂರ, ಶಾಂತಾಬಾಯಿ ಹೊಟ್ಟಿ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ ಸಾಹಿದಾಬೇಗಂ ಬೇಪಾರಿ, ಮುಸ್ತಫಾ ಚೌಧರಿ, ಮೈಹಿಬೂಬಿ ಮನಗೂಳಿ, ನಿಂಗಪ್ಪ ಕುಂಟೋಜಿ, ಜೈ ಸಿಂಗ್ ಮೂಲಿಮನಿ, ಜಗತಾಪ ಅಣ್ಣಪ್ಪ, ಯಾಸಿನ್ ಮಮದಾಪೂರ, ಅಕ್ಕಮಹಾದೇವಿ ಕಟ್ಟಿಮನಿ, ದುಂಡಪ್ಪಗೌಡ ಪಾಟೀಲ, ಮೋಹನ್ ಬಡಿಗೇರ, ಫಾತಿಮಾಬಿ ಖಾಜಾಬಸರಿ, ಪುರಸಭೆ ಸಿಬ್ಬಂದಿಗಳಾದ ಸಂದೀಪ ವಠಾರ, ಸುರೇಶ ಅಮರಣ್ಣವರ, ಶರಣಗೌಡ ಪಾಟೀಲ, ಫಿರೋಜ್ ಮುಲ್ಲಾ, ಶಿವಾನಂದ ಜುಮ್ಮನಾಳ, ರಂಗನಾಥ ಅಜ್ಮನಿ, ಶ್ರೀಪಾದ ಜೋಶಿ, ಸಿದ್ಧಲಿಂಗ ಪಾಟೀಲ, ಶಂಕರಗೌಡ ಬಿರಾದಾರ, ಪ್ರಭು ನಾಲತವಾಡ, ದಾವಲಸಾಬ ಜಾನ್ವೇಕರ್ ಹಾಗೂ ಪ್ರದೀಪ ಇದ್ದರು.

# ಡಿ ದೇವರಾಜ ಅರಸು ಬಡವರ ಆಶಾ ಕಿರಣ : ಸಹಾಯಕ ಆಯುಕ್ತರು

ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು ಪಟ್ಟಣದ ಮಿನಿ ವಿಧಾನಸೌಧದಲ್ಲಿ ಇಂದು ಡಿ ದೇವರಾಜ ಅರಸು ರವರ 110 ನೇ ಜಯಂತಿಯನ್ನು ಏರ್ಪಡಿಸಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು , ಸಭೆಯಲ್ಲಿ ಡಿ ದೇವರಾಜ್ ಅರಸು ರವರ ಭಾವಚಿತ್ರಕ್ಕೆ ಪುಷ್ಪ ನಮನ ಮಾಡಿದ ಲಿಂಗಸುಗೂರು ಸಹಾಯಕ ಆಯುಕ್ತರಾದ ಬಸವಣ್ಣಪ್ಪ ಕಲಶೆಟ್ಟಿ ಅಂದಿನ ಕರ್ನಾಟಕದ ಆಧುನಿಕ, ಬಡವರ ಬಂಧು, ದೀನ ದಲಿತರ ಸದಾ ಏಳಿಗೆಗಾಗಿ ಶ್ರಮಿಸಿದ ಧೀಮಂತ ನಾಯಕರು ಕರ್ನಾಟಕದ ಅಚ್ಚರಿಯ ಮುಖ್ಯಮಂತ್ರಿ ಡಿ ದೇವರಾಜ ಅರಸು ಅವರು ಅಂದು ಮುಖ್ಯಮಂತ್ರಿಯಾಗಿ ಬಡವರ ಪಾಲಿನ ಉಳುವವನೆ ಭೂಮಿ ಒಡೆಯ, ಬಡ ದಿನ ದಲಿತರ ಮಕ್ಕಳಿಗೆ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ವಸತಿ ನಿಲಯ ನಿರ್ಮಾಣ ಮಾಡಿ, ಅವರ ಹೆಚ್ಚಿನ ವಿದ್ಯಾಭ್ಯಾಸ ಹಾಗೂ ಆರ್ಥಿಕ ಸಂಕಷ್ಟದಿಂದ ಹೊರಬರಲು ಅನೇಕ ಯೋಜನೆಗಳ



ಗಟ್ಟಿ ಯೋಜನೆಗಳ ಜಾರಿಗೆ ತರುವಲ್ಲಿ ಶ್ರಮಿಸಿದ ಮಹಾನ್ ನಾಯಕ ಡಿ ದೇವರಾಜ ಅರಸು ರಾಜ್ಯ ಕಂಡ ಅಪ್ರತಿಮ ನಾಯಕ, ಅವರ ಸಾಧನೆಗೆ ಈ ಒಂದು ಜಯಂತೋತ್ಸವ ಅದ್ದೂರಿ ಕಾರ್ಯಕ್ರಮ ಸಾಕ್ಷಿ ಆಗಲಿದೆ, ಪ್ರತಿಯೊಬ್ಬರು ಅವರ ಆದರ್ಶ ನಿಷ್ಠೆಯನ್ನು ಅಳವಡಿಸಿ ಕೊಳ್ಳಬೇಕೆಂದು ಹೇಳಿದರು, ಜಿಲ್ಲಾ ಗ್ಯಾರೆಂಟಿ ಯೋಜನೆ ಅಧ್ಯಕ್ಷ ಪಾಮಯ್ಯ ಮುರಾರಿ ಮಾತನಾಡಿ ಈ ರಾಜ್ಯಕ್ಕೆ ಬಡವರ ಮೇಲೆ ಮತ್ತು ಎಷ್ಟೋ ಜನ ದಿನ ದಲಿತರ ಮೇಲೆ ಶೋಷಣೆ ಆಗುತ್ತಿರುವಾಗ ಅವರ ದಬ್ಬಾಳಿಕೆಗೆ ಅಂಜದೆ ನಿಂತು ರಾಜ್ಯದಲ್ಲಿ ತಮ್ಮದೇ ಚಾಪ ಮುಡಿಸಿ ಎಲ್ಲರ ಸಹಕಾರದಿಂದ ಬಡವರ ಪಾಲಿಗೆ ದೊಡ್ಡ ದೊಡ್ಡ ಯೋಚನೆಗಳನ್ನು ಜಾರಿಗೆ ತಂದು ಇಂದಿಗೂ ನಮ್ಮ ದೀನ ದಲಿತರ ಹಾಗೂ ನಿರ್ಗತಿಕರಿಗೆ ಆಶ್ರಯದಾತ ಡಿ ದೇವರಾಜ ಅರಸರು ಈ ರಾಜ್ಯದಲ್ಲಿ 1972 ರಲ್ಲಿ ಪ್ರಧಾನಿ ಅಭ್ಯರ್ಥಿ ಇಂದಿರಾಗಾಂಧಿಯವರನ್ನು ರಾಜ್ಯದಿಂದ ಗೆಲ್ಲಿಸಿ ಕಳಿಸಿದ ಮಹಾನ್ ತ್ಯಾಗಿ ಅಂಥವರ ಬದುಕಿನ ನಾನುಡಿಯನ್ನು ಪ್ರತಿಯೊಬ್ಬರು ಪಾಲಿಸಬೇಕೆಂದು ಹೇಳಿದರು, ಬಸನಗೌಡ ಮೇಟಿ ಈಚನಾಳ. ಅಮರೇಶ ಹೆಸರೂರ. ಶ್ರೀನಿವಾಸ ಅಮ್ಮಾಪೂರ. ಪರಮೇಶಪ್ಪ, ಸಂಜೀವಪ್ಪ ಚಲವಾದಿ, ಬಸವರಾಜ ಜಳಕಿಮಠ. ಎಪಿಎಂಸಿ ಕಾರ್ಯದರ್ಶಿ ಹಿಂದುಳಿದ ವರ್ಗ ಇಲಾಖೆ ರಮೇಶ್ ನಾಯಕ್, ಸಮಾಜ ಕಲ್ಯಾಣ ಇಲಾಖೆ ರವೀಂದ್ರ ಉಪ್ಪಾರ, ಭಾಗವಹಿಸಿದ್ದರು.

## ಕುಡಿಯುವ ನೀರಿಗಾಗಿ ಶಾಲಾ ವಿದ್ಯಾರ್ಥಿಗಳಿಂದ ಪಂಚಾಯತಿಗೆ ಮುತ್ತಿಗೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರ: ತಾಲೂಕಿನ ಗೋರೆಬಾಳ ಶಾಲಾ ವಿದ್ಯಾರ್ಥಿಗಳಿಂದ ಕುಡಿಯುವ ನೀರಿಗಾಗಿ ಗೋರೆಬಾಳ ಗ್ರಾಮ ಪಂಚಾಯತಿಗೆ ಮುತ್ತಿಗೆ ಹಾಕಿದ ಘನತೆ ಜರುಗಿದೆ.

ನಿರಂತರವಾಗಿ ಮಳೆ ಬರುತ್ತಿದೆ ನದಿಗಳು ಹರಿಯುತ್ತಿವೆ ಆದರೆ ಇಲ್ಲಿ ಕುಡಿಯುವ ನೀರು ಇಲ್ಲದೇ ಮಕ್ಕಳು ಪರದಾಟ ನಡೆಸುತ್ತಿದ್ದಾರೆ. ಲಿಂಗಸುಗೂರ ತಾಲೂಕಿನ ಎಂಥ ಆಡಳಿತ ವ್ಯವಸ್ಥೆ ವಿಪರ್ಯಾಸದ ಸಂಗತಿ

ಬರಲೇ ಬೇಕು ಬರಲೇ ಬೇಕು ಪಂಚಾಯತಿಯ ಅಧಿಕಾರಿಗಳು ಎಂದು ಕೂಗುವ ಮಕ್ಕಳು ಹೋರಾಟಗಾರರು ಅಲ್ಲ ವಿಷಯ ಏನಪ್ಪಾದರೆ..?

ಶಾಲಾ ಮಕ್ಕಳಿಗೆ ಕುಡಿಯುವ ನೀರು ಇಲ್ಲ ಪಂಚಾಯತಿಯ ಗಮನಕ್ಕೆ ತಂದರೂ ಇಲ್ಲಿಯವರೆಗೂ ಯಾವುದೇ ಪ್ರಯೋಜನೆಯಾಗಿಲ್ಲ ಶಾಲೆ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಗೋರೆಬಾಳ ಗ್ರಾಮದ ಜನರಿಗೆ ಕುಡಿಯುವ ನೀರು ಶಾಲೆಗೆ ಬರುತ್ತದೆ ಇದರಿಂದಾಗಿ ತೊಂದರೆ ಉಂಟಾಗುತ್ತಾ ಬರುತ್ತಿದೆ ಆದರೆ ಶಾಲೆ ಬೇರೆ ವ್ಯವಸ್ಥೆ ಕಲ್ಪಿಸಿಲ್ಲ ಎಂದು ಆರೋಪಿಸಿದ್ದಾರೆ

ಪಂಚಾಯತಿಯಲ್ಲಿ ಅಧಿಕಾರಿಗಳು ಇಲ್ಲದೇ ಸಮಸ್ಯೆ ಯಾರಿಗೆ ಹೇಳಬೇಕು ಅದಕ್ಕೆ ಮಕ್ಕಳು ಪಂಚಾಯತಿಯ ಮುಂದೆ ಧರಣಿ ಕುಳಿತರು.

ಈ ಸಮಸ್ಯೆ ಕುರಿತು ಶಿಕ್ಷಣ ಪಂಚಾಯತಿ ಅಧಿಕಾರಿಗಳಿಗೆ ಗಮನಕ್ಕೆ ತಂದರೂ ಇಲ್ಲಿಯವರೆಗೂ ಸಮಸ್ಯೆ ಪರಿಹಾರ ಮಾಡದ ಕಾರಣ ಮಕ್ಕಳೊಂದಿಗೆ ಪಂಚಾಯತಿಗೆ ಹೋಗಿ ಮುತ್ತಿಗೆ ಹಾಕಿದ್ದು ಎಲ್ಲಡೇ ಆಕ್ರೋಶ ವ್ಯಕ್ತವಾಗಿದೆ.

ಕೂಡಲೇ ಅಧಿಕಾರಿಗಳು ಶಾಲೆಗೆ ಕುಡಿಯುವ ನೀರು ಪ್ರತ್ಯೇಕವಾಗಿ ಮಾಡಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮುಂದಾಗಬೇಕಿದೆ.

## ಅಮರೇಶ್ವರ ಹೋಗುವ ದಾರಿಯುದ್ಧಕ್ಕೂ ಗಿಡ ಹಚ್ಚುವ ಅಭಿಯಾನ ಮಾಡುವೆ : ಅಮರೇಗೌಡ ಮಲ್ಲಾಪುರ

ಮಲ್ಲಮ್ಮ ನುಡಿ ವಾರ್ತೆ

ಲಿಂಗಸೂರು : ಶ್ರಾವಣ ಮಾಸದ ಪ್ರಯುಕ್ತ ಗುರಗುಂಟ ಅಮರೇಶ್ವರ ಸುಕ್ಷೇತ್ರಕ್ಕೆ ಭೇಟಿ ನೀಡಿದ ಕರ್ನಾಟಕ ಪರಿಸರ ರಾಜ್ಯ ಪ್ರಶಸ್ತಿ ಪುರಸ್ಕೃತ ಹಾಗೂ ವನಸಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಅಮರೇಗೌಡ ಮಲ್ಲಾಪುರವರು ಮತ್ತು ವನಸಿರಿ ತಂಡ ಸುಕ್ಷೇತ್ರ ಅಮರೇಶ್ವರನ ದರ್ಶನ ಪಡೆಯಲಾಯಿತು.

ಈ ಸುಕ್ಷೇತ್ರ ಗುರುಗುಂಟ ಅಮರೇಶ್ವರ ದೇವಸ್ಥಾನಕ್ಕೆ ಬರುವ ದಾರಿಯುದ್ದಕ್ಕೂ ಗಿಡ ಹಚ್ಚುವ ಅಭಿಯಾನ ಮಾಡಲಾಗುವುದು ಎಂದು ತಿಳಿಸಿದರು. ಮುಖ್ಯ ರಸ್ತೆ ಅಮರೇಶ್ವರ ಕ್ರಾಸ್ ನಿಂದ ಅಮರೇಶ್ವರ ದೇವಸ್ಥಾನದವರೆಗೂ 3 ಕಿ.ಮೀ ಗಿಡ ಹಚ್ಚುವ ಅಭಿಯಾನ ಕೆಲವೇ ದಿನಗಳಲ್ಲಿ ಪ್ರಾರಂಭಿಸಲಾಗುವುದು ಎಂದು ಅಮರೇಶ್ವರ ದರ್ಶನ ಪಡೆದ ನಂತರ ತಿಳಿಸಿದರು. ಇದಕ್ಕೆ ವನಸಿರಿ ತಂಡದ ಸಂಪೂರ್ಣ ಸಹಕಾರ ಪಡೆಯಲಾಗುವುದು ಮತ್ತು ಸ್ಥಳೀಯರ ಸಹಕಾರವನ್ನು ಪಡೆಯಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಅರ್ಚಕರಾದ ಗುರುಮೂರ್ತಿಯ್ಯ ಹಿರೇಮಠ, ಶಿಕ್ಷಕರಾದ ನಾಗರಾಜ ಮಾಂಡ್ರೆ, ವನಸಿರಿ ತಂಡದ ಸದಸ್ಯರಾದ ರುದ್ರಗೌಡ, ಮಂಜುನಾಥ ಪಟೇಲ್, ದುರ್ಗೇಶ ಆಖಿಕ ಉಪಸ್ಥಿತರಿದ್ದರು.


## CITATION

ಮಾನ್ಯ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.

**P&Sc ಸಂ: 01/2025**

ವೆಂಕಟಮ್ಮ ತಂದೆ ದಿ॥ ನಾಗಪ್ಪ ಕಟ್ಟೇಲ, ವಯಸ್ಸು: 39 ವರ್ಷ ಉದ್ಯೋಗ: ಮನೆ ಕೆಲಸ ಸಾ. ಕಟ್ಟೇಲಗೇರಾ ಏರಿಯಾ ಗುರುಮಠಕಲ್ ಆಧಾರ ಕಾರ್ಡ ನಂಬರ:755177007535 ತಾ:ಗುರುಮಠಕಲ್ ಜಿ:ಯಾದಗಿರಿ

................ಅರ್ಜಿದಾರಳು/ಟೆಸ್ಟೆಟರ್

//ವಿರುದ್ಧ//

1, ಹನಮಂತು ತಂದೆ ದಿ॥ ನಾಗಪ್ಪ ಕಟ್ಟೇಲ ವಯಸ್ಸು:45 ವರ್ಷ ಉದ್ಯೋಗ: ಒಕ್ಕಲುತನ ಸಾ:ಕಟ್ಟೇಲಗೇರಾ ಏರಿಯಾ ಗುರುಮಠಕಲ್ ತಾ: ಗುರುಮಠಕಲ್ ಜಿ:ಯಾದಗಿರಿ,

2. ಬಾಲಮ್ಮ ತಂದೆ ದಿ॥ ನಾಗಪ್ಪ (ಗಂಡ ಭೀಮಶಪ್ಪ) ವಯಸ್ಸು: 41 ವರ್ಷ ಉದ್ಯೋಗ: ಮನೆ ಕೆಲಸ ಸಾ: ಕಟ್ಟೇಲಗೇರಾ ಏರಿಯಾ, ಗುರುಮಠಕಲ್, ತಾ: ಗುರುಮಠಕಲ್ ಜಿ: ಯಾದಗಿರಿ,

3. ಸಂಬಂಧಪಟ್ಟ ಎಲ್ಲಾ ವ್ಯಕ್ತಿಗಳು.

..............ಎದುರುದಾರರು

ಪರಿಹಾರ:– ಪ್ರೊಬೇಟ್ ಪ್ರಕ್ರಿಯೆಗಳು, ಕಲಂ 276 ರ ಭಾರತೀಯ ಉತ್ತರಾಧಿಕಾರ ಕಾಯ್ದೆ 1925 ರ ಅಡಿಯಲ್ಲಿ ಪ್ರೊಬೇಟ್‌ಗಾಗಿ ಅರ್ಜಿ.

ಮೇಲ್ಕಾಣಿಸಿದ ಅರ್ಜಿದಾರಳು ಎದುರುದಾರರ ವಿರುದ್ಧ ಕಲಂ 276ರ ಭಾರತೀಯ ಉತ್ತರಾಧಿಕಾರ ಕಾಯ್ದೆ 1925ರ ಅಡಿಯಲ್ಲಿ ಪ್ರೊಬೇಟ್‌ಗಾಗಿ ಅರ್ಜಿ ಸಲ್ಲಿಸಿದ್ದು ಆಸಕ್ತಿಯುಳ್ಳ ಹಕ್ಕು ಪ್ರತಿಪಾದಿಸುವವರು ದಿನಾಂಕ: 26/09/2025ರಂದು ಬೆಳ್ಳಿಗ್ಗೆ 11 ಗಂಟೆಗೆ ಮಾನ್ಯ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ಖುದ್ದಾಗಿ ಅಥವಾ ತಮ್ಮ ವಕೀಲರ ಮೂಲಕ ಹಾಜರಾಗತಕ್ಕದ್ದು, ಇಲ್ಲದ್ದಿದರೆ ನಿಮ್ಮ ಅನುಪಸ್ಥಿತಿಯಲ್ಲಿ ಸದರಿ ಅರ್ಜಿಯ ಅರ್ಹತೆಯ ಆಧಾರದ ಮೇಲೆ ಏಕಪಕ್ಷಿಯ/ಏಕತರ್ಫಿ ಆದೇಶ ಮಾಡಲಾಗುವುದು.

ದಿನಾಂಕ: 18–08–2025 ರಂದು ನನ್ನ ಹಸ್ತಾಕ್ಷರ ಮತ್ತು ನ್ಯಾಯಾಲಯದ ಮೊಹರು ಹಾಕಿ

ನೀಡಲಾಗಿದೆ.

ಮುಖಾಂತರ

ಮಾರುತಿ ಎಂ. ಈಟೆ ವಕೀಲರು, ಯಾದಗಿರಿ

**–//ನ್ಯಾಯಾಲಯದ ಆದೇಶದಂತೆ//–**

Chief Administrative Officer

Dist. & Sessions Court YADGIR

# ಚಿಕಿತ್ಸಾ ವೆಚ್ಚ ಭರಿಸುವಂತೆ ಹೆಲ್ತ್ ಇನ್ಶ್ಯುರೆನ್ಸ್ ಕಂಪನಿಗೆ ಜಿಲ್ಲಾ ಗ್ರಾಹಕರ ಆಯೋಗ ಆದೇಶ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಹಣ ಪಾವತಿಸಿ ಆರೋಗ್ಯ ವಿಮೆ ಪಾಲಿಸಿ ಪಡೆದ ವ್ಯಕ್ತಿಯ ವೈದ್ಯಕೀಯ ಚಿಕಿತ್ಸಾ ವೆಚ್ಚ ಭರಿಸುವಂತೆ ಬೆಂಗಳೂರಿನ ಸ್ಟಾರ್ ಹೆಲ್ತ್ ಅಂಡ್ ಅಲೈಡ್ ಇನ್ಶೂರೆನ್ಸ್ ಕಂಪನಿಗೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಆದೇಶಿಸಿದೆ.

ಸಿರುಗುಪ್ಪ ತಾಲ್ಲೂಕಿನ ಮಣ್ಣೂರು ಪೋಸ್ಟ್ ಸೂಗೂರಿನ ತಿಲಕ್.ಎಸ್ ಎನ್ನುವವರು ಸ್ಟಾರ್ ಹೆಲ್ತ್ ಅಂಡ್ ಅಲೈಡ್ ಇನ್ಶೂರೆನ್ಸ್ ಕಂಪನಿ ಲಿಮಿಟೆಡ್, ಬೆಂಗಳೂರು ಇಲ್ಲಿ 2023 ರ ಸೆ.23 ರಿಂದ 2024 ರ ಸೆ.22 ರವರೆಗೆ ರೂ.55,495 ಗಳ ವಿಮಾ ಕಂತು ಪಾವತಿಸಿ ಆರೋಗ್ಯ ವಿಮೆ ಪಾಲಿಸಿ ಪಡೆದುಕೊಂಡಿದ್ದರು.

ಚಾಲ್ತಿಯ ಅವಧಿಯಲ್ಲಿ ಒಳರೋಗಿಯಾಗಿ ಕೊರನರಿ ಆರ್ಟರಿ ಕಾಯಿಲೆಗೆ ಆಂಜಿಯೋಪ್ಲಾಸ್ಟಿ ಮತ್ತು ಸ್ಟಂಟ್ ಅಳವಡಿಕೆ ಚಿಕಿತ್ಸೆ ಪಡೆದಿದ್ದು, ವೆಚ್ಚ ರೂ.4,05,476 ಭರಿಸಿದ್ದರು. ವೆಚ್ಚ ಪಾವತಿಸುವಂತೆ ಕಂಪನಿಗೆ ಕ್ಲೈಮ್ ಅರ್ಜಿ ಸಲ್ಲಿಸದ್ದರು.

ವಿಮಾ ಕಂಪನಿಯು ದೂರುದಾರರು ಪಾಲಿಸಿ ನವೀಕರಣದ ಮುನ್ನ ಹಿಂದೆ ಸಿವಿಎ ಮತ್ತು ಸಿಓಪಿಡಿ (cho-ronic obstructive pulmonary disease) ರೋಗಕ್ಕೆ ಚಿಕಿತ್ಸೆ ಪಡೆದಿರುವುದನ್ನು ಮುಚ್ಚಿಟ್ಟು ವಿಮಾ ಷರತ್ತನ್ನು ಉಲ್ಲಂಘನೆ ಮಾಡಿದ್ದಾರೆಂದು ಕ್ಲೈಮ್ ನ್ನು ತಿರಸ್ಕರಿಸಿದ್ದರು.

ಆಯೋಗದ ಅಧ್ಯಕ್ಷ ಎನ್.ತಿಪ್ಪೇಸ್ವಾಮಿ ಮತ್ತು ಮಹಿಳಾ ಸದಸ್ಯರಾದ ಮಾರ್ಲಾ ಶಶಿಕಲಾ ಇವರು ಉಭಯ ಪಕ್ಷಗಾರರ ವಾದ ಪ್ರತಿವಾದ ಮತ್ತು ದಾಖಲೆಗಳನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ ದೂರುದಾರರು ಪ್ರಸ್ತುತ ಪಾಲಿಸಿಯ ನವೀಕರಣದ ಮುನ್ನ ಸಿಓಪಿಡಿ ರೋಗಕ್ಕೆ ಚಿಕಿತ್ಸೆ ಪಡೆದಿರುವುದೆಂದು ಪ್ರಮಾಣ ಪತ್ರ ಸಲ್ಲಿಸಿದ್ದು, ಸಂಬಂಧಿಸಿದ ವೈದ್ಯರ ಸಾಕ್ಷಿ ಹೇಳಿಕೆಯನ್ನು ದಾಖಲಿಸದಿರುವುದು, ಚಿಕಿತ್ಸೆ ಪಡೆದ ಬಗ್ಗೆ ಸಾಬೀತುಪಡಿಸದೇ ವಿಮಾ ಕಂಪನಿಯು ದೂರುದಾರರ ವೈದ್ಯಕೀಯ ಚಿಕಿತ್ಸೆ ವೆಚ್ಚ ಮೊತ್ತ ರೂ.4,05,476/-ಗಳನ್ನು ಪಾವತಿಸದೇ ಇರುವುದು ಸೇವಾ ನಿರ್ಲಕ್ಷ ತನವಾಗಿದೆ ಎಂದು ಅಭಿಪ್ರಾಯಪಟ್ಟಿತು.

1 ರಿಂದ 3ರ ಎದುರುದಾರರ ವಿಮಾ ಕಂಪನಿಯು ದೂರುದಾರರಿಗೆ ವೈದ್ಯಕೀಯ ಚಿಕಿತ್ಸೆ ವೆಚ್ಚ ರೂ.4,05,476, ಸೇವಾ ನ್ಯೂನ್ಯತೆ ಹಾಗೂ ಮಾನಸಿಕ ಹಿಂಸೆಗೆ ಪರಿಹಾರ ರೂ.10,000 ದೊಂದಿಗೆ ರೂ.5,000 ಗಳ ಪ್ರಕರಣದ ವೆಚ್ಚ ಸೇರಿ 45 ದಿನಗಳ ಒಳಗೆ ಪಾವತಿಸಬೇಕು. ತಪ್ಪಿದಲ್ಲಿ ಚಿಕಿತ್ಸೆ ವೆಚ್ಚ ರೂ.4,05,476 ಗಳಿಗೆ ಶೇ.6 ರಷ್ಟು ಬಡ್ಡಿ ಮೊತ್ತ ಪಾವತಿಸಲು ಭಾದ್ಯಸ್ಥರಾಗಿರುತ್ತಾರೆ ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಆಯೋಗವು ಆದೇಶಿಸಿದೆ.

# ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಆಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರಸ್ತಕ ಸಾಲಿನ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಆಯೋಜಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

*ತಾಲ್ಲೂಕು ಮಟ್ಟದ ಕ್ರೀಡಾ-ಕೂಟ ವೇಳಾಪಟ್ಟಿ:*

ಆ.23 ರಂದು ಬೆಳಿಗ್ಗೆ 10.30 ಗಂಟೆಗೆ ಕಂಪ್ಲಿ ತಾಲ್ಲೂಕಿನ ಎಮ್ಮಿಗನೂರಿನ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ. ಆ.25 ರಂದು ಬೆಳಿಗ್ಗೆ 10.30 ಗಂ-ಟೆಗೆ ಸಿರುಗುಪ್ಪದ ತಾಲ್ಲೂಕು ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ. ಆ.29 ರಂದು ಬೆಳಿಗ್ಗೆ 10.30 ಗಂಟೆಗೆ ಬಳ್ಳಾರಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಆ.31 ರಂದು ಬೆಳಿಗ್ಗೆ 10.30 ಗಂ-ಟೆಗೆ ಕುರುಗೋಡಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.

*ಸೂಚನೆ:*

ಕ್ರೀಡಾಕೂಟದಲ್ಲಿ ಆಯಾ ತಾಲ್ಲೂಕಿನ ಪುರುಷ ಮತ್ತು ಮಹಿಳಾ ಕ್ರೀಡಾಪಟುಗಳು ಅಥ್ಲೆಟಿಕ್ಸ್, ವಾಲಿಬಾಲ್, ಕಬಡ್ಡಿ, ಖೋ-ಖೋ, ಫುಟ್ಬಾಲ್(ಪುರುಷರಿಗೆ ಮಾತ್ರ), ಥ್ರೋಬಾಲ್, ಯೋಗ ಕ್ರೀಡೆಗಳಲ್ಲಿ ಭಾಗವಹಿಸಬಹುದು.

ತಾಲ್ಲೂಕು ದಸರಾ ಸ್ಪರ್ಧೆಗಳಲ್ಲಿ ಆಯಾ ತಾಲ್ಲೂಕು ಕ್ರೀಡಾಪಟುಗಳು ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ. ಕ್ರೀಡಾಪಟುಗಳು ಪ್ರತಿನಿಧಿಸುವ ತಾಲ್ಲೂಕು ದೃಢೀಕರಣದ ಬಗ್ಗೆ ದಾಖಲೆಗಳನ್ನು ಸಲ್ಲಿಸಬೇಕು. ಬೇರೆ ಜಿಲ್ಲೆಯ ಕ್ರೀಡಾಪಟುಗಳು ಭಾಗವಹಿಸಲು ಅವಕಾಶ ಇರುವುದಿಲ್ಲ.

ನೋಂದಣಿ ಸಮಯದಲ್ಲಿ ಕಡ್ಡಾಯವಾಗಿ ಶಾಲಾ / ಕಾಲೇಜಿನ ಗುರುತಿನ ಚೀಟಿ, ಆಧಾರ್ ಕಾರ್ಡ್, ರೇಷನ್ ಕಾರ್ಡ್, ಮತದಾರರ ಗುರುತಿನ ಚೀಟಿ ಹಾಗೂ ಸರ್ಕಾರದಿಂದ ಅಧಿಕೃತ ಇರುವ ಇತರೆ ಗುರುತಿನ ಚೀಟಿಯೊಂದಿಗೆ ಹಾಜರಾಗಬೇಕು.

ಕ್ರೀಡಾಪಟುಗಳು ಒಂದೊಮ್ಮೆ ವಿದ್ಯಾಭ್ಯಾಸ ಅಥವಾ ಸೇವೆಯಲ್ಲಿದ್ದರೆ ಸಂಬಂಧಪಟ್ಟ ಕಾಲೇಜು-ಸಂಸ್ಥೆಗಳ ಗುರುತಿನ ಚೀಟಿಯೊಡನೆ ಭಾಗವಹಿಸಲು ಅವಕಾಶ ಇರುತ್ತದೆ.

ಪ್ರಸಕ್ತ ಸಾಲಿನ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳನ್ನು ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದವರಿಗೆ DasaraCMCup2025 Sports Registration QR Code ನಲ್ಲಿ ನೋಂದಣಿ ಕಡ್ಡಾಯವಾಗಿ ಮಾಡಿಕೊಳ್ಳಬೇಕು. ತಪ್ಪಿದಲ್ಲಿ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸಿಲು ಅವಕಾಶ ಇರುವುದಿಲ್ಲ.

ತಾಲ್ಲೂಕು ಮಟ್ಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಮತ್ತು ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ. ವಿವಿಧ ಮಟ್ಟದ ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳಿಗೆ ಮಾತ್ರ ಅರ್ಹರಿರುತ್ತಾರೆ.

ಕ್ರೀಡಾ ಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆ ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅರ್ಹರರಲ್ಲ. ತಾಲ್ಲೂಕು ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ. ಒಂದು ಕ್ರೀಡಾಪಟು ಕೇವಲ ಒಂದು ಗುಂಪು ಕ್ರೀಡೆಯಲ್ಲಿ ಮಾತ್ರ ಭಾಗವಹಿಸಲು ಅವಕಾಶ ಇರುತ್ತದೆ. ಹೆಚ್ಚಿನ ವಿವರಗಳಿಗಾಗಿ ತರಬೇತುದಾರರಾದ ಎಂ.ಜಾಕೀರ್ ಮೊ.9036335986, ಮಹ್ಮದ್ ಮಸೂದ್ ಮೊ.9886688858, ಕಚೇರಿ ಸಿಬ್ಬಂದಿ ಮೊ.8971238689 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಎಸ್‌ಎನ್‌ಎಲ್: ರೂ.1/- ಗೆ 'ಫ್ರೀಡಂ ಪ್ಲಾನ್' 4ಜಿ ಸೇವೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20--ಭಾರತ ಸಂಚಾರ ನಿಗಮ ಲಿಮಿಟೆಡ್ ಬಳ್ಳಾರಿ ಜಿಲ್ಲಾ ಕಚೇರಿ ವತಿಯಿಂದ ರೂ.1/- ಗೆ 4ಜಿ ಸೇವೆಯ "ಫ್ರೀಡಂ ಪ್ಲಾನ್" ಪರಿಚಯಿಸುವ ನಿಟ್ಟಿನಲ್ಲಿ ಬುಧವಾರ ನಗರದಲ್ಲಿ ಕಾಲ್ನಡಿಗೆ ಜಾಥಾ ನಡೆಸಲಾಯಿತು.

ಆಗಸ್ಟ್-2025 ತಿಂಗಳಿಗೆ ಸೀಮಿತವಾದ ಅವಧಿಗೆ ಮಾತ್ರ ಗ್ರಾಹಕರು ರೂ.1/- ಗೆ 4ಜಿ ಸೇವೆ ಪಡೆಯಬಹುದು. ಈ ಪ್ಲಾನ್ ನಲ್ಲಿ ಅನಿಯಮಿತ ಧ್ವನಿ ಕರೆಗಳು, ದಿನಕ್ಕೆ 2ಜಿಬಿ ಡೇಟಾ ಮತ್ತು 100 ಎಸ್‌ಎಂಎಸ್, ಉಚಿತ ಸಿಮ್ ಪಡೆಯಬಹುದು (30 ದಿನಗಳಿಗೆ ಮಾತ್ರ). ಈ ಸೌಲಭ್ಯವನ್ನು ಸಾರ್ವಜನಿಕರು ಎಲ್ಲಾ ಗ್ರಾಹಕ ಸೇವಾ ಕೇಂದ್ರಗಳಲ್ಲಿ ಪಡೆಯಬಹುದಾಗಿದೆ.

ಜಾಥಾವು ಬಿಎಸ್‌ಎನ್‌ಎಲ್ ಕಚೇರಿಯಿಂದ ಆರಂಭವಾಗಿ ಹೆಚ್.ಆರ್.ಗವಿಯಪ್ಪ ವೃತ್ತ, ಗಡಗಿ ಚೆನ್ನಪ್ಪ ವೃತ್ತ(ರಾಯಲ್ ಸರ್ಕಲ್) ಮೂಲಕ ಮರಳಿ ಬಿಎಸ್‌ಎನ್‌ಎಲ್ ಕಚೇರಿವರೆಗೆ ಬಂದು ಅಂತ್ಯಗೊಂಡಿತು. ಜಾಥಾದಲ್ಲಿ ಕಚೇರಿಯ ಉಪಪ್ರಧಾನ ವ್ಯವಸ್ಥಾಪಕ, ಕಚೇರಿ ಸಿಬ್ಬಂದಿಗಳು ಭಾಗವಹಿಸಿದ್ದರು.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಬಳ್ಳಾರಿ ತಾಲ್ಲೂಕಿನ ಕೊಳಗಲ್ಲು ಗ್ರಾಮದ 4ನೇ ವಾರ್ಡ್ನ ಪ್ರಗತಿ ಕೃಷ್ಣ ಗ್ರಾಮೀಣ ಬ್ಯಾಂಕ್ ಹತ್ತಿರದ ನಿವಾಸಿಯಾದ ಸಿಂಧವಾಳ ವೆಂಕಟೇಶ್ ಎನ್ನುವ 72 ವರ್ಷದ ವ್ಯಕ್ತಿಯು ಆ.06 ರಂದು ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಅಸಿಸ್ಟೆಂಟ್ ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ:

ಅಂದಾಜು 5.9 ಅಡಿ ಎತ್ತರ, ಕೋಲು ಮುಖ, ಕಪ್ಪು ಮೈಬಣ್ಣ, ತೆಳ್ಳನೇಯ ಮೈಕಟ್ಟು ಹೊಂದಿದ್ದು, ಬಿಳಿ ಕೂದಲು ಮತ್ತು ಬಲಗಣ್ಣು ಸ್ವಲ್ಪ ಮುಚ್ಚಿರುತ್ತದೆ. ಎದೆ-ಯ ಬಲಭಾಗದಲ್ಲಿ ಕಪ್ಪು ಮಚ್ಚೆ, ಬಲಗಾಲು ತೊಡೆಯ ಭಾಗದಲ್ಲಿ ಹಳೇ ಗಾಯದ ಗುರುತು ಇರುತ್ತದೆ.

ಕಾಣೆಯಾದ ಸಂದರ್ಭದಲ್ಲಿ ನೀಲಿ ಗೆರೆಗಳಿರುವ ಬಿಳಿ ಬಣ್ಣದ ತುಂಬುತೋಳಿನ ಅಂಗಿ ಮತ್ತು ಬಿಳಿ ಬಣ್ಣದ ಪಂಚೆ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392-276461, ಮೊ.9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣಾ ಕೇಂದ್ರದ ಬ್ಯಾಂಕ್-2 ಫೀಡರ್ ಎಫ್-76 ರಲ್ಲಿ ತುರ್ತು ನಿರ್ವಹಣಾ ಕಾಮಗಾರಿ ಹಮ್ಮಿಕೊಳ್ಳುತ್ತಿರುವುದರಿಂದ ಆ.21 ರಂದು ಬೆಳಿಗ್ಗೆ 08 ರಿಂದ ಸಂಜೆ 05 ಗಂಟೆಯವರೆಗೆ ನಗರದ ಮೋರ್ ಗಲ್ಲಿ, ವಟ್ಟಪ್ಪಗೆರೆ, ಕುಣಿತಾಣ ಮಸೀದಿ, ದಾನಪ್ಪ ರಸ್ತೆ, ಅರಣ್ಯ ಕ್ವಾಟರ್ಸ್, ಜಾಗೃತಿ ನಗರ, ರೇಷ್ಮೆ ಇಲಾಖೆ, ಟೀಚರ್ಸ್ ಕಾಲೋನಿ, ಈದ್ಗಾ ಮೈದಾನ, ರಾಮಾಂಜನೇಯ ನಗರ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಳ್ಳಾರಿಯಲ್ಲಿ ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆ ಸಮಾರಂಭ

# ಸಾಮಾಜಿಕ ಕ್ರಾಂತಿಯ ಹರಿಕಾರ ದೇವರಾಜ ಅರಸು: ಅಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ರಾಜ್ಯದಲ್ಲಿ ಭೂಒಡೆತನ, ಮೀಸಲಾತಿ ಸೌಲಭ್ಯ ಕಲ್ಪಿಸಿ ಶೋಷಿತ ಸಮುದಾಯಗಳಿಗೆ ಅಸ್ಮಿತೆಯನ್ನು ತಂದುಕೊಟ್ಟ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಸಾಮಾಜಿಕ ಕ್ರಾಂತಿಯ ಹರಿಕಾರ ಎಂದು ಡಾ.ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣ ರಸ್ತೆಯ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಬುಧವಾರ ಏರ್ಪಡಿಸಿದ್ದ ಸಾಮಾಜಿಕ ನ್ಯಾಯದ ಹರಿಕಾರ, ಹಿಂದುಳಿದ ವರ್ಗಗಳ ನೇತಾರ ಹಾಗೂ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 110ನೇ ಜನ್ಮದಿನಾಚರಣೆಯ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇವರಾಜ ಅರಸು ಅವರನ್ನು ಸಾಮಾಜಿಕ ನ್ಯಾಯದ ಹರಿಕಾರ ಎಂದು ಕರೆಯುತ್ತೇವೆ. 1972 ರಿಂದ 1980 ರವರೆಗೆ ಮುಖ್ಯಮಂತ್ರಿಯಾಗಿದ್ದ ಅವರು ಕರ್ನಾಟಕದ ಅಪರೂಪದ ರಾಜಕಾರಣಿ. ಬಡವರು, ಸಾಮಾಜಿಕ ನ್ಯಾಯದ ಪರವಾಗಿ ಇದ್ದವರು ಎಂದರು.

ಉಳುವವನೆ ಭೂಮಿ ಒಡೆಯ ಕಾಯ್ದೆಯ ಪರಿಣಾಮವಾಗಿ ಚಿಕ್ಕ ಸಮುದಾಯದವರು ಸಹ ಭೂಮಿ ಹೊಂದಲು ಸಾಧ್ಯವಾಗಿದೆ. ಅಂದಿನ ಸಂದರ್ಭದಲ್ಲಿ ಜೀತಪದ್ಧತಿ, ಮಲಹೊರುವ ಪದ್ಧತಿ ನಿರ್ಮೂಲನೆಯ ಮೂಲಕ ಸಾಮಾಜಿಕ ಪರಿವರ್ತನೆಗೆ ಶ್ರಮಿಸಿದರು. ಸಮಾಜಮುಖಿ ಕಾರ್ಯಗಳತ್ತ ಅವರ ಮನಸು ಸದಾ ತುಡಿಯುತ್ತಿತ್ತು ಎಂದು ಹೇಳಿದರು. ದೇವರಾಜು ಅರಸು ಅವರು ಹಲವು ಕ್ರಾಂತಿಕಾರಕ ಯೋಜನೆಗಳನ್ನು ಜಾರಿಗೊಳಿಸಿ ಪರಿಶಿಷ್ಟ ಜಾತಿ, ಪಂಗಡ ಮತ್ತು ಹಿಂದುಳಿದ ವರ್ಗಕ್ಕೆ ಅನುಕೂಲ ಮಾಡಿಕೊಟ್ಟರು. ದಕ್ಷ ಆಡಳಿತಗಾರ ಆಗಿದ್ದ ಅವರು ಎಲ್.ಜಿ.ಹಾವನೂರು ವರದಿ ಜಾರಿಗೊಳಿಸಿ ಸಣ್ಣ, ಶೋಷಿತ ಸಮುದಾಯಕ್ಕೆ ನೆರವಾದರು ಎಂದರು.

ಇಂದಿನ ಯುವ ಪೀಳಿಗೆಯು ಮೊಬೈಲ್ ಗೀಳಿಗೆ ಬೀಳಬಾರದು. ಅದರಿಂದ ಒಳ್ಳೆಯ ವಿಚಾರಗಳನ್ನು ಮಾತ್ರ ಆಸ್ವಾದಿಸಬೇಕು. ಸಮಾಜದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಅವರು ಮಾತನಾಡಿ, ಒಬ್ಬ ಮನುಷ್ಯ ದೇವರಾಗಲು ಸಾಧ್ಯವಿಲ್ಲ. ಅಂದಿನ ಸಮಯದಲ್ಲಿ ದೇವರಾಜು ಅರಸರನ್ನು ಬಡವರು, ದಲಿತರು, ಹಿಂದುಳಿದ ವರ್ಗದವರ ದೇವರೆಂದೇ ಭಾವಿಸಿದ್ದರು. ಯಾರೇ ಆದರೂ ಅಧಿಕಾರವನ್ನು ಒಳ್ಳೆಯ ಕೆಲಸಗಳಿಗಾಗಿಯೇ ವಿನಿಯೋಗಿಸದಾಗ ಮಾತ್ರ ಸಾರ್ಥಕವಾಗುತ್ತದೆ ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಅರಸು ರೂಪಿಸಿದ ಮಾರ್ಗದಲ್ಲಿಯೇ ರಾಜ್ಯ ಸರ್ಕಾರ ಸಾಗುತ್ತಿದೆ. ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ರಾಜ್ಯದ ಬಡವರು, ಮಧ್ಯಮ ವರ್ಗದವರು ಸೇರಿದಂತೆ ಸಮ ಸಮಾಜ ನಿರ್ಮಾಣಕ್ಕೆ ನಾಂದಿಹಾಡಿದವರು ಮುಖ್ಯಮಂತ್ರಿ ಸಿದ್ದರಾಮಯ್ಯನವರು. ಅರಸು ಅವರ ಹಾದಿಯಲ್ಲೇ ಸಾಗುತ್ತಿದ್ದಾರೆ ಎಂದರು.

ಹೊಸಪೇಟೆಯ ಹಂಪಿ ವಿದ್ಯಾರಣ್ಯ ಕನ್ನಡ ವಿಶ್ವವಿದ್ಯಾಲಯದ ಸಾಹಿತ್ಯ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಹಾಗೂ ಮುಖ್ಯಸ್ಥ ಡಾ.ವೆಂಕಟಗಿರಿ ದಳವಾಯಿ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಹಣ ಮತ್ತು ಅಧಿಕಾರ ಒಂದೇ ಕಡೆ ಇರಬಾರದು, ಇದ್ದರೆ ಅಲ್ಲಿ ಪ್ರಜಾಪ್ರಭುತ್ವ ಸತ್ತಂತೆ ಎಂದು ಅಭಿಪ್ರಾಯಪಟ್ಟವರು ಡಿ.ದೇವರಾಜು ಅರಸರು. ಅವರು ಜಾರಿಗೆ ತಂದ ಹಲವಾರು ಕಾಯ್ದೆ-ಕಾನೂನುಗಳು, ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಅಂದಿನ ಅಧಿಕಾರಿ ವರ್ಗವು ಪ್ರಮುಖ ಪಾತ್ರವಹಿಸಿತ್ತು ಎಂದು ಪ್ರತಿಪಾದಿಸಿದರು.

ಡಿ.ದೇವರಾಜ ಅರಸು ಅವರು ಕರ್ನಾಟಕದ ಪುಣ್ಯ, ದೂರದೃಷ್ಟಿ ಹೊಂದಿದ ಬಹುತ್ವವಾದಿಯಾಗಿದ್ದವರು. ವಿಧಾನಸೌಧದ ಮೆಟ್ಟಿಲು ಹತ್ತದವರನ್ನು ವಿಧಾನಸೌಧಕ್ಕೆ ಬರುವ ಹಾಗೆ ಮಾಡಿದವರು. ದೇವರಾಜು ಅವರ ಕನಸುಗಳನ್ನು ಈಡೇರಿಸುವ ಹೊಣೆಗಾರಿಕೆ ಈಗಿನ ಯುವಕರ ಮೇಲಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಸಂವಿಧಾನ ಪೀಠಿಕೆ ಬೋಧಿಸಲಾಯಿತು. ನಂತರ 'ಸದ್ಭಾವನಾ ದಿನಾಚರಣೆ' ಅಂಗವಾಗಿ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು. ಅತಿಹೆಚ್ಚು ಅಂಕ ಪಡೆದ, ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿ ನಿಲಯದ ವಿದ್ಯಾರ್ಥಿಗಳಿಗೆ ಪ್ರಶಸ್ತಿ, ಪ್ರಮಾಣ ಪತ್ರ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಎ.ಕೆ., ವಿಶ್ವಕರ್ಮ ಅಭಿವೃದ್ಧಿ ನಿಗಮದ ನಿರ್ದೇಶಕ ಚಂದ್ರಶೇಖರ್, ಮಹಾನಗರ ಪಾಲಿಕೆಯ ಸಭಾನಾಯಕ ಪಿ.ಗಾದೆಪ್ಪ, ಮುಖಂಡರಾದ ಕಲ್ಲುಕಂಭ ಪಂಪಾಪತಿ, ಎಲ್.ಮಾರೆಣ್ಣ, ಗಾದಿಲಿಂಗನಗೌಡ, ಮಂಜುಳಾ ಸೇರಿದಂತೆ ಜಿಲ್ಲೆಯ ಚುನಾಯಿತ ಪ್ರತಿನಿಧಿಗಳು, ಹಿಂದುಳಿದ ವರ್ಗಗಳ ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ಇಲಾಖೆಯ ಅಧಿಕಾರಿ-ಸಿಬ್ಬಂದಿ ಹಾಗೂ ವಸತಿನಿಲಯದ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಮಾಜಿ ದೇವದಾಸಿ ಮಹಿಳೆಯರ ನಿವೇಶನ ಹೊಂದಿರುವ ವಸತಿರಹಿತರಿಂದ ವಸತಿ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಚೇರಿಯಿಂದ ಪಡೆದು ಭರ್ತಿ ಮಾಡಿ, ಪೂರಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಇದೇ ಕಚೇರಿಗೆ ಸೆ.25 ವರೆಗೆ ಸಲ್ಲಿಸಬಹುದಾಗಿದೆ.

*ಬೇಕಾದ ದಾಖಲೆ:*

ಜಾತಿ ಮತ್ತು ಆದಾಯ ಪ್ರಮಾಣಪತ್ರ(ಆರ್.ಡಿ.ನಂಬರ್ ಹೊಂದಿರಬೇಕು), ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಭಾವಚಿತ್ರ-4, ನಿವೇಶನ ಖಾತಾ ಉತ್ತಾರ, ಆಧಾರ್ ಕಾರ್ಡ್ ಪ್ರತಿ, ಚಾಲ್ತಿ ಬ್ಯಾಂಕ್ ಪಾಸ್ ಪುಸ್ತಕ, ಮೊಬೈಲ್ ನಂಬರ್, ಗ್ರಾಮ ಪಂಚಾಯತಿ ವತಿಯಿಂದ ವಸತಿ ಸೌಲಭ್ಯ ಪಡೆದಿರುವುದಿಲ್ಲವೆಂಬ ದೃಢೀಕರಣ ಪತ್ರ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಎಸ್‌ಪಿ ವೃತ್ತದ ಬಳಿಯ ದೇವಿನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.01 ರಂದು ಕುಂದು-ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.20-ಬಳ್ಳಾರಿ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಸೆ.01 ರಂದು ಮಧ್ಯಾಹ್ನ 12.30 ಗಂಟೆಗೆ ಬಳ್ಳಾರಿಯ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

# ಹಳ್ಳಿಖೇಡ (ಕೆ) ಸರಕಾರಿ ಪ್ರೌಢ ಶಾಲೆಯ ಮಕ್ಕಳಿಗೆ ಬ್ಯಾಗ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಅ.20:ಅಭಿಷೇಕ. ಆರ್.ಪಾಟೀಲ್,ನಿರ್ದೇಶಕರುಕರ್ನಾಟಕ ರಾಜ್ಯಸಹಕಾರ ಮಹಾಮಂಡಳದ ನಿ,ಬೆಂಗಳೂರು,–ಅಧ್ಯಕ್ಷರು ಜಿಲ್ಲಾ ಸಹಕಾರ ಯೂನಿಯನ ನಿ ಬೀದರ ಹಾಗೂ –ಉಪಾಧ್ಯಕ್ಷರು ಡಿ.ಸಿ.ಸಿ. ಬ್ಯಾಂಕ ಬೀದರ.ರವರು ಹಳ್ಳಿಖೇಡ (ಕೆ) ಗ್ರಾಮದ ಸರಕಾರಿ ಶಾಲೆಯ ಬಡ ವಿದ್ಯಾರ್ಥಿಗಳಿಗೆ ಬ್ಯಾಗ್ ಗಳನ್ನು ವಿತರಿಸಿದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅಭಿಷೇಕ ಆರ್ ಪಾಟೀಲ್ ರವರು Onity group(previouslyknown asocwenfinancials)ಓಉಖಿ ಕಂಪನಿಯು ಅಖಖ ಕಠಟುಭಿಥಿ ಯಡಿ ಈ ಸಂಸ್ಥೆಯು ತಮಗೆ ಬಂದ ಲಾಭದಲ್ಲಿ ಬಡವರ ಸೇವೆಗೆ ಮುಂದಾಗಿ ಸಾಮಾಜಿಕ ಪರ ಕಾರ್ಯಗಳನ್ನು ನೆರವೇರಿಸಿಕೊಂಡು ಬಂದಿರುವುದು ಇಂದು ನಮ್ಮ ತಾಲೂಕಿನ ಹಳ್ಳಿಖೇಡ (ಕೆ) ಗ್ರಾಮದ ಸರಕಾರಿ ಶಾಲೆಯ ಮಕ್ಕಳಿಗೆ ಮಾಜಿ ಸಚಿವರಾದ ಸನ್ಮಾನ್ಯ ಶ್ರೀ ರಾಜಶೇಖರ ಬಿ ಪಾಟೀಲ್ ರವರ ಆದೇಶದ ಮೇರೆಗೆ ಕ್ಷೇತ್ರದ ಹಳ್ಳಿಖೇಡ (ಬಿ) ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳಿಗೆ ಬ್ಯಾಗಗಳನ್ನು ವಿತರಿಸಲಾಗಿದೆ ಶಾಲಾ ಮುಖ್ಯಸ್ಥರ ಕೋರಿಕೆಯ ಮೇರೆಗೆ ಶಾಲೆಯ ಕೆಲವು ಕುಂದು ಕೊರತೆಗಳನ್ನು ಆದಷ್ಟು ಬೇಗ ನಿವಾರಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಂಪನಿಯ ಸೀನಿಯರ್ ಮ್ಯಾನೇಜರ್ ಶ್ರೀ ಶ್ರೀರಾಮ ಕುಲಕರ್ಣಿ, ಶ್ರೀ ಸಿದ್ದೇಶ ಮಿರ್ಚೆ ರವರು ಅಲ್ಲದೆ ಸ್ಥಳೀಯ ಮುಖಂಡರಾದ ಉದಯಕುಮಾರ ವಾರದ,ರಮೇಶ್ ವಾರದ,ವಿಶ್ವನಾಥ ಚಿಕ್ಕ ಪಾಟೀಲ್, ಗುಂಡಪ್ಪ ಕೋರಿ, ಮಹೇಶ ಚಿಲಶೆಟ್ಟಿ,ಮಸ್ತಾನ್ ಕೇಬಲ್, ರೇವಣಸಿದ್ದಪ್ಪ ಮೇಲಿನಕೇರಿ, ಭೀಮಶಾ ಕೋರಿ, ಶಿವಕುಮಾರ ಮೇಲಿನಕೇರಿ, ಅರುಣ ಕಲ್ಲೂರ, ಮಹಾದೇವ ಗೋಸಾಯಿ, ಅರುಣ ಪಾಟೀಲ್, ಉಮೇಶ ದಾಡಗೆ, ಎಸ್ ಡಿ ಎಂ ಸಿ ಅಧ್ಯಕ್ಷರು ಶಾಲಾ ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸೆ.13 ರಂದು ಜಿಲ್ಲೆಯಲ್ಲಿ ಬೃಹತ್ ರಾಷ್ಟ್ರೀಯ ಲೋಕ ಆದಾಲತ್:ನ್ಯಾ.ಪ್ರಕಾಶ ಬನಸೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ 20 : ಗೌರವಾನ್ವಿತ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಸೆಪ್ಟೆಂಬರ್.13 ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬೃಹತ್ ಲೋಕ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ಅವರು ತಿಳಿಸಿದರು.ಅವರು ಬುಧವಾರದಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಭಾಂಗಣದಲ್ಲಿ ಸೆಪ್ಟೆಂಬರ್.13 ರಂದು ನಡೆಯುವ ಬೃಹತ್ ಲೋಕ ಅದಾಲತ್‌ನ ಪೂರ್ವ ಸಿದ್ಧತೆ ಕುರಿತು ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಪ್ರಸ್ತುತ ಚಾಲ್ತಿಯಲ್ಲಿರುವ ಆಸ್ತಿಪಾಲು ವಿಭಾಗ ಜೀವನಾಂಶ, ಚೆಕ್ ಬೌನ್ಸ್, ವಿದ್ಯುತ್ ಪ್ರಕರಣಗಳು ಕಂದಾಯ ಅಪರಾಧಿಕ ಪ್ರಕರಣಗಳಲ್ಲಿ ರಾಜಿ ಮಾಡಿಕೊಳ್ಳುವಂತಹ ಪ್ರಕರಣಗಳು,ಕಾರ್ಮಿಕರ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥ ಮಾಡಲು ಅವಕಾಶ ಇರುತ್ತದೆ ಎಂದರು.ಈ ಹಿಂದೆ ದಿನಾಂಕ 12–07–2025 ರಂದು ನಡೆದ ರಾಷ್ಟ್ರೀಯ ಲೋಕ ಅದಾಲತನಲ್ಲಿ ಜಿಲ್ಲೆಯಾದ್ಯಾಂತ ಒಟ್ಟು 52,812 ಪ್ರಕರಣಗಳನ್ನು ಲೋಕಆದಲಾತನಲ್ಲಿ ಇತ್ಯರ್ಥಗೊಳಿಸಲಾಗಿದ್ದು ಇದರಲ್ಲಿ 10,697 ಪೆಂಡಿಂಗ್ ಪ್ರಕರಣಗಳು, 70,811 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ.ಈ ಬಾರಿ ಲೋಕಅದಾಲತನಲ್ಲಿ ನ್ಯಾಯಾಲಯದಲ್ಲಿ ಬಾಕಿ (ಪೇಂಡಿಂಗ) ಇರುವ ಪ್ರಕರಣಗಳನ್ನು ಹೆಚ್ಚು ಹೆಚ್ಚು ಇತ್ಯಾರ್ಥಗೊಳಿಸಲು ಯೋಜನೆ ರೂಪಿಸಲಾಗಿದ್ದು, ಜಿಲ್ಲೆಯಲ್ಲಿ ಒಟ್ಟು 29,327 ಪ್ರಕರಣಗಳು ಪೆಂಡಿಂಗ್ ಇದ್ದು ಹೆಚ್ಚು ಪ್ರಕರಣಗಳನ್ನು ರಾಜಿ ಮಾಡುವ ಗುರಿ ಹೊಂದಿದ್ದೇವೆ ಹಾಗೂ ಎಲ್ಲಾ ಪೂರ್ವತಯಾರಿ ಮಾಡಿಕೊಂಡಿದ್ದೇವೆ. ಪ್ರಕರಣಳಲ್ಲಿ ರಾಜಿ ಮಾಡಿಕೊಳ್ಳುವುದರಿಂದ ಕಕ್ಷಿದಾರನಿಗೆ ನ್ಯಾಯಲಯ ಶುಲ್ಕ ವಾಪಸ್ ಸಿಗಲಿದೆ ಮೇಲ್ಮನವಿ ಮಾಡಲು ಅವಕಾಶ ಇರುವುದಿಲ್ಲ ಇಬ್ಬರೂ ಪಕ್ಷಗಾರರು ತಮ್ಮ ದ್ವೇಷ ಮರೆತು ಸುಮಧುರ ಬಾಂಧವ್ಯ ಹೊಂದುವ ಅವಕಾಶ ಇರುತ್ತದೆ ಹಾಗೆ ಯಾವುದೇ ಖರ್ಚು ವೆಚ್ಚ ಇಲ್ಲದೆ ಶೀಘ್ರವಾಗಿ ಪ್ರಕರಣಗಳು ಇತ್ಯರ್ಥವಾಗುತ್ತವೆ ಎಂದು ಅವರು ತಿಳಿಸಿದರು.

# ಹಿಂದುಳಿದ ವರ್ಗಗಳ ಅಭಿವೃದ್ಧಿಯ ಹರಿಕಾರ ಡಿ. ದೇವರಾಜ ಅರಸು: ರಾಯಪ್ಪ ಹುಣಸಗಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ 20 :ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ್ ಅರಸು ರವರು ಸಮಾಜದಲ್ಲಿ ಆರ್ಥಿಕವಾಗಿ ಬಡವರು ನಿರ್ಗತಿಕರು, ಅಲೆಮಾರಿ ಜನಾಂಗದವರನ್ನು ಮತ್ತು ಹಿಂದುಳಿದ ವರ್ಗದ ಜನರ ಅಭಿವೃದ್ಧಿಗಾಗಿ ಅವಿರತವಾಗಿ ಶ್ರಮಿಸುವುದರ ಮೂಲಕ ತಮ್ಮ ಸಾಮಾಜಿಕ ಸೇವೆಯನ್ನು ಮಾಡಿದ ಮಹಾನ್ ವ್ಯಕ್ತಿ ಎಂದು ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಲಬುರಗಿ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕಲಬುರಗಿ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ರಾಜ್ಯದ ಮಾಜಿ ಮುಖಮಂತ್ರಿಗಳು ಹಾಗೂ ಹಿಂದುಳಿದ ವರ್ಗಗಳ ಪರಿವರ್ತನೆಯ ಹರಿಕಾರರಾದ ಶ್ರೀ ಡಿ. ದೇವರಾಜ ಅರಸು ರವರ 110 ನೇ ಜನ್ಮ ದಿನಾಚರಣೆ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಉಚಿತವಾಗಿ ಐ.ಎ.ಎಸ್.ಮತ್ತು ಕೆ.ಎ.ಎಸ್.ತರಭೇತಿ ನೀಡಬೇಕೆಂದು ಸಂಘದವರಿಂದ ಮನವಿ ಪತ್ರ ಸ್ವೀಕರಿಸಲಾಗಿದ್ದು, ಇದನ್ನು ಸರ್ಕಾರದ ಗಮನಕ್ಕೆ ತಂದು ತರಭೇತಿ ಕೇಂದ್ರಗಳನ್ನು ಸ್ಥಾಪಿಸಿ ಹೈದ್ರಾಬಾದ ಮತ್ತು ಬೆಂಗಳೂರು ಮಾದರಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ಬಳಸಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ನಡೆಸಿ ಜೀವನದಲ್ಲಿ ಬರುವ ಪ್ರತಿಯೊಂದು ಸಮಸ್ಯೆಗಳನ್ನು ಎದುರಿಸುವ ಮುಖಾಂತರ ಪ್ರತಿಯೊಬ್ಬರು ಸಾಧನೆ ಮಾಡಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ ಹಿಂದುಳಿದ ವರ್ಗಗಳ ಅಭಿವೃದ್ಧಿಯ ಹರಿಕಾರ ಡಿ. ದೇವರಾಜ್ ಅರಸು ಅವರು ತಮ್ಮ ಅಧಿಕಾರ ಅವಧಿಯಲ್ಲಿ ಶಾಂತಿಯುತವಾಗಿ ಸಾಮಾಜಿಕ ಕ್ರಾಂತಿ ಮಾಡುವುದರ ಮುಖಾಂತರ ಹೆಚ್ಚಿನ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮಾಡಿದ ಮಹಾನ ವ್ಯಕ್ತಿ ಇವರು ಹಿಂದುಳಿದ ವರ್ಗಗಳ ಇಲಾಖೆ ಸ್ಥಾಪಿಸುವುದರ ಮುಖಾಂತರ ಸಮಾಜದಲ್ಲಿ ಆರ್ಥಿಕವಾಗಿ ಹಿಂದುಳಿದವರು ಬಡವರು ನಿರ್ಗತಿಕರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಶ್ರಮಿಸಿದ ಮಹಾನ ವ್ಯಕ್ತಿ ಎಂದರು.

ಗ್ಯಾರೆಂಟಿ ಯೋಜನಾ ಸಮಿತಿಯ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಮಾತನಾಡಿ, ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಿ.ದೇವರಾಜ್ ಅರಸು ರವರು ತಮ್ಮ ಅಧಿಕಾರ ಅವಧಿಯಲ್ಲಿ ಬಳಷ್ಟು ಜನಪರ ಕಾರ್ಯಗಳು ಮಾಡುವುದರ ಮುಖಾಂತರ ಹಿಂದುಳಿದ ವರ್ಗಗಳ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿದ್ದ ಮಹಾನ ವ್ಯಕ್ತಿ ಇಂಥಹ ಮಹಾನ ವ್ಯಕ್ತಿ ಮಾರ್ಗದರ್ಶನದಲ್ಲಿ ಸನ್ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ಸರ್ಕಾರ ದೇಶದ ಅಭಿವೃದ್ಧಿಗಾಗಿ ಪ್ರತಿಯೊಂದು ಕ್ಷೇತ್ರಕ್ಕೂ ಸಮರ್ಪಕ ಅನುದಾನ ಮೀಸಲಿಟ್ಟು ದೇಶದ ಅಭಿವೃದ್ಧಿಯನ್ನೆ ಮುಖ್ಯಧ್ಯೆಯವಾಗಿಸಿಕೊಂಡು ಡಿ. ದೇವರಾಜ್ ಅರಸು ರವರು ಕಂಡ ಅಭಿವೃದ್ಧಿ ಕನಸನ್ನು ಸಕಾರಗೊಳಿಸಲು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಈ ಭಾಗದ ಹೆಚ್ಚಿನ ವಿದ್ಯಾರ್ಥಿಗಳು ಸಿವಿಲ್ ಸರ್ವೀಸ್ ಪರೀಕ್ಷೆ ಬರೆದು ಐ.ಎ.ಎಸ್.ಮತ್ತು ಐ.ಪಿ.ಎಸ್. ಅಧಿಕಾರಿಗಳಾಗಿ ಜನರ ಸಮಸ್ಯೆಗಳನ್ನು ಅರಿತುಕೊಂಡು ಅಧಿಕಾರಿಗಳಾಗಿ ಸೇವೆ ಸಲ್ಲಿಸುವಂತಹ ಸಾಧನೆ ಮಾಡಬೇಕೆಂದು ಹೇಳಿದರು.

ವಿಶೇಷ ಉಪನ್ಯಾಸಕರಾಗಿ ಹಾಗೂ ಸಂಪನ್ಮೂಲ ವ್ಯಕ್ತಿಳಾಗಿ ಬಿ.ಎಂ.ರಾವೂರ ಅವರು ಮಾತನಾಡಿ, ಹಿಂದುಳಿದ ವರ್ಗಗಳ ಅಭಿವೃದ್ಧಿ ಮಹಾನ ವ್ಯಕ್ತಿ ಡಿ. ದೇವರಾಜ್ ಅರಸು ಅವರು ತಮ್ಮ ಬಿ.ಎಸ್.ಸಿ. ಪದವಿ ಮುಗಿಸಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಹಿಂದುಳಿದ ಅಭಿವೃದ್ಧಿಗಾಗಿ ಸಾಕಷ್ಟು ಶ್ರಮಿಸುವುದರ ಮುಖಾಂತರ ಹಲವಾರು ಕಾಯ್ದೆಗಳನ್ನು ಜಾರಿಗೆ ತರುವ ಮುಖಾಂತರ ಅಭಿವೃದ್ಧಿ ಪರ ಕಾರ್ಯಗಳನ್ನು ಮಾಡಿದ ಮಹಾನ ರಾಜಕೀಯ ಮುತ್ಸದಿ ಡಿ. ದೇವರಾಜ ಅರಸು ಎಂದು ಹೇಳಿದರು.

ದೇಶದಲ್ಲಿ ಯಾವುದೇ ವ್ಯಕ್ತಿ ಶಿಕ್ಷಣದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ವಿದ್ಯಾರ್ಥಿಗಳಿಗೆ ವಸತಿ ನಿಲಯ ಸ್ಥಾಪಿಸುವ ಮುಖಾಂತರ ವಿದ್ಯಾರ್ಥಿಗಳ ಉನ್ನತ ಶಿಕ್ಷಣ ಕನಸನ್ನು ನನಸಾಗಿ ಮಾಡಲು ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನು ಮಾಡುವುದು ಮುಖಾಂತರ ಬಡವರು, ಅಲೆಮಾರಿ ಮತ್ತು ನಿರ್ಗತಿಕರ ಅಭಿವೃದ್ಧಿಗಾಗಿ ಶ್ರಮಿಸಿದ ಮಹಾನ ವ್ಯಕ್ತಿ ಎಂದರು.

ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಉಪನಿರ್ದೇಶಕ ವೈ ಸೋಮಶೇಖರ ಅವರು ಸ್ವಾಗತಿಸಿದರು.

2024–25ನೇ ಸಾಲಿನ ಸ್ನಾತಕೋತರ ಪದವಿಯ ಎಂ.ಎಸ್.ಸಿ.(ಬಿ.ಟಿ.) ಪ್ರಥಮ ಸ್ಥಾನ, ಶ್ವೇತ ಪ್ರಕಾಶ ಸಿಂಗ್, ದ್ವಿತೀಯ, ಶಿವಕುಮಾರ ಪೇಮನಗೌಡ, (ಸಿ.ಜಿ.ಪಿ)., ಎಂ.ಎ ಯಲ್ಲಿ ಚನ್ನಮ್ಮ ಸದಾಶಿವ, ಈರಮ್ಮ, ಶಿವಮೂರ್ತಿ, ದೀಪಾ ರಮೇಶ, ಎಂ.ಎಸ್.ಡಬ್ಲ್ಯೂ, ಚೈತ್ರ ಬಸವರಾಜ ಎಂ.ಕಾಂ, ಪ್ರಶಸ್ತಿ ಪತ್ರಗಳನ್ನು ನೀಡಿ ಸನ್ಮಾನಿಸಲಾಯಿತು.

ಪದವಿ ಪರೀಕ್ಷೆಯಲ್ಲಿ ಗಂಗಾ ರಮೇಶ, ಅಭಿಷೇಕ ಪ್ರೇಮಕುಮಾರ, ಪರೀಕೆ ಪಿ.ಯು.ಸಿ. ಮಹೇಶ್ವರಿ ನಾಗಪ್ಪ, ಶೃತಿ ಲಕ್ಷ್ಮಣ, ಚನ್ನಮ್ಮ ಸುರೇಶ ಸೇರಿದಂತೆ ಎಸ್.ಎಸ್.ಎಲ್.ಸಿ. ಸಂಜನಾ, ರತ್ನಾ ನಾಯಕ ಸಾಯಿಕುಮಾರ, ದಿಲೀಪ ಕುಮಾರ, ಸಿದ್ರಮ್ಮ ದಯಾನಂದ ಸಹನಾ ಹಣಮಂತ ಸೇರಿದಂತೆ ಪ್ರಥಮ, ದ್ವಿತೀಯ, ತೃತೀಯ, ಸನ್ಮಾನಿಸಲಾಯಿತು. ಅದೇ ರೀತಿಯಾಗಿ ಭಾಷಣ, ಸ್ಪರ್ಧೆ ಪ್ರಬಂಧ, ರಸ ಪ್ರಶ್ನೆ ಪಡೆದಂತಹ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಮೆರವಣಿಗೆಯು ಕಲಬುರಗಿ ನಗರದ ನಗರೇಶ್ವರ ಶಾಲೆಯಿಂದ ಬೆಳಿಗ್ಗೆ 9.00 ಗಂಟೆಗೆ ಡಿ. ದೇವರಾಜ್ ರವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್. ಮಾಲಾರ್ಪಣೆ ಮಾಡಿ ಚಾಲನೆ ನೀಡಿದರು. ಸಿ.ಇ.ಓ.ಭಂವರ ಸಿಂಗ್ ಮೀನಾ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರು ಇದ್ದರು. ಬಳಿಕ ನಗರೇಶ್ವರ ಶಾಲೆಯಿಂದ ಕಲಾ ತಂಡಗಳ ಭವ್ಯ ಮೆರವಣಿಗೆ ಮೂಲಕ ಹೊರಟು ವೀರಶೈವ ಕಲ್ಯಾಣ ಮಂಟಪಕ್ಕೆ ಬಂದು ತಲುಪಿತು.

ಕಾರ್ಯಕ್ರಮದಲ್ಲಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಜಗದೇವಪ್ಪ, ಶಂಕರ ಕಟ್ಟಿ ಸಂಗಾವಿ, ಸಚಿನ ಚವ್ಹಾಣ, ಶೇಖರ ಸಿಂಗ್, ವೀರಣ್ಣ ಗೌಡ, ಅಮೀರ ಹುಸೇನ್. ಆನಂದ ವಾರಿಕ್ ಮುಖಂಡರು. ಸೇರಿದಂತೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರು, ವಾರ್ಡನಗಳು, ವಸತಿ ನಿಲಯದ ಮಕ್ಕಳು, ವಸತಿ ಶಾಲೆ ಮಕ್ಕಳು, ಹಿಂದುಳಿದ ತಾಲೂಕು ಮಟ್ಟದ ಅಧಿಕಾರಿಗಳು ಮುಖಂಡರು ಸಾಹಿತಿಗಳು ಅಧಿಕಾರಿಗಳು ಶಾಲಾ ಕಾಲೇಜಿನ ಮಕ್ಕಳು ವಸತಿ ನಿಲಯ ಮಕ್ಕಳು ಪಾಲಕರು ಪೋಷಕರು ಹಾಜರಿದ್ದರು. ಬೆಳಮಗಿ ಮುರಾಜಿ ದೇಸಾಯಿ ವಸತಿ ಶಾಲೆಯ ಶಿಕ್ಷಕ ಅಣವೀರ ಕಾರ್ಯಕ್ರಮ ನಿರೂಪಿಸಿ ವಂದಿಸಿದ್ದರು.

# ದುರ್ಬಲ ವರ್ಗದವರ ಏಳಿಗೆಗೆ ಶ್ರಮಿಸಿದವರು ದೇವರಾಜ ಅರಸು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.20–ಹಿಂದುಳಿದವರ ಸರ್ವತೋಮುಖ ಅಭಿವೃದ್ದಿಗಾಗಿ ಹತ್ತು ಹಲವು ಕಾರ್ಯಕ್ರಮ ಜಾರಿಗೊಳಿಸಿ ದುರ್ಬಲ ವರ್ಗದ ಜನರ ಏಳಿಗೆಗೆ ಶ್ರಮಿಸಿದವರು ಡಿ.ದೇವರಾಜ ಅರಸು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಡಿ.ದೇವರಾಜ ಅರಸು 110ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹಾವನೂರು ಆಯೋಗದ ಶಿಫಾರಸ್ಸಿನ ಅನ್ವಯ ನೀಡಲಾದ ಶೈಕ್ಷಣಿಕ ಹಾಗೂ ಔದ್ಯೋಗಿಕ ಮೀಸಲಾತಿ, ಭೂ ಸುದಾರಣೆ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಉಳುವವನೇ ಭೂಮಿಯ ಒಡೆಯನನ್ನಾಗಿ ಮಾಡಿದ್ದಾರೆ. ಇಂತಹ ಮಹಾನ್ ನಾಯಕನ ಇತಿಹಾಸವನ್ನು ಇಂದಿನ ಯುವ ಪೀಳಿಗೆ ಅನುಸರಿಸುವ ಅಗತ್ಯವಿದೆ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ, ಅರಸು ಅವರು ರಾಜಮನೆತನದಲ್ಲಿ ಹುಟ್ಟಿದರೂ ದೀನದಲಿತರ ಹಾಗೂ ಬಡವರ ಪರವಾಗಿ ಸಮಾಜಮುಖಿ ಕಾರ್ಯಗಳನ್ನು ಮಾಡಲು ಮುಂದಾಗಿದ್ದರು. ಅವರ ಆಡಳಿತಾವಧಿಯಲ್ಲಿ ಜಾರಿಗೆ ತಂದ ಉಳುವವನೇ ಭೂಮಿಯ ಒಡೆಯ ಕಾಯಿದೆಯಿಂದ ಲಕ್ಷಾಂತರ ಬಡ ಕುಟುಂಬಗಳಿಗೆ ಆಧಾರವಾಗಿದೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಮೂಲಸೌಕರ್ಯಗಳನ್ನು ಒದಗಿಸಲು ಅವರು ಹೋರಾಡಿದ ಪರಿಣಾಮವಾಗಿ, ಇಂದಿನ ಹಿಂದುಳಿದ ವಿದ್ಯಾರ್ಥಿ ನಿಲಯಗಳಲ್ಲಿ ಸಕಲ ಸೌಲಭ್ಯಗಳು ಲಭ್ಯವಾಗುತ್ತಿವೆ ಎಂದರು.

ಉಪನ್ಯಾಸ ನೀಡಿದ ನ್ಯಾಯವಾದಿ ಮಹಾಂತೇಶ ಆವಾರಿ, ದೇವರಾಜ ಅರಸು ಅವರು ಕರ್ನಾಟಕವನ್ನು ಸಾಂಸ್ಕೃತಿಕವಾಗಿ ಒಗ್ಗೂಡಿಸುವ ಕೆಲಸ ಮಾಡಿದ್ದಾರೆ. ಮಲ ಹೊರುವ, ಜೀತ ಪದ್ಧತಿ ನಿರ್ಮೂಲನೆ, ದುಡಿಯುವ ವರ್ಗಕ್ಕೆ ಆರ್ಥಿಕ ಸ್ಥಿತಿ ಸುಧಾರಣೆ ಮಾಡುವ ಕಾರ್ಯ ಮಾಡಿದ್ದಾರೆ ಎಂದು ಹೇಳಿ, ದೇವರಾಜ ಅರಸು ಅವರು ನಡೆದು ಬಂದ ಹಾದಿ ಹಾಗೂ ಆದರ್ಶಗಳ ಬಗ್ಗೆ ವಿವರವಾಗಿ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಇಲಾಖೆಯಲ್ಲಿ ಸೇವೆ ಸಲ್ಲಿಸಿ ವಯೋ ನಿವೃತ್ತಿ ಹೊಂದಿದವರನ್ನು ಸನ್ಮಾನಿಸಲಾಯಿತು. ಅಲ್ಲದೇ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಇಲಾಖೆ ವ್ಯಾಪ್ತಿಯ ವಿವಿಧ ವಸತಿ ನಿಲಯಗಳ ವಿದ್ಯಾರ್ಥಿಗಳನ್ನು ಸಹ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ರಮೇಶ ಚವ್ಹಾಣ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಈರಪ್ಪ ಆಶಾಪೂರ, ತಾಲೂಕಾ ಅಧಿಕಾರಿ ಎಸ್.ಎಂ.ಬಡಿಗೇರ, ಇಲಾಖೆಯ ವ್ಯವಸ್ಥಾಪಕ ಶಿವು ದರಗಾದ, ಸಮುದಾಯದ ಮುಖಂಡ ಶ್ರೀನಿವಾಸ ಬಳ್ಳಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಭಾವಚಿತ್ರದ ಮೆರವಣಿಗೆ**

ಡಿ.ದೇವರಾಜ ಅರಸು ಅವರ 110ನೇ ಜಯಂತಿ ಅಂಗವಾಗಿ ಜಿಲ್ಲಾಡಳಿತ ಭವನದ ಆವರಣದಲ್ಲಿ ದೇವರಾಜ ಅರಸು ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಸಿಇಓ ಶಶಿಧರ ಕುರೇರ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಕಲಾಭವನಕ್ಕೆ ಮುಕ್ತಾಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾ ತಂಡಗಳು ಭಾಗವಹಿಸಿದ್ದವು.

# ಗೃಹಲಕ್ಷ್ಮೀ ಯೋಜನೆಯಿಂದ 2 ಲಕ್ಷ ಮಂದಿ ಅನರ್ಹರು ಹೊರಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅ.20: ಗೃಹಲಕ್ಷ್ಮೀ ಯೋಜನೆ ಫಲಾನುಭವಿಗಳಲ್ಲಿ ಅನರ್ಹರನ್ನ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಪತ್ತೆ ಹಚ್ಚಿದೆ. ತೆರಿಗೆ ಪಾವತಿ ಮಾಡ್ತಾ ಇದ್ದ 2 ಲಕ್ಷ ಮಂದಿಯನ್ನ ಅನರ್ಹರು ಎಂದು ಪರಿಗಣಿಸಿ ಯೋಜನೆಯಿಂದ ಕೈಬಿಡಲು ಇಲಾಖೆ ಮುಂದಾಗಿದೆ.ಟ್ಯಾಕ್ಸ್ ಪೇಯರ್ ಅಂತಾ ಪರಿಗಣಿಸಿ ಅನರ್ಹರನ್ನ ಪತ್ತೆ ಹಚ್ಚಲಾಗಿದೆ.ಸದ್ಯ 1.28 ಕೋಟಿ ಗೃಹಲಕ್ಷ್ಮೀ ಫಲಾನುಭವಿಗಳು ಇದ್ದು,ಪ್ರತಿ ತಿಂಗಳು ಕೂಡ ಅನರ್ಹರನ್ನ ಇಲಾಖೆ ಅಧಿಕಾರಿಗಳು ಪತ್ತೆ ಹಚ್ಚುತ್ತಿದ್ದಾರೆ. ಆದಾಯ ತೆರಿಗೆ ಮಾಹಿತಿ ಜೊತೆಗೆ ತೆರಿಗೆ ಪಾವತಿ ಮಾಹಿತಿ ಆಧರಿಸಿ ಅನರ್ಹರು ಅಂತಾ ಪರಿಗಣನೆಗೆ ತೆಗೆದುಕೊಳ್ಳಲಾಗಿದೆ. ಸ್ತ್ರೀ ಶಕ್ತಿ ಸಂಘ ಮಾದರಿಯಲ್ಲಿ ಗೃಹಲಕ್ಷ್ಮೀ ಸಂಘಗಳನ್ನ ಮಾಡೋದಕ್ಕೆ ಇಲಾಖೆ ಸಿದ್ಧತೆ ನಡೆಸಿದ್ದು, ಗೃಹಲಕ್ಷ್ಮೀ ಸಂಘಗಳ ರಚನೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಸರ್ಕಾರ ಪ್ರಸ್ತಾವನೆಯನ್ನ ಒಪ್ಪಿದ್ರೆ ಗೃಹಲಕ್ಷ್ಮೀ ಸಂಘಗಳ ರಚನೆ ಪ್ರಕ್ರಿಯೆ ಶುರುವಾಗಲಿದೆ.ಗೃಹಲಕ್ಷ್ಮೀ ಯೋಜನೆಯಡಿ ಮನೆ ಯಜಮಾನಿಯರು ಪ್ರತಿ ತಿಂಗಳು ಪಡೆಯುವ ಎರಡು ಸಾವಿರ ರೂ.ಗಳನ್ನು ಸಂಘಗಳಲ್ಲಿ ಹೂಡಿಕೆ ಮಾಡಿ, ಸ್ವ–ಉದ್ಯೊ?ಗದೊಂದಿಗೆ ಮತ್ತಷ್ಟು ಹಣ ಸಂಪಾದಿಸಿ ಆರ್ಥಿಕವಾಗಿ ಸಬಲಗೊಳಿಸಲು ಸಂಘಗಳು ನೆರವಾಗಲಿವೆ. 4ರಿಂದ 10 ಮಂದಿಗೆ ಒಂದು ಸಂಘ ರಚಿಸಲು ಉದ್ದೆ?ಶಿಸಲಾಗಿದೆ.

# ದೆಹಲಿ ಸಿಎಂಗೆ ಕಪಾಳಮೋಕ್ಷ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.20: ಮುಖ್ಯಮಂತ್ರಿ ರೇಖಾ ಗುಪ್ತಾ ಅವರಿಗೆ ವ್ಯಕ್ತಿಯೊಬ್ಬ ಕಪಾಳಮೋಕ್ಷ ಮಾಡಿದ ಘಟನೆ ಇದೀಗ ರಾಷ್ಟ್ರರಾಜಧಾನಿಯಾದ್ಯಂತ ಸದ್ದು ಮಾಡುತ್ತಿದೆ. ಈ ನಡುವೆ ಪೊಲೀಸರು ನಡೆಸಿದ ಪ್ರಾಥಮಿಕ ತನಿಖೆಯಲ್ಲಿ ಹಲವು ವಿಚಾರಗಳು ಬೆಳಕಿಗೆ ಬಂದಿದ್ದು, ಮೇಲ್ನೋಟಕ್ಕೆ ಆತ ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿದ್ದನೆಂದು ತಿಳಿದುಬಂದಿದೆ.

ಸಿವಿಲ್ ಲೈನ್ಸ್ ಬಳಿಯಿರುವ ತಮ್ಮ ನಿವಾಸದಲ್ಲಿ ಜನ್ ಸುನ್ವಿ ( ಜನ ಸಂದರ್ಶನ) ಕಾರ್ಯಕ್ರಮದ ವೇಳೆ ಸಿಎಂ ಮೇಲೆ ಹಲ್ಲೆ ನಡೆಸಿದ ವ್ಯಕ್ತಿಯನ್ನ 41 ವರ್ಷದ ರಾಜೇಶ್ ಭಾಯಿ ಖಿಮ್ಜಿ ಭಾಯಿ ಸಕರಿಯಾ ಎಂದು ಗುರುತಿಸಲಾಗಿದೆ. ಈತ ತಿಹಾರ್ ಜೈಲಿನಲ್ಲಿದ್ದ ತನ್ನ ಸಂಬಂಧಿಕರೊಬ್ಬರನ್ನ ಬಿಡುಗಡೆ ಮಾಡಿಸುವಂತೆ ಸಿಎಂಗೆ ಮನವಿ ಕೊಡಲು ಬಂದಿದ್ದ ಎನ್ನಲಾಗಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಗುಜರಾತ್‌ನ ರಾಜ್‌ಕೋಟ್ ನಿವಾಸಿಯಾಗಿರುವ ಸಕಾರಿಯಾ ಇಂದು ಬೆಳಗ್ಗೆ 7:30ಕ್ಕೆ ದೆಹಲಿ ಮುಖ್ಯಮಂತ್ರಿಗಳ ಕಚೇರಿ ಕೆಲಸಕ್ಕೆ ಬಂದಿದ್ದ. ತನ್ನ ಸಂಬಂಧಿಕರೊಬ್ಬರು ತಿಹಾರ್ ಜೈಲಿನಲ್ಲಿರುವುದರಿಂದ ಅವರನ್ನ ಬಿಡುಗಡೆ ಮಾಡಿಸುವಂತೆ ಮನವಿ ಮಾಡಲು ಬಂದಿದ್ದ. ನ್ಯಾಯಾಲಯಕ್ಕೆ ಸಂಬಂಧಪಟ್ಟ ದಾಖಲೆಯನ್ನೂ ತಂದಿದ್ದ. ಮನವಿ ಕೊಡಲು ಬಂದಾಗ ಕೂಡಾಗಿ ಏಕಾಏಕಿ ಹಲ್ಲೆ ಮಾಡಿದ್ದಾನೆ ಎಂದು ತಿಳಿದುಬಂದಿದೆ. ಮಾನಸಿಕ ಅಸ್ವಸ್ಥನೆಂಬ ಶಂಕೆ ಈ ಬೆನ್ನಲ್ಲೇ ಸಕಾರಿಯಾ ತಾಯಿಯನ್ನ ರಾಜ್‌ಕೋಟ್ ಪೊಲೀಸರು ವಿಚಾರಣೆ ನಡೆಸಿದ್ದು, ಮೇಲ್ನೋಟಕ್ಕೆ ಆತ ಮಾನಸಿಕ ಅಸ್ವಸ್ಥತೆಯಿಂದ ಬಳಲುತ್ತಿದ್ದನೆಂದು ಕಂಡುಬಂದಿದೆ.

# ಕೃಷ್ಣಾ ಪಾತ್ರದ ಹಳ್ಳಿಗಳತ್ತ ಹಿನ್ನೀರು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.20–ನಾರಾಯಣಪುರ ಜಲಾಶಯದ ಹಿನ್ನೀರು ನಿಧಾನವಾಗಿ ಕೃಷ್ಣಾ ನದಿ ಪಾತ್ರದ ಬಾಗಲಕೋಟೆ ತಾಲೂಕಿನ ಹಳ್ಳಿಗಳ ಜಮೀನುಗಳತ್ತ ನುಗ್ಗಲು ಪ್ರಾರಂಭಿಸಿದೆ.

ಬೊಮ್ಮಣಗಿ ಹಾಗೂ ಚಿಕ್ಕಮ್ಯಾಗೇರಿ ಗ್ರಾಮಗಳ ನದಿ ಪಾತ್ರದಲ್ಲಿನ ಕಬ್ಬಿನ ಬೆಳೆಗಳಲ್ಲಿ ನೀರು ಕಾಣಿಸಿಕೊಂಡಿದ್ದು, ಆಲಮಟ್ಟಿ ಜಲಾಶಯದಿಂದ ಹರಿಬಿಡಲಾಗುವ ನೀರಿನ ಪ್ರಮಾಣ ಹೆಚ್ಚಾದಲ್ಲಿ ನಾರಾಯಣಪುರ ಜಲಾಶಯದ ಹಿನ್ನೀರು ಇನ್ನಷ್ಟು ಹೆಚ್ಚು ಪ್ರಮಾಣದಲ್ಲಿ ವ್ಯಾಪಿಸಿ ನದಿ ಪಾತ್ರದ ಹಳ್ಳಿಗಳ ಜಮೀನುಗಳಿಗೆ ನುಗ್ಗಲಿದೆ. ಈ ಸಮಯದಲ್ಲಿ ಕಂದಾಯ ಇಲಾಖೆ ನದಿ ಪಾತ್ರದ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದ್ದು, ನದಿಗಳತ್ತ ದನಕರುಗಳನ್ನು ಮೇಯಿಸಲು ಹೋಗದಂತೆ ಸೂಚಿಸಿದೆ. ಬುಧವಾರ ರಾಂಪುರ ಉಪ ತಹಸೀಲ್ದಾರ ಕಚೇರಿಯ ಕಂದಾಯ ನಿರೀಕ್ಷಕ ಜಯಪ್ರಕಾಶ ಅಳವಂಡಿ, ಗ್ರಾಮ ಆಡಳಿತಾಧಿಕಾರಿ ಪ್ರೇಮಕುಮಾರ ಬಂಡಿವಡ್ಡರ, ಸಿಬ್ಬಂದಿ ಜಹಾಂಗೀರ ವಾಲೀಕಾರ, ಬಂದೇನವಾಜ ವಾಲೀಕಾರ, ರಮ್‌ಜಾನ್ ವಾಲೀಕಾರ ಚಿಕ್ಕಮ್ಯಾಗೇರಿ, ಬೊಮ್ಮಣಗಿ ಭಾಗದ ಹಿನ್ನೀರಿನ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.